ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೦೬**

**ಒಟ್ಟು ಪ್ರಶ್ನೆಗಳು – ೧೩೪**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೇಳನೇ ಅಧಿವೇಶನ

**ಮಂಗಳವಾರ, ದಿನಾಂಕ : ೧೦ನೇ ಫೆಬ್ರವರಿ, ೨೦೧೫**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

## ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿ. (ಹೆಸ್ಕಾಂ, ಹುಬ್ಬಳ್ಳಿ) ಹುಬ್ಬಳ್ಳಿ ಇವರು ಗ್ರಾಹಕರಿಗೆ ಹೆಚ್ಚುವರಿ ಸುರಕ್ಷತಾ ಠೇವಣಿ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೬೧೧ (೬೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ಹುಬ್ಬಳ್ಳಿ ಇವರು ದಿನಾಂಕ ೧೮–೧೨–೨೦೧೪ ರಂದು ಎಲ್ಲಾ ಗ್ರಾಹಕರಿಗೆ ಹೆಚ್ಚುವರಿ ಸುರಕ್ಷತಾ ಠೇವಣಿ (ಎ.ಎಸ್.ಡಿ.) ಯನ್ನು "ಗ್ರಾಹಕರಿಗೆ ಸುರಕ್ಷತಾ ಠೇವಣಿ" ಎಂದು ನಿಗದಿಪಡಿಸಿದ್ದು, ನಿಜವೇ; ನಿಜವಿದ್ದಲ್ಲಿ ಕಾರಣಗಳೇನು ;

(ಆ) ಗೃಹ ಬಳಕೆಯ ಕುರಿತು ಹೊಂದಿರುವ ವಿದ್ಯುತ್ ಸಂಪರ್ಕಕ್ಕೆ ೩೦ ದಿನಗಳೊಳಗಾಗಿ ಪಾವತಿಸದಿದ್ದಲ್ಲಿ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವುದಾಗಿ ತಿಳಿಸಿರುವುದು ನಿಜವೇ ; ಹಾಗಿದ್ದರೆ ಕಾರಣಗಳೇನು ;

(ಇ) ಗ್ರಾಹಕರಿಂದ ಯಾವುದೇ ಆಕ್ಷೇಪಣೆಯನ್ನು ಪಡೆಯದೇ ನೇರವಾಗಿ ಕಂಪನಿಯವರು ಹೆಚ್ಚುವರಿ ಹಣವನ್ನು ನಿಗದಿಪಡಿಸಿ ಪಾವತಿಸಲು ಸೂಚಿಸಿರುವುದು ಎಷ್ಟರಮಟ್ಟಿಗೆ ಸರಿ; ಯಾವ ಕಾರಣಕ್ಕಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ;

(ಈ) ರಾಜ್ಯದ ಎಲ್ಲ ಕಡೆಗೆ ಹೆಚ್ಚು ಬೀದಿ ದೀಪಗಳು, ಸರ್ಕಾರಿ ಕಚೇರಿಗಳಲ್ಲಿನ ದೀಪಗಳಿಂದ ಸಾಕಷ್ಟು ವಿದ್ಯುತ್ ಪೋಲಾಗುತ್ತಿದ್ದರು ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳದೆ ಗ್ರಾಹಕರ ಮೇಲೆ ಈ ರೀತಿ ಗದಾ ಪ್ರಹಾರ ಮಾಡುವುದನ್ನು ನಿಲ್ಲಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?



## ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೨ (೬೩೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರುಗಳು ವಿದ್ಯುತ್ ಕೊರತೆಯಿಂದಾಗಿ ನೀರಾವರಿ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ರೈತ ಬಾಂಧವರಿಗೆ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸುವ ಮೂಲಕ ಅವರ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರವು ಕ್ರಮಗಳನ್ನು ಕೈಗೊಳ್ಳುವುದೆ ;

(ಇ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಈ ಸೌರಶಕ್ತಿ ಸೌಲಭ್ಯಗಳನ್ನು ಯಾವಾಗ ಒದಗಿಸಲಾಗುವುದು ?

## ಬೆಳಗಾವಿಯಲ್ಲಿ ಗಾಜಿನಮನೆ ಸ್ಥಾಪಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೩ (೬೩೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದಲ್ಲಿ ಪುಷ್ಪೋದ್ಯಮವನ್ನು ಪ್ರೋತ್ಸಾಹಿಸುವಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಆ) ಬೆಳಗಾವಿಯಲ್ಲಿ ಲಾಲ್‌ಬಾಗ್ ಮಾದರಿಯ ಗಾಜಿನಮನೆ ನಿರ್ಮಿಸಿ ನಿಯತಕಾಲಿಕವಾಗಿ ತೋಟಗಾರಿಕೆ ಪ್ರದರ್ಶನಗಳನ್ನು ಏರ್ಪಡಿಸಲಾಗುವುದೆ ;

(ಇ) ತೋಟಗಾರಿಕೆ ಭೂಮಿ ಫಲವತ್ತತೆ ಹೆಚ್ಚಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ?

## ಉತ್ತರ ಕರ್ನಾಟಕದ ರೈತರು ತೋಟಗಾರಿಕೆಯಲ್ಲಿ ಹಿಂದುಳಿದಿರುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೪ (೬೩೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ರೈತರು ತೋಟಗಾರಿಕೆಯಲ್ಲಿ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರೈತರಿಗೆ ಭೂಮಿಯ ಫಲವತ್ತತೆಯ ಹೆಚ್ಚಳ, ಸೂಕ್ಷ್ಮ ನೀರಾವರಿ, ಸಾವಯುವ ಗೊಬ್ಬರದ ಉಪಯುಕ್ತತೆ, ಆಧುನಿಕ ಯಂತ್ರಗಳ ಉಪಯೋಗ ಮತ್ತು ಆಧುನಿಕ ಪುಷ್ಪೋದ್ಯಮ ಕುರಿತು ತರಬೇತಿ ಕಾರ್ಯಾಗಾರಗಳನ್ನು ಏರ್ಪಡಿಸಲಾಗುವುದೇ;

(ಇ) ತೋಟಗಾರಿಕೆ ಉತ್ಪನ್ನಗಳ ಶೇಖರಣೆ, ಸಂಸ್ಕರಣೆ ಮತ್ತು ನಿರ್ವಹಣೆ ಬಗ್ಗೆ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ?

## ಸೋಲಾರ್ ಮನೆ ಕಾರ್ಯಕ್ರಮ ರೂಪಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೫ (೬೩೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇಂಧನಕ್ಕಾಗಿ ನಿರಂತರವಾಗಿ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ನವೀಕರಿಸಬಹುದಾದ ಇಂಧನ ಮೂಲಗಳಿಂದ ಹೆಚ್ಚಿನ ವಿದ್ಯುತ್ ಉತ್ಪಾದಿಸುವುದು ಸೂಕ್ತವಲ್ಲವೇ;



(ಆ) ಹಾಗಿದ್ದಲ್ಲಿ, ಪ್ರತಿ ಮನೆ "ಸೋಲಾರ್ ಮನೆ" ಎಂಬ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದೇ;

(ಇ) ಪ್ರತಿಯೊಂದು ಸರ್ಕಾರಿ ಕಛೇರಿ, ಶಾಲೆ, ಕಾಲೇಜು ಮತ್ತು ಆಸ್ಪತ್ರೆ ಕಟ್ಟಡಗಳನ್ನು ಸೋಲಾರ್ ವಿದ್ಯುತ್ ಉತ್ಪಾದನೆಗಾಗಿ ಸದ್ವಿನಿಯೋಗಪಡಿಸಿಕೊಳ್ಳಲು ಸರ್ಕಾರವು ಯೋಜನೆಗಳು ರೂಪಿಸುವುದೇ?

## ಶೀಘ್ರ ವಿದ್ಯುತ್ ಸಂಪರ್ಕ ಯೋಜನೆ

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೬ (೬೩೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ರೈತರು ನಿರಂತರ ವಿದ್ಯುತ್ ಸರಬರಾಜು ಇಲ್ಲದೆಯೇ ತೀವ್ರ ತೊಂದರೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರವು ಈ ಬಗ್ಗೆ ಕೈಗೊಳ್ಳುತ್ತಿರುವ ಪರಿಹಾರ ಕ್ರಮಗಳೇನು ;

(ಆ) ರೈತರಿಗಾಗಿ ಶೀಘ್ರ ವಿದ್ಯುತ್ ಸಂಪರ್ಕ ಯೋಜನೆಯನ್ನು ರೂಪಿಸಲಾಗಿದೆಯೇ ; ಹಾಗಿದ್ದಲ್ಲಿ ವಿವರಗಳನ್ನು ನೀಡುವುದು;

(ಇ) ರೈತರ ವಿದ್ಯುತ್ ಸಮಸ್ಯೆಗಳ ಬಗ್ಗೆ ಜನಸಂಪರ್ಕ ಸಭೆ ನಡೆಸಲಾಗುತ್ತಿದೆಯೇ ;

(ಈ) ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಸ್ಥಾಪಿಸುವಲ್ಲಿ ಯಾವ ಕ್ರಮವನ್ನು ಅನುಸರಿಸಲಾಗುತ್ತಿದೆ; ಕಳೆದ ವರ್ಷದಲ್ಲಿ ಎಷ್ಟು ಟ್ರಾನ್ಸ್‌ಫಾರ್ಮರ್‌ಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಅಳವಡಿಸಲಾಗಿದೆ ;

(ಉ) ಟ್ರಾನ್ಸ್‌ಫಾರ್ಮರ್‌ಗಳ ಹಂಚಿಕೆ ಮಾಡುವಲ್ಲಿ ಉಂಟಾಗುತ್ತಿರುವ ತಾರತಮ್ಯ ಮತ್ತು ಭ್ರಷ್ಟಾಚಾರ ತಡೆಗಟ್ಟಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮವೇನು ? (ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯ ವಿವಿಧ ಯೋಜನೆಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೭ (೬೪೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷದಿಂದ ಇಲ್ಲಿಯವರೆಗೆ ಲೋಕೋಪಯೋಗಿ ಇಲಾಖೆ ವತಿಯ ವಿವಿಧ ಶೀರ್ಷಿಕೆಗಳ ಅಡಿಯಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಹಾವೇರಿ ಜಿಲ್ಲೆಗೆ ಬಿಡುಗಡೆಯಾದ ಹಣವೆಷ್ಟು; (ವರ್ಷವಾರು ಮತ್ತು ಶೀರ್ಷಿಕೆವಾರು ವಿವರ ನೀಡುವುದು)

(ಆ) ಈ ಜಿಲ್ಲೆಗೆ ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗೆ ವೆಚ್ಚ ಮಾಡಲಾಗಿದೆ; (ಕಾಮಗಾರಿವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ ಮುಕ್ತಾಯಗೊಂಡ ಕಾಮಗಾರಿಗಳಿಗೆ ಪಾವತಿಸಲಾದ ಬಿಲ್‌ಗಳ ಒಟ್ಟು ಮೊತ್ತವೆಷ್ಟು? (ವಿವರ ನೀಡುವುದು)



## ಗೋವಿನ ಜೋಳದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೮ (೬೪೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಗೋವಿನ ಜೋಳ ಬೆಳೆದಿದ್ದಾರೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಕಳೆದ ವರ್ಷ ಖರೀದಿಸಿದ ಗೋವಿನ ಜೋಳವೆಷ್ಟು; ಇದರ ಬಾಬ್ತು ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಕಳೆದ ವರ್ಷ ಗೋವಿನ ಜೋಳ ಖರೀದಿಯಲ್ಲಿ ಭಾರಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಬಂದಿದ್ದರೆ, ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ಒದಗಿಸುವುದು)

## ನಗರೋತ್ಥಾನ ಯೋಜನೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೯ (೬೪೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಪುರಸಭೆ, ಪಟ್ಟಣ ಪಂಚಾಯತ್ ಹಾಗೂ ನಗರಸಭೆಯಲ್ಲಿ ಹಮ್ಮಿಕೊಂಡಿರುವ ಯೋಜನೆಗಳು ಯಾವುವು; ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಸರ್ಕಾರದಿಂದ ಮಂಜೂರಾದ ಹಣದಿಂದ ಆಯಾ ಯೋಜನೆಗಳ ಅಡಿಯಲ್ಲಿ ಕಾಮಗಾರಿ ಪ್ರಾರಂಭವಾಗಿದೆಯೇ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಹಾಗಿದ್ದಲ್ಲಿ, ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೆ; ಯಾವಾಗ ಮುಕ್ತಾಯಗೊಳ್ಳುತ್ತವೆ;

(ಈ) ವಿಶೇಷವಾಗಿ ನಗರೋತ್ಥಾನ ಅಡಿಯಲ್ಲಿ ಕೆಲಸ ಪ್ರಾರಂಭವಾಗಿದೆಯೇ; ಆಗಿದ್ದರೆ, ಯಾವ ಹಂತದಲ್ಲಿದೆ ? (ಮಾಹಿತಿ ಒದಗಿಸುವುದು)



## ರಾಜ್ಯದ ವಿದ್ಯುತ್ ಉತ್ಪಾದನೆ ಕುಂಠಿತವಾಗಿರುವುದು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೦ (೬೩೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಕುಂಠಿತವಾಗಿರಲು ಕಾರಣಗಳೇನು ;

(ಆ) ಇದರಿಂದಾಗಿ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸರಬರಾಜಿನಿಂದ ವ್ಯತ್ಯಯ ಉಂಟಾಗಿ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ಅಳವಡಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಈ) ರೈತರು ಸೋಲಾರ್ ಪಂಪ್‌ಸೆಟ್‌ಗಳನ್ನು ಅಳವಡಿಸಲು/ಸದುಪಯೋಗ ಪಡೆಯಲು ಅನುಸರಿಸಬೇಕಾದ ಕ್ರಮಗಳೇನು?

## ಕೃಷಿ ಇಲಾಖೆಯಿಂದ ಒದಗಿಸಿರುವ ಮೂಲಭೂತ ಸೌಕರ್ಯಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೧ (೬೪೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಮಾರುಕಟ್ಟೆ ಇಲಾಖೆಯಿಂದ ಕೃಷಿ ಚಟುವಟಿಕೆಗಳಿಗೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮೀಸಲಿಟ್ಟಿರುವ

ಹಣ ಎಷ್ಟು ; (ಹಾವೇರಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಹಣವನ್ನು ವಿನಿಯೋಗಿಸಲು ಇಲಾಖೆ ರೂಪಿಸಿರುವ ನಿಯಮಗಳೇನು ?

## ಬೆಳಗಾವಿ ಜಿಲ್ಲೆಯ ನಗರಸಭೆಗಳಲ್ಲಿರುವ ಪೌರಕಾರ್ಮಿಕರ ವಿಚಾರ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೨ (೬೪೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ನಿಪ್ಪಾಣಿ ಮತ್ತು ಗೋಕಾಕ್ ನಗರಸಭೆಗಳಲ್ಲಿ ಪೌರ ಕಾರ್ಮಿಕರ ಕೊರತೆಯಿಂದಾಗಿ ಘನತ್ಯಾಜ್ಯ ವಿಲೇವಾರಿ ಆಗದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಈ ಕುರಿತು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಈ ಎರಡು ಪ್ರಮುಖ ನಗರಸಭೆಗಳಲ್ಲಿ ಒಟ್ಟು ಮಂಜೂರಾಗಿರುವ ಪೌರ ಕಾರ್ಮಿಕರ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಖಾಲಿ ಇರುವ ಪೌರ ಕಾರ್ಮಿಕರನ್ನು ಯಾವ ಕಾಲ ಮಿತಿಯಲ್ಲಿ ಭರ್ತಿ ಮಾಡಲಾಗುವುದು ;



(ಉ) ಘನತ್ಯಾಜ್ಯ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ ?

## ಬೆಳಗಾವಿ ಜಿಲ್ಲೆಯ ಪುರಸಭೆಗಳಲ್ಲಿ ಘನತ್ಯಾಜ್ಯ ವಿಲೇವಾರಿ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೩ (೬೪೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಬೈಲಹೊಂಗಲ, ಸೌದತ್ತಿ, ಚಿಕ್ಕೋಡಿ, ರಾಮದುರ್ಗ, ಸಂಕೇಶ್ವರ, ಮೂಡಲಗಿ, ಅಥಣಿ ಪುರಸಭೆಗಳಲ್ಲಿ ಪೌರ ಕಾರ್ಮಿಕರ ಕೊರತೆಯಿಂದಾಗಿ ಘನತ್ಯಾಜ್ಯ ವಿಲೇವಾರಿ ಆಗದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಈ ಕುರಿತು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಈ ಪುರಸಭೆಗಳಲ್ಲಿ ಒಟ್ಟು ಮಂಜೂರಾಗಿರುವ ಪೌರ ಕಾರ್ಮಿಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಖಾಲಿಯಿರುವ ಪೌರ ಕಾರ್ಮಿಕರನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಉ) ಘನತ್ಯಾಜ್ಯ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಸರ್ಕಾರವು ಯಾವ ಕ್ರಮ ಕೈಗೊಳ್ಳಲಿದೆ ?

## ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ಅಭ್ಯರ್ಥಿಗಳ I.A.S., K.A.S. ತರಬೇತಿ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೪ (೬೪೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಾದ I.A.S. ಮತ್ತು K.A.S. ಅಭ್ಯಸಿಸುವ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ನೀಡಲು ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು ; (ವಿವರ ನೀಡುವುದು)

(ಆ) ಇದಕ್ಕಾಗಿ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನ ಆಯವ್ಯಯದಲ್ಲಿ ಎಷ್ಟು ಅನುದಾನ ಒದಗಿಸಲಾಗಿದೆ ;

(ಇ) ಈ ಯೋಜನೆಯಡಿ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಎಷ್ಟು ಜನ ಅಭ್ಯರ್ಥಿಗಳು ತರಬೇತಿ ಪಡೆದಿರುತ್ತಾರೆ; ಹಾಗೂ ಎಷ್ಟು ಜನ ಅಭ್ಯರ್ಥಿಗಳು I.A.S. ಮತ್ತು K.A.S. ಸಾಧನೆ ಮಾಡಿರುತ್ತಾರೆ ;

(ಈ) ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ನೀಡಿರುವಂತೆ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೂ ಸಹ ತರಬೇತಿ ನೀಡುವ ವಿಚಾರ ಸರ್ಕಾರದ ಮುಂದಿದೆಯೇ; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳಾವುವು ? (ವಿವರ ಒದಗಿಸುವುದು)



## ೨೦೧೩–೧೪ನೇ ಸಾಲಿನ ರೈತರ ಕಬ್ಬಿನ ಬಾಕಿ ನೀಡುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೫ (೬೪೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ನೇ ಸಾಲಿನಲ್ಲಿ ರೈತರು ಬೆಳೆದ ಕಬ್ಬಿಗೆ ಸರ್ಕಾರವು ೨೫೦೦ ರೂ.ಗಳ ಬೆಲೆಯನ್ನು ಘೋಷಣೆ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೆ ಎಷ್ಟು ಕಾರ್ಖಾನೆಗಳು ಸರ್ಕಾರವು ನಿಗದಿಪಡಿಸಿದ ದರವನ್ನು ರೈತರಿಗೆ ಪಾವತಿ ಮಾಡಿರುತ್ತವೆ ; (ಕಾರ್ಖಾನೆವಾರು ವಿವರ ನೀಡುವುದು)

(ಇ) ರೈತರ ಖಾತೆಗಳಿಗೆ ಪಾವತಿ ಮಾಡಬೇಕಾಗಿರುವ ಬಾಕಿ ಬಿಲ್ಲಿನ ಮೊತ್ತ ಎಷ್ಟು ; (ಕಾರ್ಖಾನೆಯವರು ವಿವರ ನೀಡುವುದು)

(ಈ) ಪಾವತಿ ಮಾಡಬೇಕಾಗಿರುವ ಬಾಕಿ ಬಿಲ್ಲನ್ನು ಕಾರ್ಖಾನೆಗಳಿಂದ ಯಾವ ಕಾಲ ಮಿತಿಯಲ್ಲಿ ರೈತರ ಖಾತೆಗಳಿಗೆ ಜಮಾ ಮಾಡಲಾಗುವುದು ?

## ಕರ್ನಾಟಕ ಸೌಹಾರ್ದ ಸಹಕಾರ ಕಾಯ್ದೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೬ (೬೬೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸೌಹಾರ್ದ ಸಹಕಾರ ಕಾಯ್ದೆ ಜಾರಿಗೆ ಬಂದ ಸಂದರ್ಭದಲ್ಲಿ ಸಂಯುಕ್ತ ಸಹಕಾರಿಗೆ ನೀಡಿರುವ ಅಧಿಕಾರಗಳು ಯಾವುವು ;

(ಆ) ಆ ಅಧಿಕಾರಗಳನ್ನು ನೀಡಲು ಕಾರಣಗಳೇನು ?

## ಕೃಷ್ಣ ನದಿಗೆ ಅಡ್ಡಲಾಗಿ ಸೇತುವೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೭ (೬೪೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಜಂಬಗಿ ಗ್ರಾಮದ ಹತ್ತಿರವಿರುವ ಕೃಷ್ಣಾ ನದಿಗೆ ಅಡ್ಡಲಾಗಿ ನಿರ್ಮಿಸುತ್ತಿರುವ ಸೇತುವೆ ಕಾಮಗಾರಿಯು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು; ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಆ) ಸದರಿ ಸೇತುವೆ ಮೂಲಕ ಹಾಯ್ದು ಜಮಖಂಡಿಯಿಂದ ಸಾವಳಗಿಗೆ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ನಗರ ಸ್ಥಳೀಯ ಸಂಸ್ಥೆಗಳು ಮತ್ತು ಪಂಚಾಯತ್ ಸಂಸ್ಥೆಗಳ ವಿದ್ಯುತ್ ಬಾಕಿ ಮನ್ನಾ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೮ (೬೫೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳು, ಪಂಚಾಯತಿಗಳು ವಿದ್ಯುತ್ ಪೂರೈಕೆ ಬಾಬ್ತು ವಿದ್ಯುತ್ ಸರಬರಾಜು ಕಂಪನಿಗಳಿಗೆ ನೀಡಬೇಕಾಗಿರುವ ಬಾಕಿ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)



(ಆ) ಈ ಸ್ಥಳೀಯ ಸಂಸ್ಥೆಗಳ ಹಣಕಾಸು ದೃಷ್ಟಿಯಿಂದ ಈ ವಿದ್ಯುತ್ ಪೂರೈಕೆ ಬಾಕಿಯನ್ನು ಒಂದು ಬಾರಿಗೆ (ಒನ್ ಟೈಮ್) ಮನ್ನಾ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

(ಇ) ಕನಿಷ್ಠ ಪಕ್ಷ ಗ್ರಾಮಪಂಚಾಯತಿ ಸಂಸ್ಥೆಗಳಿಗಾದರೂ ಈ ವಿದ್ಯುತ್ ಬಾಕಿಯನ್ನು ಮನ್ನಾ ಮಾಡುವ ಮೂಲಕ ಅವು ಆರ್ಥಿಕವಾಗಿ ಸಬಲತೆಯನ್ನು ಹೊಂದಲು ಅವಕಾಶ ಕಲ್ಪಿಸಲಾಗುವುದೇ?

## ಸಿಂಡಿಕೇಟ್ ಬ್ಯಾಂಕ್ ಗೃಹ ನಿರ್ಮಾಣ ಸಹಕಾರ ಸಂಘದ ಬಡಾವಣೆಯ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೯ (೬೫೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದ ಹೇರೋಹಳ್ಳಿ ವಾರ್ಡ್‌ನಲ್ಲಿರುವ ಸಿಂಡಿಕೇಟ್ ಬ್ಯಾಂಕ್ ನೌಕರರ ಗೃಹನಿರ್ಮಾಣ ಸಹಕಾರ ಸಂಘದ ಬಡಾವಣೆಯಲ್ಲಿ ದಿನಾಂಕ:೧೯.೦೪.೧೯೭ರಂದು ಅಂದಿನ ಹೇರೋಹಳ್ಳಿ ಗ್ರಾಮ ಪಂಚಾಯತಿಯಿಂದ ಅನುಮೋದಿತವಾದ ನಕ್ಷೆಯಂತೆ ರಚಿಸಲಾಗಿರುವ ವಿವಿಧ ಅಳತೆಯ ನಿವೇಶನಗಳ ಸಂಖ್ಯೆ ಎಷ್ಟು; (ಪ್ರತಿಯೊಂದು ಅಳತೆಯ ನಿವೇಶನಗಳ ಸಂಖ್ಯೆ ವಿವರಗಳನ್ನು ಒದಗಿಸುವುದು)

(ಆ) ಈ ಬಡಾವಣೆಯಲ್ಲಿರುವ ನಾಗರೀಕ ಸೌಲಭ್ಯದ ನಿವೇಶನಗಳನ್ನು (ಸಿವಿಕ್ ಅಮೆನಿಟಿ) ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರ ಮಾಡಲಾಗಿದೆಯೇ;

(ಇ) ಹಂಚಿಕೆ ಮಾಡಲು ಬಾಕಿ ಉಳಿದಿರುವ ನಿವೇಶನಗಳು ಯಾವುದಾದರೂ ಇವೆಯೇ; ಮನೆಗಳನ್ನು ನಿರ್ಮಿಸಲು ನಕ್ಷೆಯ ಮಂಜೂರಾತಿಯನ್ನು ಬೆಂಗಳೂರು ಮಹಾನಗರ ಪಾಲಿಕೆಯಿಂದ ಪಡೆಯಲು ಅವಕಾಶ ಇದೆಯೇ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ತಂಬಾಕು ಬೆಳೆಗಾರರ ಸಮಸ್ಯೆಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೦ (೬೫೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ತಂಬಾಕು ಬೆಳೆಯುವ ವಿಸ್ತೀರ್ಣ ಎಷ್ಟು ; ವಾರ್ಷಿಕ ತಂಬಾಕು ಉತ್ಪನ್ನದ ಪ್ರಮಾಣ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ನಿಗದಿತ ವಿಸ್ತೀರ್ಣ ನಿಗದಿತ ಪ್ರಮಾಣದ ತಂಬಾಕು ಬೆಳೆಯಬೇಕೆಂದು ಗುರಿ ನಿಗದಿಪಡಿಸಿ ಕಡಿಮೆ ಬೆಳೆದರೆ ಪರವಾನಗಿ ರದ್ದು, ಹೆಚ್ಚು ಬೆಳೆದರೆ ದಂಡ ಎಂದು ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇತ್ತೀಚೆಗೆ ಸಾಲ ಬಾಧೆ ತಾಳದೆ ತಂಬಾಕು ಬೆಳೆಗಾರರು ಆತ್ಮಹತ್ಯೆ ದಾರಿ ಹಿಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ತಂಬಾಕು ಬೆಳೆಗಾರರ ಸಮಸ್ಯೆಗಳೇನು ; ಅವುಗಳನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಕ್ಕೆ ಪರಿಹಾರ ನೀಡಲಾಗಿದೆಯೇ?



## ನಂಜನಗೂಡು ಚಾಮರಾಜನಗರ ಸಿ.ಎಂ.ಸಿ. ಗಳಲ್ಲಿ ಉದ್ಯಾನವನಗಳ ನಿರ್ವಹಣೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)**
**(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೧ (೬೫೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸುಪ್ರಸಿದ್ಧ ಯಾತ್ರಾಸ್ಥಳವಾದ ನಂಜನಗೂಡಿನಲ್ಲಿ ಲಾಲ್‌ಬಾಗ್ ಮಾದರಿಯಲ್ಲಿ ಸಸ್ಯಕಾಶಿ ನಿರ್ಮಿಸಲು ಸ್ಥಳ ಗುರುತಿಸಲಾಗಿದೆಯೇ; ಇದರ ವಿಸ್ತೀರ್ಣ ಮತ್ತು ಚೆಕ್ಕುಬಂದಿಗಳೇನು ; (ವಿವರ ಒದಗಿಸುವುದು)

(ಆ) ಈ ಸಸ್ಯಕಾಶಿ ನಿರ್ಮಾಣಕ್ಕೆ ಮಂಜೂರು ಮಾಡಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಈ ಸಸ್ಯಕಾಶಿ ನಿರ್ಮಾಣ ಕಾರ್ಯವನ್ನು ಆರಂಭಿಸುವುದು ಯಾವಾಗ ;

(ಇ) ಚಾಮರಾಜನಗರದಲ್ಲಿನ ಸಾರ್ವಜನಿಕ ಉದ್ಯಾನವನಗಳು ಯಾವುವು; ಈ ಉದ್ಯಾನವನಗಳನ್ನು ಸೂಕ್ತವಾಗಿ ನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ಸಾಲಿನಲ್ಲಿ ಈ ಉದ್ಯಾನವನಗಳ ನಿರ್ವಹಣೆಗೆ ಮಾಡಿರುವ ವೆಚ್ಚ ಎಷ್ಟು ?

## ಬೀದರ್ ಸ್ಥಳೀಯ ಸಂಸ್ಥೆಗಳಿಗೆ ನೀಡಲಾದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೨ (೬೫೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಂಯುಲ್ಲಿರುವ ಸಿ.ಎಂ.ಸಿ., ಟಿ.ಎಂ.ಸಿ. ಹಾಗೂ ಟಿ.ಪಿ.ಎಸ್.ಗಳಿಗೆ

(1) 13th FINANCE (GENERAL PERFORMANCE GRANT)

(2) 13th FINANCE (GENERAL BASIEGRANT) STATE FINANCE COMMISSION (SFC-GRANT) ಹಾಗೂ ಇನ್ನಿತರ ಯಾವ ಯಾವ ಲೆಕ್ಕ ಶೀರ್ಷಿಕೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ; (ಕಳೆದ ೨೦೧೨ ರಿಂದ ೨೦೧೫ನೇ ಸಾಲಿನವರೆಗೆ ಬಿಡುಗಡೆ ಮಾಡಿದ ಮೊತ್ತದ ಮಾಹಿತಿಯನ್ನು ವಾರ್ಡ್‌ವಾರು, ವರ್ಷವಾರು ನೀಡುವುದು)

(ಆ) ಸದರಿ ಯೋಜನೆಯಡಿಯಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು; ಅದಕ್ಕೆ ತಗಲಿದ ವೆಚ್ಚವೆಷ್ಟು ; ಪೂರ್ಣಗೊಂಡ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು;



(ವಿವರ ನೀಡುವುದು) ಅಪೂರ್ಣಗೊಂಡಿರುವುದಕ್ಕೆ ಕಾರಣಗಳೇನು; (ವಾರ್ಡ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪೂರ್ಣಗೊಂಡಿರುವ ಕಾಮಗಾರಿಗಳ ಅಂದಾಜು ಪಟ್ಟಿ, ಅಳತೆ ಪುಸ್ತಕದ ಪ್ರತಿ, ಬಿಲ್ಲಿನ ಪ್ರತಿ ಹಾಗೂ ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರರ ಹೆಸರು, ಕಾಮಗಾರಿವಾರು ತಗಲಿದ ವೆಚ್ಚ ಅಂಕಿ ಅಂಶಗಳೊಂದಿಗೆ ಸಂಸ್ಥೆಗಳವಾರು, ವರ್ಷವಾರು ಮಾಹಿತಿ ನೀಡುವುದು ?

## ಬೀದರ್ ಜಿಲ್ಲೆಯಲ್ಲಿ ಕೃಷಿ ಹೊಂಡವನ್ನು ತೆಗೆಯುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೩ (೬೫೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕೃಷಿ ಹೊಂಡವನ್ನು ರೈತರ ಸಹಭಾಗಿತ್ವದಲ್ಲಿ ತೆಗೆಯಲು ಪ್ರಾರಂಭಿಸಲಾಗಿದ್ದು ಯಾವಾಗ ;

(ಆ) ಸದರಿ ಕಾಮಗಾರಿಗೆ ಬಿಡುಗಡೆ ಮಾಡಿದ ಮೊತ್ತ ಎಷ್ಟು; ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕೆಲವು ಅಸಮರ್ಪಕ ಕಾಮಗಾರಿಗಳ ಬಗ್ಗೆ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬೀದರ್ ಜಿಲ್ಲೆಯಲ್ಲಿ ಪ್ರಾರಂಭದಿಂದ ಇಲ್ಲಿಯವರೆಗೆ ಎಷ್ಟು ಕೃಷಿ ಹೊಂಡ ತೆಗೆಯಲಾಗಿದೆ ;

(ಈ) ಕೃಷಿ ಹೊಂಡ ತೆಗೆದ ರೈತರ ಹೆಸರು, ದಿನಾಂಕ ಹಾಗೂ ಅದರ ವಿಸ್ತೀರ್ಣ ಹಾಗೂ ತಗುಲಿದ ವೆಚ್ಚದ ಬಗ್ಗೆ ಮಾಹಿತಿ ನೀಡುವುದು ;

(ಉ) ಆ ಕಾಮಗಾರಿಗಳನ್ನು ಗುತ್ತಿಗೆ ನೀಡಿದ್ದಲ್ಲಿ ಗುತ್ತಿಗೆದಾರರ ಹೆಸರು ಸಂಪೂರ್ಣ ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು ?

## ರಾಜ್ಯದಲ್ಲಿ ತೊಗರಿ ಬೆಳೆಗೆ ಪರಿಹಾರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೩೪ (೬೫೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೊಗರಿ ಬೆಳೆಯುವ ಒಟ್ಟು ಪ್ರದೇಶವೆಷ್ಟು ; (ಜಿಲ್ಲಾವಾರು ಸಂಪೂರ್ಣ ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು)

(ಆ) ಈ ಬಾರಿ ಸುರಿದ ಮಳೆಯಿಂದಾಗಿ ತೊಗರಿ ಕಾಯಿಗೆ ರೋಗ ಬಂದಿರುವುದರಿಂದ ರೈತರಿಗೆ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ರೋಗಕ್ಕೆ ಈಡಾಗಿರುವ ಒಟ್ಟು ತೊಗರಿ ಪ್ರದೇಶ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ತೊಗರಿ ಕಾಯಿಗೆ ರೋಗ ಬಂದಿರುವ ಹಿನ್ನೆಲೆಯಲ್ಲಿ ತೊಗರಿ ಬೆಳೆಗಾರರಿಗೆ ಸರ್ಕಾರ ನೀಡಿರುವ ಪರಿಹಾರದ ಮೊತ್ತವೆಷ್ಟು ? (ಮಾಹಿತಿ ನೀಡುವುದು)



## ನಕಲಿ ರಸಗೊಬ್ಬರ ಮಾರಾಟದ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೩೫ (೬೬೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಕಲಿ ರಸಗೊಬ್ಬರ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಕಲಿ ರಸಗೊಬ್ಬರ ಮಾರಾಟದ ಜಾಲವನ್ನು ಪತ್ತೆ ಮಾಡಲಾಗಿದೆಯೇ ;

(ಇ) ಇದರಿಂದ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆಯೇ ; ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೬ (೬೬೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಚಿಕ್ಕಮಗಳೂರು ಜಿಲ್ಲೆ ಲೋಕೋಪಯೋಗಿ ಇಲಾಖೆಗೆ ಯಾವ ಯಾವ ಶೀರ್ಷಿಕೆಯಡಿಯಲ್ಲಿ ಎಷ್ಟೆಷ್ಟು ಹಣ ಬಂದಿದೆ ; (ಕಳೆದ ೩ ವರ್ಷಗಳ ವಿವರಗಳನ್ನು ನೀಡುವುದು)

(ಆ) ಯಾವ್ಯಾವ ಶೀರ್ಷಿಕೆಯಡಿಯಲ್ಲಿ ಎಷ್ಟೆಷ್ಟು ಹಣವನ್ನು ಹಂಚಿಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರವನ್ನು ನೀಡುವುದು)

(ಇ) ಆ ಹಣವನ್ನು ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ ;

(ಈ) ಆ ಕಾಮಗಾರಿಗಳು ಪೂರ್ಣವಾಗಿವೆಯೇ ಅಥವಾ ಇಲ್ಲವೇ ? (ಸಂಪೂರ್ಣ ವಿವರ ನೀಡುವುದು)

## ಲೆಕ್ಕ ಪರಿಶೋಧನೆಯಾದ ಸಹಕಾರ ಸಂಸ್ಥೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೭ (೬೬೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦–೧೧ ರಿಂದ ೨೦೧೨–೨೦೧೩ನೇ ಸಾಲಿನಲ್ಲಿ ಲೆಕ್ಕ ಪರಿಶೋಧನೆ ಇಲಾಖೆಯ ಲೆಕ್ಕಪರಿಶೋಧಕರಿಂದ ಲೆಕ್ಕ ಪರಿಶೋಧನೆಯಾದ ಸಹಕಾರ ಸಂಸ್ಥೆಗಳ ಸಂಖ್ಯೆ ಎಷ್ಟು; ಈ ಸಾಲುಗಳಲ್ಲಿ ಕಂಡು ಬಂದ ಹಣ ದುರುಪಯೋಗದ ಮೊತ್ತ ಎಷ್ಟು ;

(ಆ) ಸಹಕಾರ ಕಾಯ್ದೆ ತಿದ್ದುಪಡಿಯಾದ ನಂತರ ೨೦೧೩–೨೦೧೪ ಹಾಗೂ ೨೦೧೪–೨೦೧೫ನೇ ಸಾಲಿನಲ್ಲಿ ಸನ್ನದ್ದು ಲೆಕ್ಕ ಪರಿಶೋಧಕರಿಂದ ಲೆಕ್ಕ ಪರಿಶೋಧನೆಯಾದ ಸಹಕಾರ ಸಂಸ್ಥೆಗಳ ಸಂಖ್ಯೆ ಎಷ್ಟು; ಈ ಸಂಸ್ಥೆಗಳಲ್ಲಿ ಕಂಡು ಹಿಡಿಯಲಾದ ಹಣ ದುರುಪಯೋಗದ ಮೊಬಲಗು ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಾರ್ಯನಿರತ ಸಹಕಾರ ಸಂಘಗಳು ಎಷ್ಟು; ಈ ಎಲ್ಲಾ ಕಾರ್ಯನಿರತ ಸಹಕಾರ ಸಂಘಗಳ ಲೆಕ್ಕಪರಿಶೋಧನೆ ಪೂರ್ಣಗೊಂಡಿದೆಯೇ; ಪೂರ್ಣಗೊಳಿಸಲು ವಿಫಲವಾಗಿದ್ದಲ್ಲಿ ಕಾರಣಗಳೇನು ?



## ಶಿವಮೊಗ್ಗ ಮತ್ತು ಕೋಲಾರ ಡಿ.ಸಿ.ಸಿ ಬ್ಯಾಂಕ್ ಹಣ ದುರ್ಬಳಕೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೮ (೬೬೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಮತ್ತು ಕೋಲಾರ ಡಿ.ಸಿ.ಸಿ. ಬ್ಯಾಂಕಿನಲ್ಲಿ ಅಪಾರ ಪ್ರಮಾಣದ ಹಣವನ್ನು ಕಾರಣವಿಲ್ಲದೇ ಚಾಲ್ತಿ ಖಾತೆಯಿಂದ ಡ್ರಾ ಮಾಡಿ ದುರ್ಬಳಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ನಡೆಯುತ್ತಿರುವ ವಿಚಾರಣೆ ಯಾವ ಹಂತದಲ್ಲಿದೆ ;

(ಇ) ಬ್ಯಾಂಕಿಗೆ ನಷ್ಟವಾಗಿರುವ ಮೊತ್ತವನ್ನು ವಸೂಲಿ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಲೆಕ್ಕ ಪರಿಶೋಧಕರ ನೇಮಕ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೯ (೬೬೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ತಿದ್ದುಪಡಿ ಕಾಯಿದೆಯ ಪ್ರಕಾರ ಸಹಕಾರ ಲೆಕ್ಕ ಪರಿಶೋಧನಾ ಇಲಾಖೆಯ ಲೆಕ್ಕ ಪರಿಶೋಧಕರನ್ನು ಸಹಕಾರ ಸಂಸ್ಥೆಗಳೇ ಲೆಕ್ಕ ಪರಿಶೋಧನೆಗಾಗಿ ನೇಮಕ ಮಾಡಿಕೊಳ್ಳುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಸದರಿ ನೌಕರರು ನಿರ್ಭೀತಿಯಿಂದ ಮತ್ತು ಪಾರದರ್ಶಕವಾಗಿ ಲೆಕ್ಕ ಪರಿಶೋಧನೆ ಕೆಲಸ ನಿರ್ವಹಿಸಲು ಸಾಧ್ಯವಿದೆಯೇ; ಈ ರೀತಿಯ ಕ್ರಮದಿಂದ ಸಹಕಾರ ಲೆಕ್ಕ ಪರಿಶೋಧನಾ ಇಲಾಖೆಯಲ್ಲಿ ಅಧಿಕಾರಿಗಳಿಗೆ ಜವಾಬ್ದಾರಿ ಇಲ್ಲದಂತಾಗಿದ್ದು, ಒಂದು ರೀತಿಯ ಗೊಂದಲ ಸಹಕಾರಿ ವ್ಯವಸ್ಥೆಯಲ್ಲಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸಂವಿಧಾನದ ೯೭ನೇ ತಿದ್ದುಪಡಿಯನ್ವಯ ಇತರೆ ರಾಜ್ಯಗಳಲ್ಲಿ ಯಾವುದೇ ಕ್ರಮ ವಹಿಸದಿದ್ದರೂ ಕರ್ನಾಟಕ ರಾಜ್ಯದಲ್ಲಿ ಮಾತ್ರ ತಿದ್ದುಪಡಿ ಮಾಡಿ ರಾಜ್ಯದ ಸಹಕಾರ ಸಂಸ್ಥೆಗಳ ಲೆಕ್ಕ ಪರಿಶೋಧನೆಯನ್ನು ಪರಿಣಾಮಕಾರಿಯಾಗಿ ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ರಾಜ್ಯದ ಟೋಲ್ ರಸ್ತೆಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೬೪೦ (೭೮೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯಾದ್ಯಂತ ಒಟ್ಟು ಇರುವ ಟೋಲ್ ರಸ್ತೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) ಈ ಪ್ರತಿಯೊಂದು ಟೋಲ್ ರಸ್ತೆಗಳಿಗೆ ಎಷ್ಟು ಮೊತ್ತಕ್ಕೆ, ಎಷ್ಟು ವರ್ಷಗಳಿಗೆ ಗುತ್ತಿಗೆ ಕರಾರಿನ ಮೇಲೆ ನೀಡಲಾಗಿದೆ ;



(ಆ) ಮುಂಬರುವ ದಿನಗಳಲ್ಲಿ ಇನ್ನು ಎಷ್ಟು ರಸ್ತೆಗಳನ್ನು ಉನ್ನತೀಕರಣದ ವೆಚ್ಚವನ್ನು ಭರಿಸಲು ಟೋಲ್ ರಸ್ತೆಗಳನ್ನಾಗಿಸುವ ಯೋಜನೆ ಸರ್ಕಾರದ ಮುಂದಿದೆ ? (ವಿವರ ನೀಡುವುದು)

## ಸ್ಥಳೀಯ ಸಂಸ್ಥೆಗಳಲ್ಲಿನ ಘನತ್ಯಾಜ್ಯ ವಿಲೇವಾರಿ.

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೬೪೧ (೬೬೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯ್ತಿಗಳಲ್ಲಿ ಸಾವಯವ ಮತ್ತು ಅಸಾವಯವ ಘನತ್ಯಾಜ್ಯ ವಿಂಗಡಣೆ ಕಾರ್ಯದ ಯೋಜನೆ ಕೈಗೆತ್ತಿಕೊಳ್ಳಲಾಗಿದೆ; ಸಾವಯವ ಕಸದಿಂದ ಬಯೋಗ್ಯಾಸ್ ರಸಗೊಬ್ಬರ ಮತ್ತು ವಿದ್ಯುತ್‌ಗಳನ್ನು ಉತ್ಪಾದಿಸುವ ಯೋಜನೆಗಳನ್ನು ರಾಜ್ಯದ ಮೇಲ್ಕಾಣಿಸಿದ ಯಾವ ಯಾವ ಸ್ಥಳೀಯ ಸಂಸ್ಥೆಗಳಲ್ಲಿ ಕೈಗೆತ್ತಿಕೊಳ್ಳಲಾಗಿದೆ ; (ಅಂತಹ ಪ್ರತಿಯೊಂದು ಪ್ರಕರಣದ ವಿವರ, ಖರ್ಚಾದ ಮೊತ್ತ ಅದರಿಂದ ಸ್ಥಳೀಯ ಸಂಸ್ಥೆಗಳಿಗೆ ಉಂಟಾಗುತ್ತಿರುವ ಆದಾಯದ ವಿವರಗಳನ್ನು ನೀಡುವುದು)

(ಆ) ಪ್ರತಿಯೊಂದು ಮೇಲ್ಕಾಣಿಸಿದ ಸ್ಥಳೀಯ ಸಂಸ್ಥೆಗಳು ಕಸ ಸಂಗ್ರಹಣೆ ಮತ್ತು ವಿಲೇವಾರಿಗೆ ವಸತಿ ಪ್ರದೇಶದಿಂದ ದೂರವಿರುವ ನಿಶ್ಚಿತ ಕಸ ಸಂಗ್ರಹಣ ಪ್ರದೇಶವನ್ನು ಗುರುತಿಸಲಾಗಿದೆಯೇ; ಎಷ್ಟು ಸಂಸ್ಥೆಗಳು ಈ ರೀತಿ ಸ್ಥಳಗಳನ್ನು ಗುರುತಿಸಿ, ವಶಕ್ಕೆ ಪಡೆದಿವೆ ? (ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

## ಕಲ್ಬುರ್ಗಿ ನಗರ ಮತ್ತು ಜಿಲ್ಲೆಯ ವಕ್ಫ್ ಆಸ್ತಿಗಳ ಒತ್ತುವರಿ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೬೪೨ (೬೬೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ನಗರದ ಮಧ್ಯಭಾಗದಲ್ಲಿನ ಬಡೇಪುರಕ್ಕೆ ಸೇರಿದ ಸರ್ವೆ ನಂ. ೧೨ ರ ೮.೩೪ ಎಕರೆ ಭೂಮಿಯು ಖ್ವಾಜಾ ಬಂದೇನವಾಜ್ ದರ್ಗಾಕ್ಕೆ ಸೇರಿದ ಆಸ್ತಿಯಾಗಿದೆಯೇ ;

(ಆ) ಹಜರತ್ ಅಬೇರ್ ನೈಮಿಚೈನಿಯಾ ದರ್ಗಾಕ್ಕೆ ಸೇರಿದ ವಕ್ಫ್ ಆಸ್ತಿಯಾಗಿದ್ದು ಕಲ್ಬುರ್ಗಿ ನಗರದ ಒಕ್ಕಲಗೇರದ ಸರ್ವೆ ನಂ. ೧೩ **ರಲ್ಲಿನ** ೨ಎಕರೆ ಪ್ರದೇಶ ಹಾಗೂ ಖ್ವಾಜಾ ಬಂದೇನವಾಜ್ ದರ್ಗಾಕ್ಕೆ ಸೇರಿದ ಜಮೀನು ಕಲ್ಬುರ್ಗಿಯ ಬ್ರಹ್ಮಪುರ ಗ್ರಾಮದ ಸರ್ವೆ ನಂ **೩೩/೧, ೩೩/೨, ೩೩/೩, ೩೩/೪, ೩೩/**೫ ಜಮೀನು ಸಹ ಒತ್ತುವರಿಯಾಗಿರುವುದು ನಿಜವೇ; ಹಾಗಿದ್ದಲ್ಲಿ, ಅತಿಕ್ರಮಣ ಮಾಡಿರುವವರ ಹೆಸರು, ತಂದೆ ಅಥವಾ ಗಂಡನ ಹೆಸರು, ವಿಳಾಸ ಮತ್ತಿತರ ವಿವರಗಳನ್ನು ಗ್ರಾಮವಾರು ಸರ್ವೆ ನಂಬರ್‌ವಾರು ನೀಡುವುದು ;

(ಇ) ಈ ಆಸ್ತಿಯನ್ನು ವಕ್ಫ್ ಮಂಡಳಿಗೆ ವಾಪಸ್ಸು ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಯಾವ ನ್ಯಾಯಾಲಯಗಳಲ್ಲಿ ಈ ಬಗ್ಗೆ ದಾವೆ ಹೂಡಲಾಗಿದೆ ? (ಪ್ರಕರಣವಾರು ವಿವರ ನೀಡುವುದು)



## ಅಮಾನತ್ ಬ್ಯಾಂಕಿನಲ್ಲಿ ಹಣ ದುರುಪಯೋಗ .

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೬೪೩ (೭೭೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಮಾನತ್ ಬ್ಯಾಂಕಿನಲ್ಲಿ ಇಲ್ಲಿಯವರೆಗೆ ಬೆಳಕಿಗೆ ಬಂದಿರುವ ಹಣ ದುರುಪಯೋಗದ ಮೊತ್ತ ಎಷ್ಟು ;

(ಆ) ಇದಕ್ಕೆ ಸಂಬಂಧಿಸಿದಂತೆ ಸಹಕಾರ ಇಲಾಖೆಯ ಅಧಿಕಾರಿಗಳು ನಡೆಸಿರುವ ತನಖೆಯ ಪ್ರಮುಖಾಂಶಗಳೇನು; (ಹಣ ದುರುಪಯೋಗದ ಆರೋಪ ಎದುರಿಸುತ್ತಿರುವ ಆರೋಪಿಗಳ ಹೆಸರು, ಮೊತ್ತ, ಮುಂತಾದ ವಿವರ ಹಾಗೂ ಬ್ಯಾಂಕಿನಿಂದ ರೂ. ೫–೦೦ ಲಕ್ಷ ಹಾಗೂ ಅದಕ್ಕೆ ಮೀರಿ ಸಾಲ ಪಡೆದು, ಹಣ ಮರುಪಾವತಿಸಿದೆ ಇರುವ ಸುಸ್ತಿದಾರರ ಪಟ್ಟಿ ನೀಡುವುದು)

(ಇ) ಸಾಲ ಮರುಪಾವತಿ ಮಾಡದಿರುವ ಸುಸ್ತಿದಾರರು ನೀಡಿರುವ ಆಧಾರ ಮತ್ತು ಬೋಗ್ಯ, ಸ್ಥಿರ–ಚರಾಸ್ತಿಗಳನ್ನು ಯಾವ ಯಾವ ಪ್ರಕರಣಗಳಲ್ಲಿ ಹರಾಜು ಮಾಡಲಾಗಿದೆ ? (ಅಂತಹ ಪ್ರಕರಣಗಳ ವಿವರ ನೀಡುವುದು)

## ಹೊಸ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಅಳವಡಿಕೆ.

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೬೪೪ (೬೭೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಎಷ್ಟು ಹೊಸ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಲಾಗಿದೆ; (ವಲಯವಾರು ವಿವರ ನೀಡುವುದು)

(ಆ) ಹಳೆಯ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ವಿಲೇವಾರಿ ಮಾಡಲು ಕೈಗೊಂಡಿರುವ ಕ್ರಮಗಳೇನು;

(ಇ) ಬೆಸ್ಕಾಂನ ಉಗ್ರಾಣಗಳಲ್ಲಿ ಹಳೆಯ ಟ್ರಾನ್ಸ್‌ಫಾರ್ಮರ್‌ಗಳ ಮೇಲು ಕವಚಗಳನ್ನು ಮಾತ್ರ ಇರಿಸಿ ಒಳಗಿನ ತಾಮ್ರದ ತಂತಿಗಳನ್ನು ಕದ್ದು ಸರ್ಕಾರಕ್ಕೆ ಕೋಟ್ಯಾಂತರ ರೂ.ಗಳ ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅಂತಹ ತಪ್ಪಿತಸ್ಥ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವಿದ್ಯುತ್ ಸಂಪರ್ಕಕ್ಕೆ ಅಡಚಣೆಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೬೪೫ (೬೨೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆಗೊಂಡಿರುವ ಬಡಾವಣೆಗಳಲ್ಲಿ ಬಿ. ಖಾತಾ ಇತ್ಯಾದಿ ದಾಖಲೆಗಳು ಇಲ್ಲದಿರುವ ಮನೆ, ಕಟ್ಟಡ, ನಿವೇಶನಗಳ ಸ್ವಾಧೀನದಾರರಿಗೆ ವಿದ್ಯುತ್ ಸಂಪರ್ಕ ಪಡೆಯಲು, ನಿವೇಶನ/ ಕಟ್ಟಡ ಸ್ವಾಧೀನಪತ್ರ ಇತ್ಯಾದಿ ದಾಖಲೆಗಳನ್ನು ಬೆಸ್ಕಾಂ ಸಂಸ್ಥೆ ಕೇಳುತ್ತಾ, ನಾಗರೀಕರನ್ನು ತೊಂದರೆಗೆ ಸಿಲುಕಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿದ್ಯುತ್ ಸಂಪರ್ಕ ನೀಡುವ ಗುತ್ತಿಗೆದಾರರಿಗೂ ಕೆಲ ನಿಯಮಗಳನ್ನು ಬೆಸ್ಕಾಂ ಹೇರಿರುವುದರಿಂದ, ವಿದ್ಯುತ್ ಸಂಪರ್ಕ



ನೀಡಲು ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಟ್ಟಡ/ನಿವೇಶನದ ಕ್ರಮಬದ್ಧ ದಾಖಲೆಗಳಿಲ್ಲದ ಬೆಂಗಳೂರಿನ ನಿವಾಸಿಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಬೆಸ್ಕಾಂ ವಿಧಿಸುತ್ತಿರುವ ನಿಬಂಧನೆಗಳನ್ನು ಸಡಿಲಗೊಳಿಸಿ, ಸರ್ಕಾರ ನಾಗರೀಕರ ಹಿತಕಾಪಾಡುವುದೇ ?

## ವಿದ್ಯುತ್ ಉತ್ಪಾದನೆ ಹಾಗೂ ಸರಬರಾಜು.

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೬ (೬೭೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿಯ ಆರ್.ಟಿ.ಪಿ.ಎಸ್., ವೈ.ಟಿ.ಪಿ.ಎಸ್ ಮತ್ತು ಜ್ಯೂರಾಲ್, ವಿಂಡ್ ಪವರ್, ಮಿನಿ ಹೈಡ್ರಲ್, ಸೋಲಾರ್‌ನಿಂದ ಒಟ್ಟು ಎಷ್ಟು ವಿದ್ಯುತ್ ಉತ್ಪಾದನೆಯಾಗುತ್ತಿದೆ ;

(ಆ) ರಾಯಚೂರು ಜಿಲ್ಲೆಯಲ್ಲಿ ವಿವಿಧ ಮೂಲಗಳಿಂದ ಅತಿ ಹೆಚ್ಚು ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದ್ದು, ನಗರಕ್ಕೆ ೨೪ ಗಂಟೆಗಳ ವಿದ್ಯುತ್ ಸರಬರಾಜು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಮೇಲ್ಕಂಡ ಜಿಲ್ಲೆಯಲ್ಲಿ ಈ ಯೋಜನೆಗಾಗಿ ಕರ್ನಾಟಕ ವಿದ್ಯುತ್ ನಿಗಮ ವಶಪಡಿಸಿಕೊಂಡ ಎಷ್ಟು ರೈತರ ಕುಟುಂಬಗಳಿಗೆ ಉದ್ಯೋಗ ನೀಡಲಾಗಿದೆ ; ಹಾಗೂ ಎಷ್ಟು ಕುಟುಂಬಗಳಿಗೆ ಉದ್ಯೋಗ ನೀಡಬೇಕಾಗಿದೆ ; ಅಂತಹ ಕುಟುಂಬಗಳಿಗೆ ಕಾಲಮಿತಿಯಲ್ಲಿ ಉದ್ಯೋಗ ನೀಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ರಾಯಚೂರು ಜಿಲ್ಲೆಯಲ್ಲಿ ಇಂಧನ ಇಲಾಖೆಯಿಂದ ಟ್ರಾನ್ಸ್‌ಫಾರ್ಮರ್ ಬ್ಯಾಂಕಿಗೆ ಎಷ್ಟು ಟ್ರಾನ್ಸ್‌ಫಾರ್ಮರ್‌ಗಳನ್ನು ಒದಗಿಸಲಾಗಿದೆ ; (ವಿವರ ಒದಗಿಸುವುದು)

(ಉ) ರಾಯಚೂರಿನಲ್ಲಿ ಸೋಲಾರ್ ಪಾರ್ಕ್ ಪ್ರಾರಂಭಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಸೋಲಾರ್ ಪಾರ್ಕ್ ಸ್ಥಾಪನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ಒದಗಿಸುವುದು)

## ಕುಡಿಯುವ ನೀರಿನ ಮಂಜೂರಾತಿ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೭ (೬೭೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಪಟ್ಟಣಕ್ಕೆ ಕುಡಿಯುವ ನೀರಿನ ೨೪/೭ ಯೋಜನೆಯನ್ನು ಮಂಜೂರು ಮಾಡಲು ವಿವರವಾದ ರೂ. ೮೭.೦೦ ಕೋಟಿಗಳ ಯೋಜನ ವರದಿಯನ್ನು ಕೆ.ಯು.ಡಬ್ಲ್ಯೂ.ಎಸ್.ಬಿ. ಯಿಂದ ಅನುಮತಿ ಪಡೆದು ಪ್ರಸ್ತಾವನೆ ಬಂದಿದ್ದು, ಅನುಮೋದನೆಗಾಗಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸಾರ್ವಜನಿಕರ ಹಿತದೃಷ್ಟಿಯಿಂದ ಮಹತ್ವ ಪೂರ್ಣವಾದ ೮೭.೦೦ ಕೋಟಿ ರೂ.ಗಳ ಈ ಯೋಜನೆಗೆ ತುರ್ತಾಗಿ ಮಂಜೂರಾತಿ ನೀಡಲು ಕ್ರಮ ವಹಿಸಲಾಗಿದೆಯೇ ? (ವಿವರ ಒದಗಿಸುವುದು)



## ರಸ್ತೆ ಅಭಿವೃದ್ಧಿ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೮ (೬೭೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಿಂದ ಹುನಗುಂದದವರೆಗಿನ ರಾಜ್ಯ ಹೆದ್ದಾರಿ ೨೦–೨೩ರನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಆ) ರಾಷ್ಟ್ರೀಯ ಹೆದ್ದಾರಿ ೧೬೭ರಲ್ಲಿ ಕೃಷ್ಣಾ ನದಿಯಿಂದ ಮಂತ್ರಾಲಯದ ಸೇತುವೆ ವರೆಗಿನ ೫೫ ಕಿ.ಮೀ. ರಸ್ತೆ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆ ಕೈಗೊಂಡ ಕಾಮಗಾರಿಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೪೯ (೬೭೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಲೋಕೋಪಯೋಗಿ ಇಲಾಖೆಯಿಂದ ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನ ಯಾವ ಯಾವ ಶೀರ್ಷಿಕೆಯಡಿ ಹಾಗೂ ಯಾವ ಅನುದಾನದಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಆ) ಯಾವ ಯಾವ ಪ್ರದೇಶಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಪ್ರತಿ ಕಾಮಗಾರಿಯ ಗರಿಷ್ಠ ಮೊತ್ತವೇನು ;

(ಇ) ಕೈಗೊಂಡ ಕಾಮಗಾರಿಗಳಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿವೆ ? (ಪೂರ್ಣಗೊಂಡ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳ ಭಾವಚಿತ್ರಗಳನ್ನು ಹಾಗೂ ಕಾಮಗಾರಿಗಳ ಅಂದಾಜು ಪಟ್ಟಿ ಮತ್ತು ಎಂ.ಬಿ. ಜೆರಾಕ್ಸ್ ಪ್ರತಿಗಳನ್ನು ನೀಡುವುದು)

## ಬೆಂಗಳೂರು–ಬಂಟ್ವಾಳ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತನೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೦ (೮೩೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಬಂಟ್ವಾಳ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ ಯೋಜನೆಯಡಿ ಆರುಪಥ ರಸ್ತೆ ನಿರ್ಮಾಣ ಮಾಡಲು ಕ್ರಿಯಾ ಯೋಜನೆ ರೂಪಿಸಲಾಗಿದೆಯೇ ; ಇದರ ಅಂದಾಜು ವೆಚ್ಚ ಎಷ್ಟು ;

(ಆ) ರಸ್ತೆ ಅಭಿವೃದ್ಧಿಗಾಗಿ ಕೇಂದ್ರ ಮತ್ತು ರಾಜ್ಯದ ಪಾಲು ಎಷ್ಟು ;

(ಇ) ಬೆಂಗಳೂರು–ಬಂಟ್ವಾಳ ಮಧ್ಯದಲ್ಲಿ ಬರುವ ನಗರ ಪ್ರದೇಶಗಳಾದ ರಾಮನಗರ, ಚನ್ನಪಟ್ಟಣ, ಮದ್ದೂರು, ಮಂಡ್ಯ ಶ್ರೀರಂಗಪಟ್ಟಣಗಳಲ್ಲಿ ಬೈಪಾಸ್ ರಸ್ತೆ ನಿರ್ಮಾಣ ಮಾಡಲಾಗುವುದೇ ; ಅಥವಾ ಫ್ಲೈಓವರ್ ರಸ್ತೆ ನಿರ್ಮಾಣ ಮಾಡಲಾಗುವುದೇ ;



(ಈ) ಬೆಂಗಳೂರಿನ ಯಾವ ಭಾಗದಿಂದ ಈ ಯೋಜನೆಯ ರಸ್ತೆ ಪ್ರಾರಂಭಗೊಳ್ಳುತ್ತದೆ ?

## ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೧ (೮೭೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ಎಷ್ಟು ಗಂಟೆಗಳ ಕಾಲ ತ್ರೀಫೇಸ್ ವಿದ್ಯುತ್ ನೀಡುತ್ತಿದೆ ; ಪ್ರತಿನಿತ್ಯ ನಿಗಧಿಗೊಳಿಸಿದ ವಿದ್ಯುತ್ತನ್ನು ನೀಡಲಾಗುತ್ತಿದೆಯೇ ;

(ಆ) ಸರ್ಕಾರ ವಿದ್ಯುತ್ ಕಂಪನಿಗಳಿಗೆ ಒಂದು ಅಶ್ವಶಕ್ತಿ (೧ ಹೆಚ್.ಪಿ.)ಗೆ ನೀಡುತ್ತಿರುವ ಸಬ್ಸಿಡಿ ಪ್ರಮಾಣ ಎಷ್ಟು ; ಪ್ರತಿನಿತ್ಯ ನಿಗಧಿಪಡಿಸಿದ ವಿದ್ಯುತ್‌ನಲ್ಲಿ ಬಳಹಷ್ಟು ಬಾರಿ ಕಡಿತಗೊಳಿಸಲಾಗುತ್ತಿದೆ ಅದರಂತೆಯೇ ವಿದ್ಯುತ್ ಕಂಪನಿಗಳಿಗೆ ನೀಡುವ ಸಬ್ಸಿಡಿಯನ್ನು ಕಡಿತಗೊಳಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ರೈತ ವಿದ್ಯುತ್ ದರ ಪಾವತಿಸಲು ಶೇಕಡಾ ಎಷ್ಟು ರಿಯಾಯಿತಿ ಇದೆ ? (ವಿವರ ನೀಡುವುದು)

## ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ಅಧ್ಯಕ್ಷರ ಬಗ್ಗೆ.

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೨ (೮೪೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲಾ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ೨೦೧೩–೧೪ ಹಾಗೂ ೨೦೧೪–೧೫ರಲ್ಲಿ ಲಾಭದಾಯಕವಾಗಿರುವುದೇ ಅಥವಾ ನಷ್ಟದಲ್ಲಿರುವುದೇ ;

(ಆ) ಪಿ.ಎಸ್.ಎಸ್.ಕೆ. ಗೆ ಅಧ್ಯಕ್ಷರನ್ನಾಗಿ ಯಾರನ್ನು ನೇಮಿಸಲಾಗಿದೆ; ಯಾವಾಗ ನೇಮಿಸಲಾಗಿದೆ, ಮತ್ತು ಇವರಿಗೆ ನೀಡುವ ಸವಲತ್ತುಗಳೇನು ? (ಈವರೆಗಿನ ಅಧ್ಯಕ್ಷರುಗಳು ಪಡೆದಿರುವ ಸಾರಿಗೆ, ಸಂಬಳ, ಭತ್ಯೆಯ ತಿಂಗಳುವಾರು ವಿವರ ನೀಡುವುದು)

## ಬೆಂಗಳೂರು ಮಹಾನಗರದಲ್ಲಿ ಲೋಡ್ ಶೆಡ್ಡಿಂಗ್

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೩ (೮೪೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇಸಿಗೆ ಪ್ರಾರಂಭವಾಗುವ ಮೊದಲೇ ಬೆಂಗಳೂರು ಮಹಾನಗರದಲ್ಲಿ ಲೋಡ್ ಶೆಡ್ಡಿಂಗ್ ಆಗುತ್ತಿರುವುದು ಇಲಾಖೆ ಗಮನಕ್ಕೆ ಬಂದಿರುವುದೇ; ಬಂದಿದ್ದರೆ, ಜಲಾಶಯಗಳಲ್ಲಿ ನೀರಿನ ಲಭ್ಯತೆ ಇದ್ದರೂ ಲೋಡ್ ಶೆಡ್ಡಿಂಗ್‌ಗೆ ವೈಜ್ಞಾನಿಕ ಕಾರಣಗಳೇನು ; (ವಿವರ ನೀಡುವುದು)

(ಆ) ಶಾಲಾ ಕಾಲೇಜುಗಳು ಮುಖ್ಯ ಪರೀಕ್ಷೆಗಳು ಪ್ರಾರಂಭಗೊಳ್ಳುತ್ತಿರುವ ಈ ಸಮಯದಲ್ಲಿ ವಿದ್ಯುತ್ ಲೋಡ್ ಶೆಡ್ಡಿಂಗ್ ಆಗುವುದರಿಂದ



ವಿದ್ಯಾರ್ಥಿಗಳಿಗೆ ತೊಂದರೆಯಾಗುವುದಿಲ್ಲವೇ; ಇದನ್ನು ನೀಗಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು; ರಾತ್ರಿ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಕತ್ತಲೆಯಲ್ಲಿಯೇ ತೊಂದರೆಯಾಗುವುದಿಲ್ಲವೇ;

(ಇ) ಕೈಗಾರಿಕಾ ನಗರವಾದ ಬೆಂಗಳೂರು ಮಹಾನಗರದಲ್ಲಿ ನಿರಂತರವಾಗಿ ಆಗುತ್ತಿರುವ ಲೋಡ್ ಶೆಡ್ಡಿಂಗ್‌ನಿಂದ ಸಣ್ಣ ಕೈಗಾರಿಕಾ ಉತ್ಪಾದನೆಯಲ್ಲಿ ಇಳಿಕೆಯಾಗುವುದಿಲ್ಲವೇ; ಕೈಗಾರಿಕೆಗಳು ಇದರಿಂದ ಮುಚ್ಚುವ ಸ್ಥಿತಿಗೆ ತಲುಪಿದ್ದು, ಕೈಗಾರಿಕೆಗಳ ಉಳಿವಿಗೆ ಇಲಾಖೆ ಕೈಗೊಳ್ಳುವ ಕ್ರಮಗಳೇನು ?

## ರಸ್ತೆ ಬದಿಗಳಲ್ಲಿ ನಿಯಮ ಬಾಹಿರವಾಗಿ ಮಾಂಸ ಮಾರಾಟ

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೪ (೬೭೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೆಲವು ಭಾಗದ ರಸ್ತೆ ಬದಿಯಲ್ಲಿ ಸಾರ್ವಜನಿಕವಾಗಿ ಮತ್ತು ನಿಯಮಬಾಹಿರವಾಗಿ ಮಾಂಸ ಮಾರಾಟದ ವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜನಸಾಮಾನ್ಯರು, ಶಾಲಾ ಮಕ್ಕಳು, ಮಹಿಳೆಯರು ಓಡಾಡುವ ರಸ್ತೆಗಳಲ್ಲಿ ಯಾವುದೇ ಹಂಗಿಲ್ಲದೆ ಕುರಿ ಮತ್ತು ಮೇಕೆ ಇತರ ಪ್ರಾಣಿಗಳನ್ನು ಹತ್ಯೆ ಮಾಡಿ ಓಡಾಡುವ ರಸ್ತೆಗಳನ್ನು ರಕ್ತಸಿಕ್ತ ಗೊಳಿಸಿ ಸಭ್ಯತೆ ಬಗ್ಗೆ ಗಮನಹರಿಸುವ ವ್ಯವಸ್ಥೆಯಿಂದ ಸದರಿ ರಸ್ತೆಗಳಲ್ಲಿ ಓಡಾಡುವ ಸಾರ್ವಜನಿಕರಿಗೆ ಸಸ್ಯಹಾರಿಗಳಿಗೆ ಮುಜಗರವಾಗುವುದಿಲ್ಲವೇ ;

(ಇ) ಗ್ರಾಮ ಪಂಚಾಯತಿ, ಪುರಸಭೆ, ನಗರಸಭೆ, ನಗರಪಾಲಿಕೆ ಮತ್ತು ಮಹಾನಗರ ಪಾಲಿಕೆಗಳ ಅನುಮತಿ ಇಲ್ಲದೆ, ಅಂದರೆ ಸ್ಥಳೀಯ ಸಂಸ್ಥೆಗಳ ಅನುಮತಿ ಪಡೆಯದೆ ಮತ್ತು ಕಾನೂನು ಬಾಹಿರವಾಗಿ ನಡೆಯುತ್ತಿರುವ ಈ ರೀತಿಯ ದಂಧೆಯನ್ನು ತಡೆಯಲು ಸರ್ಕಾರ ತೆಗೆದುಕೊಳ್ಳಬಹುದಾದ ಕ್ರಮಗಳೇನು ;

(ಈ) ಮಾಂಸ ಮಾರಾಟದ ನಿಯಮಗಳನ್ನು ಮತ್ತು ಅದಕ್ಕನ್ವಯಿಸುವ ಕಾನೂನುಗಳನ್ನು ಕಡ್ಡಾಯವಾಗಿ ಪಾಲಿಸದ ವ್ಯಕ್ತಿಗಳು ಮತ್ತು ಈ ರೀತಿ ವಿಚಾರಗಳ ಬಗ್ಗೆ ಗಮನ ಹರಿಸದ ಸ್ಥಳೀಯ ಸಂಸ್ಥೆಗಳು ಮತ್ತು ಸಂಬಂಧಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಇದುವರೆವಿಗೂ ಕೈಗೊಂಡ ಕ್ರಮಗಳೇನು ? (ಕ್ರಮ ಜರುಗಿಸಿದ್ದರೆ ವಿವರಗಳನ್ನು ಒದಗಿಸುವುದು)

## ರೈತರ ಜ್ವಲಂತ ಸಮಸ್ಯೆಗಳಿಗೆ ಖಾಯಂ ಪರಿಹಾರ.

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೫೫ (೬೭೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬರಗಾಲ ಅತಿವೃಷ್ಟಿ ಕಾರಣಗಳಿಂದ ಬೆಳೆಗಳು ಹಾನಿಗೊಳಗಾದಾಗ ರೈತರ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಸಿಗದಿರುವುದರಿಂದ ರೈತರು ಸರ್ಕಾರದ ವತಿಯಿಂದ 'ಬೆಂಬಲ ಬೆಲೆ' ಅಪೇಕ್ಷೆಪಡುತ್ತಿರುವುದು ನಿಜವೇ;

(ಆ) 'ಬೆಂಬಲ ಬೆಲೆ' ಗಳನ್ನು ಸರ್ಕಾರ ನೀಡದಿದ್ದಾಗ ರೈತರು ಪ್ರತಿಭಟನೆ, ಧರಣಿ ಉಪವಾಸ ಇತ್ಯಾದಿ ಹೋರಾಟಗಳಿಗೆ ಇಳಿದು, ಪ್ರಾಣಹಾನಿ, ಸಾರ್ವಜನಿಕ ಆಸ್ತಿಪಾಸ್ತಿ ಹಾನಿ, ಕಾನೂನು ಸುವ್ಯವಸ್ಥೆಗೆ



ಭಂಗ ತರುತ್ತಿರುವುದು ಹಾಗೂ ಈ ಘಟನಾವಳಿಗಳು/ಸಮಸ್ಯೆಗಳು ಮುಂದುವರಿಯುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

(ಇ) ಸರ್ಕಾರಿ ಖಜಾನೆಯ ಹೆಚ್ಚಿನ ಪ್ರಮಾಣ ಹಣವನ್ನು ಈ 'ಪರಿಹಾರ' 'ಬೆಂಬಲ ಬೆಲೆ' 'ಸಬ್ಸಿಡಿ' ಇತ್ಯಾದಿಗಳಿಗಾಗಿ ನಿರಂತರವಾಗಿ ವ್ಯಯಿಸುತ್ತಿರುವುದನ್ನು ಕೃಷಿ ಇಲಾಖೆ ಗಮನಿಸಿದೆಯೇ;

(ಈ) ಈ ಸಮಸ್ಯೆಗಳನ್ನು ಖಾಯಂ ಆಗಿ ಬಗೆಹರಿಸುವ ಅಥವಾ ನಿಯಂತ್ರಣ ಮಾಡುವ ದಿಕ್ಕಿನಲ್ಲಿ ಕೃಷಿ ಇಲಾಖೆ ವೈಜ್ಞಾನಿಕವಾಗಿ ಯಾವ್ಯಾವ ಯೋಜನೆ/ಕಾರ್ಯಕ್ರಮಗಳನ್ನು ರೂಪಿಸಿದೆ; ಮತ್ತು ಇಲಾಖೆಯ ಚಿಂತನೆಗಳೇನು ?

## ಅಣು ವಿದ್ಯುತ್ ಉತ್ಪಾದನೆ.

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೫೬ (೬೭೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಮಾಣುವಿನಿಂದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆಯೇ ; ಮಾಡುತ್ತಿದ್ದಲ್ಲಿ ವಿವರಗಳನ್ನು ನೀಡುವುದು ; ಇಲ್ಲದಿದ್ದಲ್ಲಿ ಕಾರಣಗಳೇನು ;

(ಆ) ಭಾರತ ಸರ್ಕಾರ ಅಮೇರಿಕಾ ದೇಶದೊಡನೆ ಮಾಡಿಕೊಂಡಿರುವ ಅಣು ಒಪ್ಪಂದದ ಪರಿಣಾಮಗಳು ರಾಜ್ಯದಲ್ಲಿಯೂ ಆಗಲಿದೆಯೇ ? (ವಿವರಗಳನ್ನು ನೀಡುವುದು)

## ಸಂಪರ್ಕ ರಸ್ತೆಗಳಿಲ್ಲದ ಗ್ರಾಮಗಳು.

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೬೫೭ (೬೭೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಸ್ತೆ ಸಂಪರ್ಕಗಳಿಲ್ಲದ ಗ್ರಾಮ, ತಾಂಡ, ಕಾಲೋನಿ ಇತ್ಯಾದಿ ಜನವಸತಿ ಪ್ರದೇಶಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ವಿವರಗಳನ್ನು ನೀಡುವುದು ;

(ಆ) ಸಂಪರ್ಕಗಳಿಲ್ಲದ ಆ ಜನವಸತಿ ಪ್ರದೇಶಗಳಿಗೆ ರಸ್ತೆಗಳನ್ನು ನಿರ್ಮಿಸಿಕೊಡುವ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆಯೇ ?

## ಸಹಕಾರ ಸಂಘಗಳ ಆಡಳಿತ ಮಂಡಳಿಯ ಚುನಾವಣೆ.

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೫೮ (೮೨೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸಹಕಾರ ಸಂಘಗಳ ಸಂಖ್ಯೆ ಎಷ್ಟು; ಈ ಪೈಕಿ ೨೦೧೫ರ ಮಾರ್ಚ್‌ನಲ್ಲಿ ಎಷ್ಟು ಸಹಕಾರ ಸಂಘಗಳ ಆಡಳಿತ ಮಂಡಳಿ ಚುನಾವಣೆ ಜರುಗಬೇಕಾಗಿದೆ; (ದಿನಾಂಕ:೨೦.೦೧.೨೦೧೫ರಂತೆ ಚುನಾವಣಾ ವೇಳಾಪಟ್ಟಿ ಪ್ರಕಟಿಸಿರುವ ಮತ್ತು ಇನ್ನೂ ಪ್ರಕಟಣೆಗೊಳ್ಳದಿರುವ ಸಹಕಾರ ಸಂಘಗಳ ವಿವರ ನೀಡುವುದು)

(ಆ) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮದಲ್ಲಿ ಇರುವ ಅವಕಾಶದಂತೆ ಹಿಂದುಳಿದ ವರ್ಗದವರಿಗೆ ಮೀಸಲಾತಿಯನ್ನು ನಿಯಮಗಳಲ್ಲಿ ಅಳವಡಿಸುವ ಪೂರ್ವದಲ್ಲಿಯೇ ಮೀಸಲಾತಿ



ಕುರಿತಂತೆ ಸ್ವಕಪೋಲ ಕಲ್ಪತೆಯಿಂದ ಚುನಾವಣೆ ವೇಳಾಪಟ್ಟಿ ಪ್ರಕಟಿಸಿರುವ ಚುನಾವಣಾ ಅಧಿಕಾರಿಗಳ ಸಂಖ್ಯೆ ಎಷ್ಟು; (ಅವರುಗಳ ಹೆಸರು, ಪದನಾಮ ಮತ್ತು ಸಂಘವಾರು ವಿವರ ನೀಡುವುದು)

(ಇ) ಅಂತಹ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ; (ವಿವರ ನೀಡುವುದು)

(ಈ) ಕರ್ತವ್ಯಲೋಪ ಹಾಗೂ ಕಾನೂನಿನ ಉಲ್ಲಂಘನೆ ಮಾಡಿರುವ ಚುನಾವಣಾಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗುವುದು ?

## ಪ್ರಸ್ತುತ ಆಯವ್ಯಯದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಬಿಡುಗಡೆಯಾದ ಹಣ.

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೫೯ (೬೮೨) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಕ್ಫ್ ಬೋರ್ಡ್‌ಗಾಗಿ ೨೦೧೪–೧೫ನೇ ಸಾಲಿನಲ್ಲಿ ಆಯವ್ಯಯದಲ್ಲಿ ಮೀಸಲಿಟ್ಟ ಹಣವೆಷ್ಟು ಅದರಲ್ಲಿ ಬಿಡುಗಡೆಯಾದ ಮೊತ್ತವೆಷ್ಟು ;

(ಆ) ಕರ್ನಾಟಕ ವಕ್ಫ್ ಆಸ್ತಿಗಳ ರಕ್ಷಣೆಗಾಗಿ (Protection Grant) ೨೦೧೪–೧೫ನೇ ಸಾಲಿನಲ್ಲಿ ಆಯವ್ಯಯದಲ್ಲಿ ಹಂಚಿಕೆಯಾದ ಮೊತ್ತ ಎಷ್ಟು ; ಆ ಪೈಕಿ ಬಿಡುಗಡೆಯಾದ ಹಣ ಎಷ್ಟು ; ಬಾಕಿ ಇರುವ ಹಣ ಎಷ್ಟು ;

(ಇ) ಕರ್ನಾಟಕ ವಕ್ಫ್ ಸಂಸ್ಥೆಗೆ ಸೇರಿದ ಮಸೀದಿಗಳು, ದರ್ಗಾಗಳು ಹಾಗೂ ಖಾನಭಾಗಗಳ ರಿಪೇರಿಗಾಗಿ ೨೦೧೪-೧೫ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಟ್ಟ ಹಣವೆಷ್ಟು ; ಆ ಪೈಕಿ ಬಿಡುಗಡೆಯಾದ ಹಣ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ವಕ್ಫ್ ಆಸ್ತಿ ಸರ್ವೆ ಕಾರ್ಯಗಳು.

**ಶ್ರೀ ಸೈಯದ್ ಮುಧೀರ್ ಆಗಾ (ವಿಧಾನ ಸಭೆಯಿಂದ ಚುನಾಯಿತರಾದವರು)**

೬೬೦ (೬೮೧) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ೨೦ ವರ್ಷಗಳಿಗೊಮ್ಮೆ ನಡೆಯಲಿರುವ ಸರ್ವೆ ಕಾರ್ಯವು ಮಾರ್ಚ್–೨೦೧೪ರ ಒಳಗಾಗಿ ಪೂರ್ಣಗೊಳಿಸಲಾಗುವುದೆಂದು ಸರ್ಕಾರ ಭರವಸೆ ನೀಡಿರುವುದು ನಿಜವಲ್ಲವೆ ;

(ಆ) ಸದರಿ ಸರ್ವೆ ಕೆಲಸವು ಇದುವರೆವಿಗೂ ಪೂರ್ಣಗೊಳ್ಳದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಸರ್ವೆ ಕಾರ್ಯವನ್ನು ಪೂರ್ಣಗೊಳಿಸಲು ಸರ್ಕಾರಕ್ಕೆ ಇರುವ ಅಡ್ಡಿ/ಆತಂಕಗಳು ಯಾವುವು ; ಸದರಿ ಸರ್ವೆ ಕಾರ್ಯವು ವಿಳಂಬ ಮಾಡುತ್ತಿರುವ ಅಧಿಕಾರಿಗಳ ಮೇಲೆ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಈ) ಕರ್ನಾಟಕ ವಕ್ಫ್ ಆಸ್ತಿ ರಕ್ಷಣೆಗಾಗಿ (Multi Member Wakf Tribunal) ರಚಿಸಲಾಗಿದೆಯೇ ; ರಚಿಸದೆ ಇದ್ದರೆ ಅದಕ್ಕೆ



ಕಾರಣವೇನು ; (Multi Member Wakf Tribunal) ರಚಿಸದೆ ಇರುವುದರಿಂದ ವಕ್ಫ್ ಆಸ್ತಿಗೆ ಸಂಬಂಧಪಟ್ಟ ದೂರಿನ ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು ;ಈ ಪ್ರಕರಣಗಳು ಯಾವಾಗ ಇತ್ಯರ್ಥಗೊಳಿಸಲಾಗುವುದು ?

## ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳ ವಿವರ.

**ಶ್ರೀ ವಿ. ಎಸ್. ಉಗ್ರಪ್ಪ (ನಾಮನಿರ್ದೇಶನ)**

೬೬೧ (೬೮೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಇರುವ ಒಟ್ಟು ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಇವುಗಳ ಪೈಕಿ ಮುಂಬೈ–ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಸಕ್ಕರೆ ಕಾರ್ಖಾನೆಗಳು ಯಾವುವು ; ಎಲ್ಲೆಲ್ಲಿ ಇದ್ದಾವೆ ; ಯಾವ ಯಾವ ಕಾರ್ಖಾನೆ ಯಾರ್‍ಯಾರ ಮಾಲೀಕತ್ವದಲ್ಲಿವೆ ; ಸದರಿ ಕಾರ್ಖಾನೆಗಳನ್ನು ಸ್ಥಾಪಿಸಲು ವೆಚ್ಚವಾಗಿರುವ ಹಣವೆಷ್ಟು ; (ಕಾರ್ಖಾನೆವಾರು ವಿವರ ನೀಡುವುದು)

(ಆ) ಯಾವ ಯಾವ ಕಾರ್ಖಾನೆಗಳಲ್ಲಿ ಪ್ರತಿವರ್ಷ ಎಷ್ಟು ಪ್ರಮಾಣದಲ್ಲಿ ಸಕ್ಕರೆ, ವಿದ್ಯುತ್ ಮುಂತಾದವುಗಳನ್ನು ಉತ್ಪಾದನೆ ಮಾಡಲಾಗುತ್ತಿದೆ ; ಉತ್ಪಾದನೆಯಾಗುವ ವಿದ್ಯುತ್ತನ್ನು ಯಾವ ಯಾವ ದರದಲ್ಲಿ ಮಾರಾಟ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಇ) ಯಾವ ಯಾವ ಕಾರ್ಖಾನೆಗೆ ಯಾವ ಯಾವ ಪ್ರದೇಶವನ್ನು ಕಬ್ಬು ಪೂರೈಸಲು ಮೀಸಲಿಡಲಾಗಿದೆ ; (ವಿವರ ನೀಡುವುದು)

(ಈ) ೨೦೧೩–೧೪ನೇ ಸಾಲಿನಲ್ಲಿ ಯಾವ ಯಾವ ಕಾರ್ಖಾನೆಗೆ ರೈತರು ಕಬ್ಬನ್ನು ಯಾವ ದರದಲ್ಲಿ ಪೂರೈಸಿದ್ದಾರೆ ; ಕಬ್ಬು ಪೂರೈಸಿದ ರೈತರಿಗೆ ಪೂರ್ಣ ಪ್ರಮಾಣದ ಹಣವನ್ನು ಪಾವತಿಸಿರುವ ಕಾರ್ಖಾನೆಗಳು ಯಾವುವು ; ಪಾವತಿಸದಿದ್ದಲ್ಲಿ, ಅದಕ್ಕೆ ಕಾರಣಗಳೇನು ; ಅಂತಹವರುಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ರಾಷ್ಟ್ರೀಕೃತ ರಸ್ತೆ.

**ಶ್ರೀ ವಿ. ಎಸ್. ಉಗ್ರಪ್ಪ (ನಾಮನಿರ್ದೇಶನ)**

೬೬೨ (೬೮೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರಾಷ್ಟ್ರೀಕರಣಗೊಂಡಿರುವ ರಸ್ತೆಗಳು ಯಾವುವು ; ಯಾವ ಯಾವ ರಸ್ತೆಯಲ್ಲಿ ಎಷ್ಟೆಷ್ಟು ಬಸ್‌ಗಳು ಸಂಚಾರ ಮಾಡುತ್ತಿವೆ ;

(ಆ) ಯಾವ ಯಾವ ರಸ್ತೆಯ ಬಸ್ ಸಂಚಾರದಿಂದ ಸಂಸ್ಥೆಗೆ ಲಾಭದಾಯಕವಾಗಿದೆ ; ಯಾವ ಯಾವ ರಸ್ತೆಗಳಿಂದ ನಷ್ಟ ಉಂಟಾಗಿದೆ ; (ರಸ್ತೆವಾರು ವಿವರ ನೀಡುವುದು)

(ಇ) ರಾಷ್ಟ್ರೀಕರಣಗೊಳ್ಳದ ಜಿಲ್ಲೆ/ರಸ್ತೆಗಳನ್ನು ರಾಷ್ಟ್ರೀಕರಣಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇಲ್ಲದಿದ್ದರೆ ಕಾರಣಗಳೇನು ? (ವಿವರ ನೀಡುವುದು)



## ಕೋಲಾರ ಜಿಲ್ಲೆಯಲ್ಲಿ ವಿಶೇಷ ಘಟಕ ಯೋಜನೆಡಿಯಲ್ಲಿ (ಎಸ್.ಸಿ.ಪಿ/ಟಿ.ಎಸ್.ಪಿ) ಹಣ ಬಿಡುಗಡೆ

**ಶ್ರೀ ಡಿ. ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)**

೬೬೩ (೬೮೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಗೆ ಸಂಬಂಧಪಟ್ಟಂತೆ ವಿಶೇಷ ಘಟಕ ಯೋಜನೆಯಡಿಯಲ್ಲಿ (ಎಸ್.ಸಿ.ಪಿ/ಟಿ.ಎಸ್.ಪಿ) ಈ ವರ್ಷ ಬಿಡುಗಡೆಯಾಗಿರುವ ಹಣವೆಷ್ಟು ; ಖರ್ಚಾಗಿರುವ ಹಣವೆಷ್ಟು ಹಾಗೂ ಖರ್ಚಾಗದೇ ಉಳಿದಿರುವ ಹಣವೆಷ್ಟು ;

(ಆ) ಈ ಯೋಜನೆಯಡಿ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ?

## ಕೋಲಾರ ಜಿಲ್ಲೆಯಲ್ಲಿ ವಿಶೇಷ ಘಟಕ ಯೋಜನೆಡಿಯಲ್ಲಿ (ಎಸ್.ಸಿ.ಪಿ/ಟಿ.ಎಸ್.ಪಿ) ಹಣ ಬಿಡುಗಡೆ

**ಶ್ರೀ ಡಿ. ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)**

೬೬೪ (೬೮೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿ ಕೃಷಿ ಇಲಾಖೆಗೆ ಸಂಬಂಧಿಸಿದಂತೆ ವಿಶೇಷ ಘಟಕ ಯೋಜನೆಯಡಿಯಲ್ಲಿ (ಎಸ್.ಸಿ.ಪಿ/ಟಿ.ಎಸ್.ಪಿ) ಈ ವರ್ಷ ಬಿಡುಗಡೆಯಾಗಿರುವ ಹಣವೆಷ್ಟು ಖರ್ಚಾಗಿರುವ ಹಣವೆಷ್ಟು ಹಾಗೂ ಖರ್ಚಾಗದೇ ಉಳಿದಿರುವ ಹಣವೆಷ್ಟು ;

(ಆ) ಈ ಯೋಜನೆಯಡಿ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ?

## ಸ್ಥಳೀಯ ಸಂಸ್ಥೆಗಳ ವಿವರ.

**ಶ್ರೀ ಡಿ. ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)**

೬೬೫ (೮೦೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಯಲ್ಲಿನ ನಗರಸಭೆ ಮತ್ತು ಸ್ಥಳೀಯ ಸಂಸ್ಥೆಗಳ (ಸಿಎಂಸಿ, ಟಿಎಂಸಿ ಮತ್ತು ಟಿಪಿಎಸ್‌ಗಳ) ಒಟ್ಟು ಸಂಖ್ಯೆ ಎಷ್ಟು ;

(ಆ) ಈ ಮೇಲ್ಕಂಡ ಸಂಸ್ಥೆಗಳ ವತಿಯಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಮಾರಾಟ ಮಳಿಗೆಗಳನ್ನು ನಿರ್ಮಿಸಲಾಗಿದೆಯೇ; ಇಂತಹ ಯಾವ ಯಾವ ಸಂಸ್ಥೆಗಳ ವತಿಯಿಂದ ಎಷ್ಟು ಮಳಿಗೆಗಳನ್ನು ನಿರ್ಮಿಸಲಾಗಿದೆ ;

(ಇ) ಹೀಗೆ ನಿರ್ಮಿಸಲಾಗಿರುವ ಮಳಿಗೆಗಳ ಹಂಚಿಕೆಯಲ್ಲಿ ಪ.ಜಾತಿ/ ಪ.ವರ್ಗಗಳಿಗೆ ಮೀಸಲಾತಿ ನೀಡಲಾಗಿದೆಯೇ ; ನೀಡಿದ್ದಲ್ಲಿ, ಯಾವ ಯಾವ ಮಳಿಗೆಗಳಲ್ಲಿ ಎಷ್ಟು ಜನರಿಗೆ ನೀಡಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳು.

**ಶ್ರೀ ಡಿ. ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)**

೬೬೬ (೬೯೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಒಟ್ಟು ಸಂಖ್ಯೆ ಎಷ್ಟು ; (ಇವುಗಳ ಹೆಸರು ಮತ್ತು ವಿಳಾಸ ವಿವರ ನೀಡುವುದು)



(ಆ) ಈ ಗೃಹ ನಿರ್ಮಾಣ ಸಂಘಗಳಲ್ಲಿ ನಿವೇಶನಗಳನ್ನು ನೀಡುವಾಗ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ನೀಡುವ ನಿಯಮ ಕಡ್ಡಾಯ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಸಂಘಗಳು ಎಷ್ಟೆಷ್ಟು ಮಂದಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗಗಳಿಗೆ ನೀಡಿದೆ ;

(ಇ) ಈ ಮೀಸಲಾತಿ ನಿಯಮಗಳನ್ನು ಪಾಲಿಸದ ಗೃಹ ನಿರ್ಮಾಣ ಸಂಘಗಳ ಸಂಖ್ಯೆ ಎಷ್ಟು ; ಈ ಮೀಸಲಾತಿ ನಿಯಮಗಳನ್ನು ಪಾಲಿಸದ ಯಾವ ಯಾವ ಸಂಘಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮವೇನು ?

## ಅಮಾಸೆ ಬೈಲು ಗ್ರಾಮ ಪಂಚಾಯತ್‌ನ ಬಾಗಿಮನೆ ಸೇತುವೆ ಕಾಮಗಾರಿ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೭ (೬೯೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರ ತಾಲ್ಲೂಕು ಅಮಾಸೆ ಬೈಲು ಗ್ರಾಮ ಪಂಚಾಯತ್‌ನ ಬಾಗಿಮನೆ ಸೇತುವೆ ಲೋಕೋಪಯೋಗಿ ಇಲಾಖೆಯ ಮೂಲಕ ಮಂಜೂರಾಗಿ, ಎರಡೆರಡು ಬಾರಿ ಟೆಂಡರ್ ಆಗಿದ್ದರೂ ಕಾಮಗಾರಿ ಪ್ರಾರಂಭಗೊಂಡಿಲ್ಲದಿರುವುದು ಏಕೆ ;

(ಆ) ಸದರಿ ಬಾಗಿಮನೆ ಸೇತುವೆ ಕಾಮಗಾರಿ ಪ್ರಾರಂಭವಾಗದಿರಲು ಕಾರಣಗಳೇನು ;

(ಇ) ಸದರಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಯಾವಾಗ ?

## ಭತ್ತದ ಬೆಳೆಗೆ ಬೆಂಬಲ ಬೆಲೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೮ (೬೯೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಭತ್ತದ ತಳಿಗಳು ಎಷ್ಟು ; ಅವು ಯಾವುವು ;

(ಆ) ರಾಜ್ಯದಲ್ಲಿ ಬೆಳೆಯುವ ಭತ್ತದ ಒಟ್ಟು ಪ್ರಮಾಣವೆಷ್ಟು ; (ಕ್ವಿಂಟಾಲ್‌ಗಳಲ್ಲಿ ಜಿಲ್ಲಾವಾರು ವಿವರ ನೀಡುವುದು)

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಭತ್ತದ ಬೆಳೆಗೆ ನೀಡುವ ಒಟ್ಟು ಬೆಂಬಲ ಬೆಲೆ ಎಷ್ಟು ;

(ಈ) ಈ ರೀತಿಯ ಬೆಂಬಲ ಬೆಲೆ ನೀಡಿಯೂ ಭತ್ತ ಖರೀದಿಯಲ್ಲಿ ರೈತರಿಗಾಗುವ ಕಿರುಕುಳ ಮತ್ತು ತೊಂದರೆಗಳನ್ನು ತಡೆಯಲು ಸರ್ಕಾರದ ಕ್ರಮವೇನು ;

(ಉ) ಕೃಷಿಗೆ ಮಹತ್ತರ ಕೊಡುಗೆ ನೀಡುತ್ತಿರುವ, ಭತ್ತ ಬೆಳೆಯುವ ರೈತರ ಹಿತರಕ್ಷಣೆಗೆ ಸರ್ಕಾರ ಕಾಲ ಕಾಲಕ್ಕೆ ಕೈಗೊಳ್ಳುವ ಕ್ರಮವೇನು ? (ಮಾಹಿತಿ ನೀಡುವುದು)



## ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳನ್ನಾಗಿ ಮೇಲ್ದರ್ಜೆಗೆ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೬೯ (೬೯೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಯನ್ನಾಗಿ ಮೇಲ್ದರ್ಜೆಗೇರಿಸುವ ಒಟ್ಟು ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿದೆ ; (ಜಿಲ್ಲಾವಾರು, ಪಂಚಾಯತಿವಾರು ಪೂರ್ಣವಾದ ವಿವರ ನೀಡುವುದು)

(ಆ) ಪ್ರಸ್ತಾವಿತ ಪಟ್ಟಣ ಪಂಚಾಯಿತಿಗಳಾಗಬೇಕಾದ ಗ್ರಾಮ ಪಂಚಾಯತಿಗಳ ಚುನಾವಣೆಯನ್ನು ಯಾವಾಗ ನಡೆಸಲಾಗುವುದು ;

(ಇ) ಚುನಾವಣೆ ನಂತರ ಅಥವಾ ಚುನಾವಣೆ ಪೂರ್ವದಲ್ಲಿ ಪಟ್ಟಣ ಪಂಚಾಯತಿಯಾಗಿ ಮೇಲ್ದರ್ಜೆಗೇರಿಸುವುದೇ ;

(ಈ) ಈ ಬಗ್ಗೆ ಸರ್ಕಾರದ ನಿಲುವೇನು ;

(ಉ) ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡವೇನು ? (ಪೂರ್ಣ ವಿವರ ನೀಡುವುದು)

## ಆಗುಂಬೆ ಘಾಟ್ ರಸ್ತೆಯ ಕಾಮಗಾರಿ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೦ (೯೮೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಯು ಸಂಪರ್ಕ ಕೊಂಡಿಯಾಗಿರುವ ಆಗುಂಬೆ ಘಾಟ್ ರಸ್ತೆಯ ಅಭಿವೃದ್ಧಿಗಾಗಿ ಹಿಂದಿನ ಸರ್ಕಾರ ಮಂಜೂರು ಮಾಡಿದ ೧೦ ಕೋಟಿ ಅನುದಾನ ವಿನಿಯೋಗವಾಗದೇ ಉಳಿದಿರುವುದು ನಿಜವೇ ;

(ಆ) ಆಗುಂಬೆ ಘಾಟ್ ರಸ್ತೆ ಅಭಿವೃದ್ಧಿ ಮಾಡುವ ಸಂಬಂಧ ಅರಣ್ಯ, ಪರಿಸರ ಇಲಾಖೆಯೂ ಸೇರಿದಂತೆ ಯಾವುದೇ ಆಡಳಿತಾತ್ಮಕ ತೊಂದರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಆಗುಂಬೆ ಘಾಟ್ ರಸ್ತೆಯ ಅಭಿವೃದ್ಧಿಯನ್ನು ಈಗಿನ ಸರ್ಕಾರ ಯಾವ ಸ್ವರೂಪದಲ್ಲಿ ಮಾಡಲಿದೆ ;

(ಈ) ಯಾವಾಗ ಕಾಮಗಾರಿಯನ್ನು ಮುಕ್ತಾಯಗೊಳಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ಸೌರ ವಿದ್ಯುತ್ ಯೋಜನೆಯ ಅನುಷ್ಠಾನ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೧ (೯೮೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸೌರ ವಿದ್ಯುತ್ ಉತ್ಪಾದನೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಸರ್ಕಾರ ಕೈಗೊಂಡ ಯೋಜನೆಗಳಾವುವು ;



(ಆ) ಈ ಸಂಬಂಧ ಸರ್ಕಾರ ಹೊರಡಿಸಿರುವ ಮಾರ್ಗ ಸೂಚಿಗಳಾವುವು ;

(ಇ) ಗ್ರಾಮೀಣ ಮಟ್ಟದಲ್ಲಿ ಸೌರ ವಿದ್ಯುತ್ ಉತ್ಪಾದನೆಯ ಯೋಜನೆಗಳ ಅನುಷ್ಠಾನಕ್ಕಿರುವ ತೊಡಕುಗಳೇನು ; (ವಿವರ ನೀಡುವುದು)

(ಈ) ಸೌರ ವಿದ್ಯುತ್ ಉತ್ಪಾದನೆಯ ಯೋಜನೆಗಳನ್ನು ಯಾವಾಗ ಅನುಷ್ಠಾನಕ್ಕೆ ತರಲಾಗುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ಮಾವು ಉತ್ಪನ್ನ ಹಾಗೂ ವಹಿವಾಟು.

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೬೭೨ (೭೬೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾವು ಬೆಳೆಯನ್ನು ಎಷ್ಟು ಎಕರೆ ಪ್ರದೇಶಗಳಲ್ಲಿ ಬೆಳೆಯಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಮಾವು ಉತ್ಪಾದನೆಯಲ್ಲಿ ಪ್ರತಿ ವರ್ಷ, ಎಷ್ಟು ವಹಿವಾಟು ನಡೆಸಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಉತ್ಪಾದನೆಯಾಗುವ ಮಾವಿನ ಬೆಳೆಗೆ ಅಂತರಾಷ್ಟ್ರೀಯ ಮಟ್ಟದಲ್ಲಿ ಎಷ್ಟು ಪ್ರಮಾಣದ ಬೇಡಿಕೆಯಿದೆ ; (ಪ್ರತಿ ಟನ್‌ಗೆ ನಿಗಧಿಪಡಿಸಿರುವ ಬೆಲೆ ಹಾಗೂ ಸರ್ಕಾರದಿಂದ ಕಲ್ಪಿಸಲಾಗಿರುವ ವ್ಯವಸ್ಥೆಗಳ ಸಂಪೂರ್ಣ ವಿವರಗಳನ್ನು ನೀಡುವುದು)

(ಈ) ರಾಜ್ಯದಲ್ಲಿ ಮಾವಿನ ಉಪ ಉತ್ಪನ್ನಗಳಾದ ಪಲ್ಪ್ ಮತ್ತು ಪಾನೀಯುಗಳನ್ನು ತಯಾರಿಸುವ ಘಟಕಗಳನ್ನು ತೆರೆಯಲಾಗಿದೆಯೇ ;

(ಉ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು ? (ಮಾಹಿತಿಯನ್ನು ನೀಡುವುದು)

## ವಿದ್ಯುತ್ ಉತ್ಪಾದನಾ ಪ್ರಮಾಣ.

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೬೭೩ (೭೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿದಿನ ಅವಶ್ಯಕತೆಯಿರುವ ವಿದ್ಯುತ್ತಿನ ಪ್ರಮಾಣವೆಷ್ಟು ; ಉತ್ಪತ್ತಿಯಾಗುತ್ತಿರುವ ಪ್ರಮಾಣವೆಷ್ಟು ; ಕೊರತೆಯಿರುವ ವಿದ್ಯುತ್ತನ್ನು ಯಾವ ಮೂಲಗಳಿಂದ ಪೂರೈಸಲಾಗುತ್ತದೆ ; (ಮಾಹಿತಿ ನೀಡುವುದು)

(ಆ) ವಿದ್ಯುತ್ತನ್ನು ಯಾವ ಯಾವ ಮೂಲಗಳಿಂದ ಉತ್ಪಾದಿಸಲಾಗುತ್ತಿದೆ ; ಅವುಗಳ ಪ್ರಮಾಣವೆಷ್ಟು ; (ಮಾಹಿತಿ ನೀಡುವುದು)

(ಇ) ಬೆಂಗಳೂರು ಮಹಾನಗರಕ್ಕೆ ಪ್ರತಿದಿನ ಅವಶ್ಯಕತೆಯಿರುವ ವಿದ್ಯುತ್ ಪ್ರಮಾಣವೆಷ್ಟು ; (ಮಾಹಿತಿ ನೀಡುವುದು)

(ಈ) ಮುಂದಿನ ದಿನಮಾನಗಳಲ್ಲಿ ವಿದ್ಯುತ್ ಕೊರತೆಯನ್ನು ನೀಗಿಸಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳೇನು ? (ಮಾಹಿತಿ ನೀಡುವುದು)



## ರೈತರ ಟ್ರ್ಯಾಕ್ಟರ್‌ಗೆ ಸಹಾಯಧನ ನೀಡುವ ಬಗ್ಗೆ.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೭೪ (೮೧೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರಿಗೆ ಟ್ರ್ಯಾಕ್ಟರ್ ತೆಗೆದುಕೊಳ್ಳಲು ಸರ್ಕಾರ ಎಂದಿನಿಂದ ಸಹಾಯಧನ ನೀಡಲು ಪ್ರಾರಂಭಿಸಿತು ;

(ಆ) ಪ್ರತಿ ವರ್ಷ ಎಷ್ಟು ರೈತರಿಗೆ ಈ ಯೋಜನೆ ತಲುಪಿದೆ ; (ವಿವರ ನೀಡುವುದು)

(ಇ) ಈ ವರ್ಷದ ಅವಧಿಯಲ್ಲಿ ರೈತರಿಗೆ ಸಹಾಯಧನ ನೀಡದಿರಲು ಕಾರಣವೇನು ; (ವಿವರ ಒದಗಿಸುವುದು)

(ಈ) ಹಾಗಿದ್ದಲ್ಲಿ, ಇನ್ನಾದರೂ ವಿಳಂಬ ಮಾಡದೆ ಯಾವ ಕಾಲಮಿತಿಯೊಳಗೆ ಸಹಾಯಧನ ನೀಡಲಾಗುವುದು ?

## ಬಡ್ಡಿ ರಿಯಾಯಿತಿ ಯೋಜನೆ.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೭೫ (೭೬೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಕಳೆದ ೨ ವರ್ಷಗಳಲ್ಲಿ ಬಡ್ಡಿ ರಿಯಾಯಿತಿ ಯೋಜನೆಯಡಿಯಲ್ಲಿ ಈವರೆಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಗಳಿಗೆ ಬಿಡುಗಡೆ ಮಾಡಿರುವ ಮೊತ್ತವೆಷ್ಟು ; (ಫಲಾನುಭವಿಗಳ

ವಿವರಗಳೊಂದಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳವಾರು ವಿವರ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಇಲಾಖೆಗೆ ಬಿಲ್ಲುಗಳನ್ನು ಸಲ್ಲಿಸಿದ್ದರೂ ಸಹ ಈವರೆಗೆ ಬಿಡುಗಡೆ ಮಾಡದಿರುವ ಮೊತ್ತವೆಷ್ಟು ; (ಫಲಾನುಭವಿಗಳ ವಿವರಗಳೊಂದಿಗೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳವಾರು ವಿವರ ಒದಗಿಸುವುದು)

(ಇ) ಈ ಮೊತ್ತವನ್ನು ಸರ್ಕಾರವು ಯಾವಾಗ ಬಿಡುಗಡೆಗೊಳಿಸುವುದು ;

(ಈ) ಫಲಾನುಭವಿಗಳಿಗೆ ಆಗುತ್ತಿರುವ ತೊಂದರೆ ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪದ್ದತಿ.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೭೬ (೭೭೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪದ್ಧತಿ ಜಾರಿಗೆ ಬಂದಿದ್ದು ಯಾವಾಗ ;

(ಆ) ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸರ್ಕಾರ ಸಮಿತಿಯನ್ನೇನಾದರು ರಚಿಸಿದೆಯೇ ;

(ಇ) ಹಾಗಿದ್ದಲ್ಲಿ, ಸಮಿತಿಯಲ್ಲಿರುವ ಸದಸ್ಯರುಗಳ ಸಂಖ್ಯೆ ಎಷ್ಟು ; (ಹೆಸರು ಮತ್ತು ವಿಳಾಸಗಳ ಪೂರ್ಣ ವಿವರಗಳನ್ನು ನೀಡುವುದು)

(ಈ) ಈ ಇ.ಎಂ.ಡಿ ಹಣದಿಂದ ಬಂದ ಬಡ್ಡಿ ಹಣವನ್ನು ಸರ್ಕಾರ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸುತ್ತಿದೆ ?(ವಿವರ ನೀಡುವುದು)



## ರಾಜ್ಯದ ವಿವಿಧ ಸಹಕಾರಿ ಸಂಘಗಳಲ್ಲಿ ಸದಸ್ಯರಿಗೆ ಸಾಲ ಹಂಚಿಕೆ.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೬೭೭ (೭೭೧) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪ್ರಾಥಮಿಕ ಹಂತದ ಸೇವಾ ಸಹಕಾರ ಸಂಘಗಳ ಸಂಖ್ಯೆ ಮತ್ತು ಪಿ.ಸಿ.ಎ.ಆರ್.ಡಿ ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಎರಡೂ ಸಹಕಾರಿ ಸಂಘಗಳಲ್ಲಿ ಸದಸ್ಯತ್ವವನ್ನು ಪಡೆದಿರುವಂತಹ ಕುಟುಂಬಗಳ ಸಂಖ್ಯೆ ಎಷ್ಟು ;

(ಇ) ಕಳೆದ ಐದು ವರ್ಷಗಳಲ್ಲಿ ಈ ಸಂಸ್ಥೆಗಳ ಮುಖಾಂತರ ಹಂಚಿಕೆಯಾಗಿರುವ ಸಾಲದ ಮೊತ್ತ ಎಷ್ಟು ; (ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳ ವಿವರ ನೀಡುವುದು)

(ಈ) ತೀರುವಳಿಯಾಗಿರುವ ಹಣ ಎಷ್ಟು ?

## ಉಡುಪಿ ಜಿಲ್ಲೆಯಲ್ಲಿನ ಕೃಷಿಯಾಧಾರಿತ ಕುಟುಂಬಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೮ (೭೭೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಉಡುಪಿ ಜಿಲ್ಲೆಯಲ್ಲಿ ಸಂಪೂರ್ಣ ಕೃಷಿಯನ್ನೇ ಜೀವನಾಧಾರವಾಗಿ ಅವಲಂಭಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಭಾಗಶಃ ಕೃಷಿಯನ್ನು ಜೀವನಾಧಾರವಾಗಿ ಅವಲಂಭಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು;(ತಾಲ್ಲೂಕು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ರೈತರು ಕೃಷಿಯಿಂದ ದೂರಸರಿಯುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ ರೈತರಿಗೆ ಕೃಷಿಗೆ ಅಗತ್ಯವಾದ ಮೂಲಭೂತ ಅವಶ್ಯಕತೆಗಳನ್ನು ಪೂರೈಸಲು ಗ್ರಾಮಮಟ್ಟದಲ್ಲಿ ವ್ಯವಸ್ಥೆಯನ್ನು ಕಲ್ಪಿಸಲು ಯೋಜನೆ ಸರ್ಕಾರದ ಮುಂದಿದೆಯೇ; ರಾಜ್ಯದಲ್ಲಿ ಕೃಷಿಕರಿಗೆ ಸಹಾಯವಾಗುವಂತೆ ಮಾಡಲು ಗ್ರಾಮಕ್ಕೊಂದು ಕೃಷಿ ಸಹಾಯಕರನ್ನು ನೇಮಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಈ) ಉಡುಪಿ ಜಿಲ್ಲೆಯ ಬ್ರಹ್ಮಾವರದಲ್ಲಿ ಕೃಷಿ ಪಾಠಶಾಲೆಯನ್ನು ಮುಚ್ಚಲು ಕಾರಣವೇನು; ಇದನ್ನು ಪುನಃ ಪ್ರಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ?

## ರಾಜ್ಯದಲ್ಲಿ ಮೇಲ್ದರ್ಜೆಗೇರಿಸಲ್ಪಟ್ಟ ರಾಜ್ಯ ಹೆದ್ದಾರಿಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೭೯ (೭೭೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆ; ಮತ್ತು ಯಾವುವು;



(ಆ) ಮಲ್ಪೆಯಿಂದ ಮೊಳಕಾಲ್ಮೂರಿಗೆ ರಾಜ್ಯ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಲಾಗಿದೆಯೇ; (ಮೇಲ್ದರ್ಜೆಗೇರಿಸಿದಲ್ಲಿ ಪ್ರತಿ ಒದಗಿಸುವುದು)

(ಇ) ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳನ್ನು ಸುಂಕ ರಹಿತ (Toll Free) ರಸ್ತೆಗಳನ್ನಾಗಿ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗ ಕ್ರಮಕೈಗೊಳ್ಳಲಾಗುವುದು; ಇಲ್ಲವಾದಲ್ಲಿ ಕಾರಣವೇನು?

## ಉಡುಪಿ ಜಿಲ್ಲೆಯಲ್ಲಿನ ತೋಟಗಾರಿಕಾ ಫಾರಂಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೦ (೭೭೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಉಡುಪಿ ಜಿಲ್ಲೆಯಲ್ಲಿರುವ ತೋಟಗಾರಿಕಾ ಫಾರಂಗಳ ಸಂಖ್ಯೆ ಎಷ್ಟು; ಮತ್ತು ಯಾವುವು; ಅವುಗಳ ವಿಸ್ತೀರ್ಣವೆಷ್ಟು; ಅವುಗಳು ಇರುವ ಗ್ರಾಮ ಮತ್ತು ಸರ್ವೆ ನಂಬರ್ ಯಾವುದು;

(ಆ) ಉಡುಪಿ ಜಿಲ್ಲೆಯಲ್ಲಿರುವ ತೋಟಗಾರಿಕಾ ಫಾರಂಗಳಲ್ಲಿನ ಸ್ಥಳವನ್ನು ತೋಟಗಾರಿಕೆಗೆ ಬಳಸಿದ ಸ್ಥಳದ ವಿಸ್ತೀರ್ಣವೆಷ್ಟು; ಮತ್ತು ಬಳಸಲು ಬಾಕಿ ಇರುವ ಸ್ಥಳದ ವಿಸ್ತೀರ್ಣವೆಷ್ಟು; (ಫಾರಂವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ತೋಟಗಾರಿಕಾ ಫಾರಂಗಳ ಭೂಮಿಯನ್ನು ಬೇರೆ ಬೇರೆ ಸಂದರ್ಭಗಳಲ್ಲಿ ಬೇರೆ ಬೇರೆ ಇಲಾಖೆಗೆ ನೀಡಲಾದ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು; ಮತ್ತು ಬೇರೆ ಬೇರೆ ಇಲಾಖೆಗಳಿಂದ ಪಡೆದ ಭೂಮಿಯ ವಿಸ್ತೀರ್ಣವೆಷ್ಟು; (ಫಾರಂವಾರು ವಿವರ ನೀಡುವುದು)

(ಈ) ಉಡುಪಿ ಜಿಲ್ಲೆಯಲ್ಲಿ ಕೆಲವು ಅಧಿಕಾರಿಗಳ ರೈತವಿರೋಧಿ ನೀತಿಯಿಂದ ತೋಟಗಾರಿಕಾ ಇಲಾಖಾ ಭೂಮಿಯನ್ನು ಕ್ಯಾಬಿನೆಟ್‌ಗೆ ಹೋಗದೆ ಬೇರೆ ಬೇರೆ ಇಲಾಖೆಗಳಿಗೆ ಹಸ್ತಾಂತರಿಸುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಉಡುಪಿ ಜಿಲ್ಲೆಯಲ್ಲಿನ ಕೃಷಿ ಫಾರಂಗಳ ಕುರಿತು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೧ (೭೭೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿರುವ ಕೃಷಿ ಇಲಾಖಾ ಫಾರಂಗಳ ಸಂಖ್ಯೆ ಎಷ್ಟು; ಮತ್ತು ಯಾವುವು; ಮತ್ತು ಅವುಗಳ ವಿಸ್ತೀರ್ಣವೆಷ್ಟು; ಮತ್ತು ಅವುಗಳು ಇರುವ ಗ್ರಾಮ ಮತ್ತು ಸರ್ವೆ ನಂಬರ್ ಯಾವುದು;

(ಆ) ಉಡುಪಿ ಜಿಲ್ಲೆಯಲ್ಲಿರುವ ಕೃಷಿ ಇಲಾಖಾ ಫಾರಂಗಳಲ್ಲಿನ ಸ್ಥಳವನ್ನು ಕೃಷಿಗೆ ಬಳಸಿದ ಸ್ಥಳದ ವಿಸ್ತೀರ್ಣವೆಷ್ಟು; ಬಳಸಲು ಬಾಕಿ ಇರುವ ಸ್ಥಳದ ವಿಸ್ತೀರ್ಣವೆಷ್ಟು; (ಫಾರಂವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ಕೃಷಿ ಫಾರಂಗಳ ಭೂಮಿಯನ್ನು ಬೇರೆ ಬೇರೆ ಸಂದರ್ಭಗಳಲ್ಲಿ ಬೇರೆ, ಬೇರೆ ಇಲಾಖೆಗೆ ನೀಡಲಾದ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು; ಮತ್ತು ಬೇರೆ ಬೇರೆ ಇಲಾಖೆಗಳಿಂದ ಪಡೆದ ಭೂಮಿಯ ವಿಸ್ತೀರ್ಣವೆಷ್ಟು; (ಫಾರಂವಾರು ವಿವರ ನೀಡುವುದು)



(ಈ) ಉಡುಪಿ ಜಿಲ್ಲೆಯಲ್ಲಿ ಕೆಲವು ಅಧಿಕಾರಿಗಳ ರೈತವಿರೋಧಿ ನೀತಿಯಿಂದ ಕೃಷಿ ಇಲಾಖಾ ಭೂಮಿಯನ್ನು ಕ್ಯಾಬಿನೆಟ್‌ಗೆ ಹೋಗದೆ ಬೇರೆ ಬೇರೆ ಇಲಾಖೆಗಳಿಗೆ ಹಸ್ತಾಂತರಿಸುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಕೆ.ಆರ್.ಪೇಟೆ, ಹಾಸನ ಜಿಲ್ಲೆ ಕಲವಯ ರಸ್ತೆಗಳನ್ನು ರಾಜ್ಯ ಹೆದ್ದಾರಿಯನ್ನಾಗಿ ಪರಿವರ್ತಿಸುವುದು.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೨ (೮೩೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ಕೃಷ್ಣರಾಜಪೇಟೆ ತಾಲ್ಲೂಕಿನ ಕೊಟಗಹಳ್ಳಿ–ಸಂತೇಬಾಚಹಳ್ಳಿ–ಬೆಟ್ಟದಹಳ್ಳಿ, ಹಾಸನ ಜಿಲ್ಲೆಯ ಬೆಟ್ಟದಹಳ್ಳಿ–ಜುಟ್ಟನಹಳ್ಳಿ ಕ್ರಾಸ್, ಹಾಸನ ಜಿಲ್ಲೆಯ ಹಿರಿಸಾವೆ–ಡಿಡಗ, ತುಮಕೂರು ಜಿಲ್ಲೆಯ ದಿಡಗ–ನೊಣವಿನಕೆರೆ–ತಿಪಟೂರು ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ರಸ್ತೆಯ ಮೈಸೂರಿನಿಂದ ತಿಪಟೂರಿಗೆ ಅತ್ಯಂತ ಹತ್ತಿರವಾದ ಹಾಗೂ ನೇರವಾದ ಮಾರ್ಗವಾಗಿದ್ದು, ಮಂಡ್ಯ–ಹಾಸನ–ತುಮಕೂರು ಜಿಲ್ಲೆಗಳ ಗ್ರಾಮಾಂತರ ಪ್ರದೇಶದಲ್ಲಿ ಹಾದು ಹೋಗುವುದರಿಂದ ಈ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಪರಿವರ್ತಿಸುವುದರಿಂದ ವಾಹನ ಸಂಚಾರ ಹಾಗೂ ಸಾಗಾಣಿಕೆಗೆ ಅತ್ಯಂತ ಅನುಕೂಲವಾಗಿದ್ದು, ಗ್ರಾಮಾಂತರ ಪ್ರದೇಶಗಳ ಅಭಿವೃದ್ಧಿಗೆ ಸಹಕಾರಿಯಾಗುವುದಿಲ್ಲವೇ ;

(ಇ) ಹಾಗಿದ್ದಲ್ಲಿ, ಮೇಲ್ಕಂಡ ರಸ್ತೆಯನ್ನು ರಾಜ್ಯ ಹೆದ್ದಾರಿಯನ್ನಾಗಿ ಪರಿವರ್ತಿಸಿ ಅಭಿವೃದ್ಧಿ ಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಮಂಡ್ಯ ಜಿಲ್ಲೆಯ ರೈತರಿಗೆ ಟರ್‌ಪಲ್ ವಿತರಣೆ .

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೩ (೭೭೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಟರ್‌ಪಲ್‌ಗಳನ್ನು ವಿತರಿಸಲಾಗಿದೆ; ಅದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ನೀಡಿದ ಟರ್‌ಪಲ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಪಂಚಾಯತಿವಾರು ಹೆಸರು ಹಾಗೂ ವಿಳಾಸದೊಂದಿಗೆ ವಿವರ ನೀಡುವುದು)

(ಆ) ಈ ಟರ್‌ಪಲ್ ವಿತರಣೆಗಾಗಿ ಕಳೆದ ೨ ವರ್ಷಗಳಿಂದ ಬಿಡುಗಡೆಯಾದ ಹಣ ಎಷ್ಟು; ಖರ್ಚಾದ ಹಣ ಎಷ್ಟು;

(ಇ) ಟರ್‌ಪಲ್‌ಗಳನ್ನು ವಿತರಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಯಾವಾಗ ಟರ್‌ಪಲ್‌ಗಳನ್ನು ವಿತರಿಸಲಾಗುತ್ತದೆ ; ವಿತರಿಸಲು ವಿಳಂಬವಾಗಲು ಕಾರಣಗಳೇನು ?



## ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸುವ ಬಗ್ಗೆ.

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೮೪ (೭೮೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೆ ಪರಿವರ್ತಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯ್ತಿಗಳನ್ನು ಪಟ್ಟಣ ಪಂಚಾಯ್ತಿಗಳಾಗಿ ಪರಿವರ್ತಿಸಲಾಗುವುದು ; (ವಿವರ ನೀಡುವುದು)

(ಇ) ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಎಂದು ಪರಿವರ್ತಿಸಲಾಗುವುದು ?

## ಮುಖ್ಯಾಧಿಕಾರಿ ಶ್ರೇಣಿ–೨ ಹುದ್ದೆಗಳು.

**ಶ್ರೀ ಭಾನುಪ್ರಕಾಶ (ವಿಧಾನ ಸಭೆಯಿಂದ ಚುನಾಯಿತರಾದವರು):–**

೬೮೫ (೮೧೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಖಾಲಿ ಇರುವ ಮುಖ್ಯಾಧಿಕಾರಿ ಶ್ರೇಣಿ–೨ ಹುದ್ದೆಗಳ ಸಂಖ್ಯೆ ಎಷ್ಟು ; ಆ ಪೈಕಿ ನೇರ ನೇಮಕಾತಿ ಹುದ್ದೆಗಳ ಸಂಖ್ಯೆ

ಎಷ್ಟು ; ವಿವಿಧ ವೃಂದದ ಹುದ್ದೆಗಳಿಂದ ವಿಲೀನಗೊಳಿಸುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಆ) ಮುಖ್ಯಾಧಿಕಾರಿ ಶ್ರೇಣಿ–೨ ಹುದ್ದೆಗಳಿಗೆ ಅರ್ಹ ಪೌರಸೇವಾ ನೌಕರರನ್ನು ವಿಲೀನಗೊಳಿಸುವ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಎಷ್ಟು ಹುದ್ದೆಗಳಿಗೆ ಸಲ್ಲಿಸಲಾಗಿದೆ ; (ವೃಂದವಾರು ಮಾಹಿತಿ ನೀಡುವುದು)

(ಇ) ಅರ್ಹ ಪೌರಸೇವಾ ನೌಕರರನ್ನು ಮುಖ್ಯಾಧಿಕಾರಿ ಶ್ರೇಣಿ–೨ ಹುದ್ದೆಗೆ ವಿಲೀನಗೊಳಿಸಿ ನಿಯೋಜನೆ/ಸ್ವಂತ ವೇತನ ಶ್ರೇಣಿಯಲ್ಲಿರುವವರನ್ನು ಮಾತ್ರ ಇಲಾಖೆಗೆ/ಮೂಲ ಹುದ್ದೆಗೆ ಹಿಂದಿರುಗಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; (ವಿವರ ನೀಡುವುದು)

(ಈ) ಅನ್ಯ ಇಲಾಖೆಗಳಲ್ಲಿ ಕಾಲಕಾಲಕ್ಕೆ ಮುಂಬಡ್ತಿ ನೀಡುತ್ತಿರುವಂತೆ ಪೌರಾಡಳಿತ ಇಲಾಖೆಯಲ್ಲಿ ನೀಡಲಾಗುತ್ತಿದೆಯೇ ? (ಇಲ್ಲದಿದ್ದಲ್ಲಿ, ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ರೈತ ಸಂಪರ್ಕ ಕೇಂದ್ರಗಳು.

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೬ (೭೮೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ರೈತ ಸಂಪರ್ಕ ಕೇಂದ್ರಗಳು ಎಷ್ಟು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಎಷ್ಟು ;



(ಆ) ರೈತ ಸಂಪರ್ಕ ಕೇಂದ್ರಗಳಿಗೆ ಯಾವ ಯಾವ ಸೌಲಭ್ಯವನ್ನು ಒದಗಿಸಲಾಗಿದೆಯೇ ;

(ಇ) ಆತ್ಮ ಯೋಜನೆ ಅಡಿಯಲ್ಲಿ ನೇಮಕಗೊಂಡ ಸಿಬ್ಬಂದಿಗಳು ಎಷ್ಟು, ಆ ಸಿಬ್ಬಂದಿಗಳಿಗೆ ಕೆಲವು ತಿಂಗಳಿಂದ ವೇತನ ಪಾವತಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕೃಷಿ ಮಾರುಕಟ್ಟೆ

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೭ (೭೮೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಕೃಷಿ ಮಾರುಕಟ್ಟೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ;

(ಆ) ಯಾದಗಿರಿ, ಕಲಬುರಗಿ, ಸುರಪುರ ಉಪ ಮಾರುಕಟ್ಟೆಗಳಲ್ಲಿ ಬರುವ ಆದಾಯ ಎಷ್ಟು ;

(ಇ) ಉಪ ಮಾರುಕಟ್ಟೆಯಲ್ಲಿ ಸಂಗ್ರಹ ಮಾಡಿದ ಹಣ ಎಷ್ಟು ; ವೆಚ್ಚ ಮಾಡಿದ ಹಣ ಎಷ್ಟು ;

(ಈ) ಉಪ ಮಾರುಕಟ್ಟೆಗಳ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ವಿದ್ಯುತ್ ಬಿಲ್ಲುಗಳ ಬಗ್ಗೆ.

**ಶ್ರೀ ಅಲ್ಲಮ ಪ್ರಭುಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೬೮೮ (೭೮೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ವಿದ್ಯುತ್ ಬಿಲ್ಲುಗಳಿಂದ ಪಾವತಿಯಾದ ಹಣ ಎಷ್ಟು ;

(ಆ) ಗ್ರಾಮಾಂತರ ಪ್ರದೇಶಗಳಿಗೆ ಯಾವ ದರದಲ್ಲಿ ವಿದ್ಯುತ್ತನ್ನು ನೀಡಲಾಗುತ್ತಿದೆ ಮತ್ತು ಪಟ್ಟಣಗಳಿಗೆ ಯಾವ ದರದಲ್ಲಿ ವಿದ್ಯುತ್ ನೀಡಲಾಗುತ್ತಿದೆ ;

(ಇ) ಅದರಲ್ಲಿ ಗ್ರಾಮಾಂತರ ಪ್ರದೇಶಗಳಿಂದ ಪಾವತಿಯಾದ ಹಣ ಎಷ್ಟು ಪಟ್ಟಣಗಳಿಂದ ಪಾವತಿಯಾದ ಹಣ ಎಷ್ಟು ?

## ಕೃಷಿ ಮಾರುಕಟ್ಟೆ ಕುರಿತು.

**ಶ್ರೀ ವೈ. ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೮೯ (೮೨೮) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಬ್ಯಾಟರಾಯನಪುರದಲ್ಲಿ ಕೃಷಿ ಮಾರುಕಟ್ಟೆ ನಿರ್ಮಿಸುವ ನಿರ್ಧಾರ ಕೈಗೊಂಡಿದ್ದು ಯಾವಾಗ ;

(ಆ) ಈ ಕೃಷಿ ಮಾರುಕಟ್ಟೆಗಾಗಿ ರೈತರಿಂದ ವಶಪಡಿಸಿಕೊಂಡ ಜಮೀನು ಎಷ್ಟು ; (ಸರ್ವೇ ನಂಬರ್‌ವಾರು ವಿವರ ನೀಡುವುದು)

(ಇ) ಈ ರೈತರಿಗೆ ನೀಡಲಾಗಿರುವ ಪರಿಹಾರ ಧನವೆಷ್ಟು ; (ರೈತರವಾರು, ಎಕರೆವಾರು ವಿವರ ನೀಡುವುದು)



(ಈ) ಪರಿಹಾರ ನೀಡಿಕೆಯಲ್ಲಿ ರೈತರಿಗೆ ಆಗಿರುವ ಅನ್ಯಾಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬೆಂಗಳೂರು ಅಂತರ್‌ರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೋಗುವ ಹಾಗೂ ಜಕ್ಕೂರು ಏರ್ ಪೋರ್ಟ್ ರಸ್ತೆಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಈ ಮಾರ್ಕೆಟ್‌ನಿಂದ ಸಾರ್ವಜನಿಕರಿಗಾಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದರೆ, ಈ ಉದ್ದೇಶಿತ ಮಾರುಕಟ್ಟೆಯನ್ನು ಬೇರೆ ಕಡೆ ಸ್ಥಳಾಂತರಿಸಲು ಸರ್ಕಾರ ಚಿಂತಿಸಿದೆಯೇ ?

## ಸೋಲಾರ್ ವಿದ್ಯುತ್ ಉತ್ಪಾದನೆ.

**ಶ್ರೀ ವೈ. ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೦ (೭೮೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉತ್ಪಾದಿಸುವ ಸೋಲಾರ್ ವಿದ್ಯುತ್ ಪ್ರಮಾಣ ಎಷ್ಟು;

(ಆ) ಸೋಲಾರ್ ವಿದ್ಯುತ್ತನ್ನು ಉತ್ಪಾದಿಸುವ ಕಂಪನಿಗಳು ಯಾವುವು;

(ಇ) ಸೋಲಾರ್ ವಿದ್ಯುತ್ತನ್ನು ಉತ್ಪಾದಿಸುವ ಕಂಪನಿಗಳಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳೇನು;

(ಈ) ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕರ್ನಾಟಕ ಬೀಜ ನಿಗಮದ ಕಾರ್ಯ ಚಟುವಟಿಕೆಗಳು.

**ಶ್ರೀ ವೈ. ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೧ (೭೮೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬೀಜ ನಿಗಮ ಅಸ್ತಿತ್ವಕ್ಕೆ ಬಂದಿದ್ದು ಯಾವಾಗ;

(ಆ) ರಾಜ್ಯದಲ್ಲಿನ ಕೃಷಿ ಚಟುವಟಿಕೆಗಳಿಗೆ ಅವಶ್ಯಕತೆ ಇರುವ ಬಿತ್ತನೆ ಬೀಜದ ಪ್ರಮಾಣ ಎಷ್ಟು; (ಬೆಳೆವಾರು, ತಳಿವಾರು ಮಾಹಿತಿ ನೀಡುವುದು)

(ಇ) ರಾಜ್ಯ ಬೀಜ ನಿಗಮದಿಂದ ಪೂರೈಸಲಾಗುವ ಬಿತ್ತನೆ ಬೀಜದ ಪ್ರಮಾಣ ಎಷ್ಟು; (ಬೆಳೆವಾರು, ತಳಿವಾರು ಮಾಹಿತಿ ನೀಡುವುದು)

(ಈ) ಈ ಬಿತ್ತನೆ ಬೀಜಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕರ್ನಾಟಕ ಬೀಜ ನಿಗಮದ ಪಾತ್ರವೇನು; ಸದರಿ ನಿಗಮದ ಕಾರ್ಯ ಚಟುವಟಿಕೆಗಳ ವಿವರ ನೀಡುವುದು;

(ಉ) ಇದುವರೆಗೂ ಕರ್ನಾಟಕ ಬೀಜ ನಿಗಮ ಅಭಿವೃದ್ಧಿಪಡಿಸಿರುವ ತಳಿಗಳು ಯಾವುವು; ತಳಿವಾರುಇ ಮಾಹಿತಿ ನೀಡುವುದು;

(ಊ) ಅಭಿವೃದ್ಧಿಪಡಿಸಿರುವ ಬಿತ್ತನೆ ಬೀಜದ ಪ್ರಮಾಣ ಎಷ್ಟು? (ವಿವರ ನೀಡುವುದು)



## ಕೃಷಿ ಮಾರುಕಟ್ಟೆಗಳ ವಿವರ.

**ಶ್ರೀ ವೈ. ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೨ (೭೮೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು ;

(ಆ) ಅತೀ ಹೆಚ್ಚು ವಹಿವಾಟು ನಡೆಸುತ್ತಿರುವ ಕೃಷಿ ಮಾರುಕಟ್ಟೆಗಳು ಯಾವುವು ;

(ಇ) ಕೃಷಿ ಮಾರುಕಟ್ಟೆಯಲ್ಲಿ ಬರುವ ಲಾಭಾಂಶದಿಂದ ಆ ಭಾಗದ ರೈತರಿಗೆ ಆಗುವ ಅನುಕೂಲಗಳೇನು ?

## ಚತುಷ್ಪಥ ರಸ್ತೆಗಳ ಬಗ್ಗೆ.

**ಶ್ರೀ ವೈ. ಎ. ನಾರಾಯಣ ಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೬೯೩ (೭೮೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಲೋಕೋಪಯೋಗಿ ರಸ್ತೆಗಳ ಸಂಖ್ಯೆ ಹಾಗೂ ಅವುಗಳ ಉದ್ದ ಎಷ್ಟು ;

(ಆ) ಈ ರಸ್ತೆಗಳಲ್ಲಿ ಚತುಷ್ಪಥ ರಸ್ತೆಗಳು ಯಾವುವು; ಹಾಗೂ ಅವುಗಳ ಉದ್ದ ಎಷ್ಟು ;

(ಇ) ಲೋಕೋಪಯೋಗಿ ಇಲಾಖೆಯಡಿಯಲ್ಲಿ ಬರುವ ರಸ್ತೆಗಳನ್ನು ಕನಿಷ್ಟ ಪಕ್ಷ ೧೦.೫ ಮೀಟರ್ ರಸ್ತೆಯನ್ನಾಗಿ ಅಗಲ ಮಾಡುವುದಕ್ಕೆ ಎಷ್ಟು ಹಣ ಖರ್ಚಾಗುತ್ತದೆ, ಇದರ ಕಾಲಮಿತಿಯೇನು ?

## ರೈತರ ಅಕ್ರಮ ಐ.ಪಿ.ಸೆಟ್‌ಗಳನ್ನು ಸಕ್ರಮ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೯೪ (೬೯೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ರೈತರ ಅಕ್ರಮ ಐ.ಪಿ.ಸೆಟ್‌ಗಳು ಇರುತ್ತವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಷ್ಟು ಅಕ್ರಮ ಸೆಟ್‌ಗಳು ಇರುತ್ತವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಅಕ್ರಮ ವಿದ್ಯುತ್ ಐ.ಪಿ.ಸೆಟ್‌ಗಳನ್ನು ಸಕ್ರಮಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗುತ್ತಿದೆ ;

(ಈ) ಬೆಳೆ ಹಾನಿಯಾಗಿದ್ದು ಹಾಗೂ ಅತಿವೃಷ್ಟಿ ಮತ್ತು ಅನಾವೃಷ್ಟಿಯಿಂದ ಕಂಗಾಲಿದ್ದು, ಇದೊಂದು ಬಾರಿಗೆ ಯಾವುದೇ ಹಣ ರೈತರಿಂದ ತುಂಬಿಸಿಕೊಳ್ಳದೇ ಮಾನವೀಯ ದೃಷ್ಟಿಯಿಂದ ಅವರ ಅಕ್ರಮ ಐ.ಪಿ.ಸೆಟ್‌ಗಳನ್ನು ಸಕ್ರಮಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಇದರಿಂದ ಸರ್ಕಾರದ ಮೇಲೆ ಎಷ್ಟು ಆರ್ಥಿಕ ಹೊರೆ ಬೀಳುವುದು ?



## ನಿಷ್ಕ್ರೀಯವಾಗುತ್ತಿರುವ ತೋಟಗಾರಿಕೆ ಇಲಾಖೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೯೫ (೬೯೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು ಇವರ ಅಧೀನದಲ್ಲಿ ಎಷ್ಟು ಜಂಟಿ ನಿರ್ದೇಶಕರು, ಉಪ ನಿರ್ದೇಶಕರು ಹಾಗೂ ಹಿರಿಯ ತೋಟಗಾರಿಕೆ ಕಛೇರಿಗಳು ಇರುತ್ತವೆ; (ವಿವರ ನೀಡುವುದು)

(ಆ) ನಿರ್ದೇಶಕರು, ತೋಟಗಾರಿಕೆ ಇಲಾಖೆ, ಇವರು ಒಂದು ವರ್ಷದಲ್ಲಿ ತಮ್ಮ ಅಧೀನದಲ್ಲಿ ಬರುವ ಯಾವ–ಯಾವ ಕಛೇರಿಗಳಿಗೆ ಎಂದು ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಿರುವರು; (ವಿವರ ನೀಡುವುದು)

(ಇ) ಜಂಟಿ ನಿರ್ದೇಶಕರು, ತೋಟಗಾರಿಕೆ ಇಲಾಖೆ ಬೆಳಗಾವಿ ಹಾಗೂ ಉಪ ನಿರ್ದೇಶಕರು, ತೋಟಗಾರಿಕೆ ಇಲಾಖೆ ಬೆಳಗಾವಿ ಇವರು ತಮ್ಮ ಅಧೀನದಲ್ಲಿ ಬರುವ ಎಷ್ಟು ಕಛೇರಿಗಳಿಗೆ ಹಾಗೂ ಎಂದು ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಿರುವರು; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ರೈತರಿಗೆ ಯಾವ–ಯಾವ ಸಹಾಯ ಒದಗಿಸಲಾಗಿದೆ; (ವಿವರ ನೀಡುವುದು) ತೋಟಗಾರಿಕೆ ನಿರ್ದೇಶಕರಾಗಿದ್ದ ಡಾ:ಮರಿಗೌಡ ಇವರು ತಾಲ್ಲೂಕು ಮಟ್ಟದಲ್ಲಿ ಪ್ರಾರಂಭಿಸಿದ ಕಛೇರಿಗಳು ನಿಷ್ಕ್ರೀಯವಾಗುತ್ತಿರುವ ಸಂಗತಿ ನಿಜವೇ;

(ಉ) ಯಾವುದೇ ಕಛೇರಿಯಲ್ಲಿ ಮಾಹಿತಿ ಹೇಳುವವರು ಹಾಗೂ ಯಾವುದೇ ತರಹದ ಹಣ್ಣಿನ ಗಿಡದ ಸಸಿಗಳು (ಮೊದಲು ಡಾ: ಮರಿಗೌಡ ಇವರು ನಿರ್ದೇಶಕರಾಗಿದ್ದ ಅವಧಿಯಲ್ಲಿ) ಬೆಳಗಾವಿ ಜಿಲ್ಲೆಯಲ್ಲಿ ಸಿಗದೇ ಇರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಬೈಲಹೊಂಗಲ ನಗರದಲ್ಲಿ ಇರುವ ಹಿರಿಯ ಸಹಾಯಕ ನಿರ್ದೇಶಕರ ಕಛೇರಿ ಕಟ್ಟಡವನ್ನು ಎಂದು ಕಟ್ಟಲಾಗಿದೆ; ಈ ಕಟ್ಟಡ ಕಟ್ಟಿದಾಗಿನಿಂದಲೂ ಸುಣ್ಣ-ಬಣ್ಣ ಹಚ್ಚದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಎ) ಇಲಾಖೆಯಲ್ಲಿ ಎಷ್ಟೋ ವರ್ಷಗಳಿಂದ ಹುದ್ದೆಗಳು ಖಾಲಿ ಇದ್ದರೂ ತುಂಬದೇ ಇರುವ ಸಂಗತಿ ನಿಜವೇ; ಹಾಗೂ ತುಂಬಲು ಯಾವ-ಯಾವ ಕ್ರಮ ಕೈಗೊಳ್ಳಲಾಗಿದೆ; ಖಾನಾಪೂರ ತಾಲ್ಲೂಕಿನ ಕಕ್ಕೇರಿ ಹಾಗೂ ಸುತ್ತ-ಮುತ್ತಲಿನ ಹಳ್ಳಿಗಳಲ್ಲಿ ಖಾಸಗಿಯವರು ಎಲ್ಲ ತರಹದ ಮಾವಿನ ಸಸಿಗಳನ್ನು ತಯಾರಿಸಿ ಹೊರ ರಾಜ್ಯಕ್ಕೆ ಕಳುಹಿಸುತ್ತಿದ್ದು, ಅವರಿಗೆ ಸರ್ಕಾರದವರು ಸಹಾಯ ಮಾಡದೇ ಇರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇವರಿಗೆ ಯಾವ ಸಹಾಯ ಮಾಡಲಾಗುವುದು ?



## ಬೆಳಗಾವಿ ವಿಭಾಗದಲ್ಲಿ ಸಹಕಾರಿ ಸಂಘಗಳು ನಿಷ್ಕ್ರೀಯವಾಗುತ್ತಿರುವ ಬಗ್ಗೆ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೬೯೬ (೭೮೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಂಯುಕ್ತ ನಿಬಂಧಕರು ಸಹಕಾರಿ ಸಂಘಗಳು ಬೆಳಗಾವಿ ಪ್ರಾಂತ ಇವರ ವ್ಯಾಪ್ತಿಯಲ್ಲಿ ಎಷ್ಟು ಜಿಲ್ಲೆಗಳು ಬರುತ್ತವೆ ; (ವಿವರ ನೀಡುವುದು)

(ಆ) ಇವರ ಅಧೀನದಲ್ಲಿ ಬರುವ ಉಪ ನಿಬಂಧಕ ಸಹಕಾರಿ ಸಂಘಗಳು ಎಷ್ಟು ; (ವಿವರ ನೀಡುವುದು)

(ಇ) ಇವರ ಅಧೀನದಲ್ಲಿ ಬರುವ ಸಹಾಯಕ ನಿಬಂಧಕ ಸಹಕಾರಿ ಸಂಘಗಳು ಎಷ್ಟು ; (ವಿವರ ನೀಡುವುದು)

(ಈ) ಕಳೆದ ಒಂದು ವರ್ಷದಲ್ಲಿ ಸಂಯುಕ್ತ ನಿಬಂಧಕರು ಸಹಕಾರಿ ಸಂಘಗಳು, ಬೆಳಗಾವಿ ಇವರು ಎಷ್ಟು ಉಪ ನಿಬಂಧಕ ಸಹಕಾರಿ ಸಂಘಗಳಿಗೆ ಹಾಗೂ ಸಹಾಯಕ ನಿಬಂಧಕ ಸಹಕಾರಿ ಸಂಘಗಳಿಗೆ ಅನಿರೀಕ್ಷಿತ ಭೇಟಿ (Surprise visit) ಕೊಟ್ಟು ತಪಾಸಣೆ ಮಾಡಿರುವರು ; ಅವರು ಯಾವ-ಯಾವ ತಾರೀಖಿಗೆ ಯಾವ ಕಛೇರಿಗೆ, ಯಾವ ಸಹಕಾರಿ ಸಂಘಗಳಿಗೆ (ಸೊಸೈಟಿಗಳಿಗೆ) ಭೇಟಿ ಕೊಟ್ಟಿರುವರು ; (ತಾರೀಖು, ಕಛೇರಿ, ಸಹಕಾರಿ ಸಂಘಗಳ (ಸೊಸೈಟಿ) ಹೆಸರುಗಳೊಂದಿಗೆ ವಿವರ ನೀಡುವುದು)

(ಉ) ಬೆಳಗಾವಿ ವಿಭಾಗ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಸಹಕಾರಿ ಅಧಿಕಾರಿಗಳಿಗೆ ಹೆಚ್ಚುವರಿ ಹುದ್ದೆಗಳನ್ನು ವಹಿಸಿದ್ದರಿಂದ

ಸಾರ್ವಜನಿಕರಿಗೆ ಅಧಿಕಾರಿಗಳು ಸಿಗದೇ ಇರುವುದರಿಂದ ಮೂಲ ಇಲಾಖೆ ಮಟ್ಟದ ಕೆಲಸ ಸ್ಥಗಿತಗೊಂಡ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹೆಚ್ಚುವರಿ ಕೆಲಸ ವಹಿಸಲು ಸಹಕಾರಿ ಇಲಾಖೆಯಲ್ಲಿ ಅಧಿಕಾರಿಗಳ ಕೊರತೆ ಇದೆಯೇ ; ಹಾಗಿದ್ದಲ್ಲಿ, ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಲಾಗುವುದೇ ;

(ಋ) ಉಪ ನಿಬಂಧಕರು ಸಹಕಾರಿ ಸಂಘ, ಬೆಳಗಾವಿ ಇವರು ಒಂದು ವರ್ಷದಲ್ಲಿ ಎಷ್ಟು ಸಹಾಯಕ ನಿಬಂಧಕರ ಕಛೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಿರುವರು ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ಕೃಷಿ ಇಲಾಖೆಯಿಂದ ರೈತರಿಗೆ ಒದಗಿಸಿದ ಸಹಾಯದ ಬಗ್ಗೆ ಮಾಹಿತಿ.

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೬೯೭ (೭೯೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಂಟಿ ಕೃಷಿ ನಿರ್ದೇಶಕರ ಅಧೀನದಲ್ಲಿ ಎಷ್ಟು ಉಪ ಕೃಷಿ ನಿರ್ದೇಶಕರು ಹಾಗೂ ಸಹಾಯ ಕೃಷಿ ನಿರ್ದೇಶಕರ ಕಛೇರಿಗಳು ಬರುತ್ತವೆ ; (ವಿವರ ಒದಗಿಸುವುದು)

(ಆ) ಜಂಟಿ ಕೃಷಿ ನಿರ್ದೇಶಕರು ಒಂದು ವರ್ಷದಲ್ಲಿ ಎಷ್ಟು ಉಪ ಕೃಷಿ ನಿರ್ದೇಶಕರ ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಿರುವರು ; (ವಿವರ ನೀಡುವುದು)



(ಇ) ಉಪ ಕೃಷಿ ನಿರ್ದೇಶಕರು ಒಂದು ವರ್ಷದಲ್ಲಿ ತಮ್ಮ ಅಧೀನದಲ್ಲಿ ಬರುವ ಎಷ್ಟು ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಹಾಗೂ ತಮ್ಮ ಅಧೀನದಲ್ಲಿ ಬರುತ್ತಿರುವ ಎಷ್ಟು ಜಲಾನಯನ ಕಛೇರಿಗಳಿಗೆ ಮತ್ತು ರೈತ ಸಂಪರ್ಕ ಕೇಂದ್ರಗಳಿಗ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ಮಾಡಿರುವರು ; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಕೃಷಿ ಇಲಾಖೆಯವರು ರೈತರಿಗೆ ಯಾವ ಯಾವ ಸಹಾಯ ಮಾಡಿರುವರು ;

(ಉ) ಈ ವರ್ಷದ ಆಯವ್ಯಯದಲ್ಲಿ ಒದಗಿಸಲಾಗಿರುವ ಹಣ ಎಷ್ಟು ; ಖರ್ಚಾಗಿರುವ ಹಣವೆಷ್ಟು, ಎಷ್ಟು–ಎಷ್ಟು ಹಣ ಯಾವ–ಯಾವ ಬಾಬ್ತಿಗೆ ಒದಗಿಸಲಾಗಿತ್ತು ; ಹಾಗೂ ಎಷ್ಟು ಹಣ ಖರ್ಚಾಗಿರುವುದು (ಬಾಬ್ತುವಾರು ವಿವರ ನೀಡುವುದು)

(ಊ) ಈ ವರ್ಷ ಹತ್ತಿಯ ಬೆಳೆಯು ನಾಶವಾಗಿದ್ದರೂ ಇಲಾಖೆಯಿಂದ ಯಾವುದೇ ಸಹಾಯ ಮಾಡದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ವಿದ್ಯುತ್ ಸರಬರಾಜಿನಲ್ಲಿ ಆಗುತ್ತಿರುವ ಪ್ರಸರಣ ನಷ್ಟ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೬೯೮ (೭೯೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುತ್ ಸರಬರಾಜಿನಲ್ಲಿ ಆಗುತ್ತಿರುವ ಒಟ್ಟು ಪ್ರಸರಣ ನಷ್ಟವೇನು ; (ಟ್ರಾನ್ಸ್‌ಮಿಷನ್ ಲಾಸ್)

(ಆ) ಇದು ಎಲ್ಲಾ ಸರ್ಕಾರಿ ಸ್ವಾಮ್ಯದ ೫ ವಿದ್ಯುತ್ ಕಂಪನಿಗಳಲ್ಲಿ ಸಮನಾಗಿದೆಯೇ ; (ಕಂಪನಿವಾರು ವಿವರ ನೀಡುವುದು)

(ಇ) ಜಿಲ್ಲಾವಾರು ಪ್ರಸರಣ ಮತ್ತು ಹಂಚಿಕೆಯಲ್ಲಿ ಆಗುತ್ತಿರುವ ವಿದ್ಯುತ್ತಿನ ನಷ್ಟದ ವಿವರ ಇದೆಯೇ ; (ವಿವರ ನೀಡುವುದು)

(ಈ) ಇದ್ದಲ್ಲಿ, ಇಂತಹ ದೊಡ್ಡ ಪ್ರಮಾಣದ ಪ್ರಸರಣ ನಷ್ಟಕ್ಕೆ (ಟ್ರಾನ್ಸ್ ಮಿಷನ್ ಲಾಸ್) ಕಾರಣಗಳೇನು ; ತಡೆಗಟ್ಟಲು ಸರ್ಕಾರ ಏನು ಕ್ರಮಕೈಗೊಂಡಿದೆ ?

## ರಾಜ್ಯದಲ್ಲಿ ಒಟ್ಟು ತೋಟಗಾರಿಕಾ ಉತ್ಪಾದನೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೯೯ (೯೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ತೋಟಗಾರಿಕಾ ಉತ್ಪಾದನೆ ಎಷ್ಟು ; ತೋಟಗಾರಿಕೆ ಉತ್ಪಾದನೆಗಳನ್ನು ಸಂಗ್ರಹಿಸಿಡಲು ಹಾಗೂ ಸರಿಯಾದ ಸಂಸ್ಕರಣ ವ್ಯವಸ್ಥೆ ಇಲ್ಲದೇ ಇರುವುದರಿಂದ ಪ್ರತಿಶತ ಎಷ್ಟು ನಷ್ಟ ಉಂಟಾಗುತ್ತಿದೆ ;

(ಆ) ಇದರಿಂದ ರಾಜ್ಯದ ಬೊಕ್ಕಸಕ್ಕೆ ವಾರ್ಷಿಕ ಎಷ್ಟು ರೂಪಾಯಿಗಳ ನಷ್ಟವಾಗುವುದು ;

(ಇ) ಈ ನಷ್ಟವನ್ನು ತಪ್ಪಿಸಲು ಸರ್ಕಾರವು ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಯೋಚಿಸಿದೆ ?



## ರಾಜ್ಯದಲ್ಲಿ ಕೃಷಿ ಯಾಂತ್ರಿಕ ಸಲಕರಣೆಗಳಿಗೆ ಕೊಡಲಾದ ಸಹಾಯಧನ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೭೦೦ (೯೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಕೃಷಿ ಯಾಂತ್ರಿಕ ಸಲಕರಣೆಗಳಿಗೆ ಕೊಡಲಾದ ಸಹಾಯಧನ (ಸಬ್ಸಿಡಿ) ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ೨೦೧೪–೧೫ನೇ ಸಾಲಿನಲ್ಲಿ ಈ ಶೀರ್ಷಿಕೆಯಡಿಯಲ್ಲಿ ಹಂಚಿಕೆಯಾದ ಮೊತ್ತವೆಷ್ಟು ;

(ಇ) ೨೦೧೫–ಜನವರಿ ೩೧ ರವರೆಗೆ ಈ ಶೀರ್ಷಿಕೆಯಲ್ಲಿ ಬಿಡುಗಡೆಯಾದ ಮೊತ್ತವೆಷ್ಟು ;

(ಈ) ರಾಜ್ಯದಲ್ಲಿ ಬಹಳಷ್ಟು ಜನ ರೈತಾಪಿ ವರ್ಗದವರು ತಮಗೆ ಸಹಾಯಧನ ಬರುತ್ತಿಲ್ಲವೆಂದು ಹೇಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಊ) ಈ ಸಹಾಯಧನವನ್ನು ಯಾವ ಯಾಂತ್ರಿಕ ಉಪಕರಣಗಳನ್ನು ಖರೀದಿಸಲು ಕೊಡಲಾಗುತ್ತದೆ ?

## ದ್ರಾಕ್ಷಿ ಬೆಳೆಯ ಉತ್ಪಾದನೆ ಹಾಗೂ ಸಂರಕ್ಷಣೆ ಬಗ್ಗೆ.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೭೦೧ (೭೫೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ದ್ರಾಕ್ಷಿ ಬೆಳೆಯನ್ನು ಬೆಳೆಯಲಾಗುತ್ತಿದೆ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಉತ್ಪಾದನೆಯಾದ ದ್ರಾಕ್ಷಿ ಪ್ರಮಾಣದಲ್ಲಿ ಎಷ್ಟು ಪ್ರಮಾಣವನ್ನು ವಿದೇಶಗಳಿಗೆ ರಫ್ತು ಮಾಡಲಾಗುತ್ತಿದೆ ;

(ಇ) ರಾಜ್ಯದಲ್ಲಿ ಒಟ್ಟು ಪ್ರವಾಣದ ದ್ರಾಕ್ಷಿಯನ್ನು ಸಂಸ್ಕರಣೆ ಮಾಡಲಾಗುತ್ತಿದೆ(ಒಣದ್ರಾಕ್ಷಿ) ; ಅದರಲ್ಲಿ ಎಷ್ಟು ಪ್ರಮಾಣ ರಫ್ತು ವರಾಡಲಾಗುತ್ತದೆ ;ಹಾಗೂ ಸ್ಥಳೀಂಯವಾಗಿ ಉಪಯೋಗಿಸಲಾಗುತ್ತಿರುವ ಪ್ರಮಾಣವೆಷ್ಟು ?

## ದ್ರಾಕ್ಷಾರಸ ಉತ್ಪಾದಿಸುವ ಕಾರ್ಖಾನೆಗಳು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೭೦೨ (೭೫೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ದ್ರಾಕ್ಷಾರಸ ಉತ್ಪಾದಿಸುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾರ್ಖಾನೆಗಳು ಒಟ್ಟು ಉತ್ಪಾದಿಸುವ ದ್ರಾಕ್ಷಾರಸ ಎಷ್ಟು ; ಈ ಉತ್ಪಾದನೆಯಲ್ಲಿ ಸ್ಥಳೀಯವಾಗಿ ಉಪಯೋಗಿಸುವ ಹಾಗೂ ಹೊರ ದೇಶಗಳಿಗೆ ರಫ್ತು ಮಾಡುವ ಪ್ರಮಾಣವೆಷ್ಟು ;



(ಇ) ರಾಜ್ಯದ ದ್ರಾಕ್ಷಿ ಬೆಳೆಗಾರರ ಹಿತರಕ್ಷಣೆಗಾಗಿ ಸರ್ಕಾರವು ದ್ರಾಕ್ಷಿ ಮೌಲ್ಯವರ್ಧನೆಗೆ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದಲ್ಲಿ ರಬ್ಬರ್ ಕೃಷಿ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೭೦೩ (೮೦೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸುಮಾರು ೫೦,೦೦೦ ಹೆಕ್ಟೇರ್ ರಬ್ಬರ್ ಕೃಷಿಯನ್ನು ಮಾಡುತ್ತಿದ್ದು ಕೆ.ಜಿ. ಒಂದಕ್ಕೆ ರೂ ೨೪೦.೦೦ ಇದ್ದ ರಬ್ಬರ್ ಪ್ರಸ್ತುತ ರೂ ೯೪.೦೦ ಇಳಿದಿರುವುದರಿಂದ ಬೆಳೆಗಾರರ ರಕ್ಷಣೆಗೆ ಕೈಗೊಂಡಿರುವ ಕ್ರಮಗಳಾವುವು ;

(ಆ) ರಬ್ಬರ್ ಬೆಳೆ ಕುಸಿತಗೊಳ್ಳಲು ಆಮದು ನೀತಿ (Import) ಕಾರಣವಾಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಪ್ರಸ್ತುತ ಶೇಕಡ ೨೦ರಷ್ಟು ಆಮದು ಶುಲ್ಕ ವಸೂಲು ಮಾಡುತ್ತಿದ್ದು, ಅದನ್ನು ಶೇಕಡ ೫೦ರಷ್ಟಕ್ಕೆ ಏರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ರಾಜ್ಯ ಸರ್ಕಾರವು ರಬ್ಬರ್ ಸೊಸೈಟಿಗಳಿಂದ ವ್ಯಾಟ್ (vat) ಹಾಕುತ್ತಿರುವುದನ್ನು ಕೈ ಬಿಟ್ಟಲ್ಲಿ ರಬ್ಬರ್ ಧಾರಣೆ ಹೆಚ್ಚಲು ಸಾಧ್ಯವಾಗುವುದು ಎಂಬ ಬಗ್ಗೆ ಸರ್ಕಾರ ಗಮನಿಸಿದೆಯೇ ;

(ಇ) ರಬ್ಬರ್ ಸೊಸೈಟಿಗಳಿಂದ ವಾರ್ಷಿಕ ಎಷ್ಟು ಕೋಟಿ ರೂಪಾಯಿ ವ್ಯಾಟ್ (vat) ಸಂಗ್ರಹ ಮಾಡಲಾಗುತ್ತಿದೆ ? (ವಿವರ ನೀಡುವುದು)

## "ಕೃಷಿ ಯಾಂತ್ರೀಕರಣ ಯೋಜನೆ" ಹೋಬಳಿ ಮಟ್ಟದಲ್ಲಿ ಪ್ರಾರಂಭಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

**೭೦೪** (೮೦೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಯಂತ್ರೋಪಕರಣಗಳನ್ನು "ಕೃಷಿ ಯಾಂತ್ರೀಕರಣ ಯೋಜನೆಯಡಿ" ಬಾಡಿಗೆಗೆ ಕೊಡುವ ಯೋಜನೆಯು ತಾಲ್ಲೂಕು ಮಟ್ಟದಲ್ಲಿ ಜಾರಿಗೆ ಬಂದಿದ್ದು, ಅದನ್ನು "ಹೋಬಳಿ ಮಟ್ಟದಲ್ಲಿಯೂ" ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ಪ್ರಸ್ತುತ ಈ ಯೋಜನೆಯಡಿ ಇರುವ ಕೃಷಿ ಯಂತ್ರೋಪಕರಣ ಬಾಡಿಗೆ ಕೇಂದ್ರಗಳು ಎಷ್ಟು ; (ವಿವರ ನೀಡುವುದು)

(ಇ) ದ.ಕ ಜಿಲ್ಲೆಯಲ್ಲಿ ಭತ್ತದ ಕೃಷಿಯು ಪ್ರತಿವರ್ಷ ಕಡಿಮೆಗೊಳ್ಳಲು ನೀರಿನ ಮಟ್ಟ ಕಡಿಮೆಯಾಗಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ದ.ಕ ಜಿಲ್ಲೆಯಲ್ಲಿ ವರ್ಷಗಳ ಭತ್ತದ ಕೃಷಿಯಲ್ಲಿ ಇಳಿಮುಖವಾಗಿರುವುದು ಎಷ್ಟು ; (ವಿವರ ನೀಡುವುದು)

(ಈ) ಜಲಾನಯನ ಇಲಾಖೆಯು ಕೃಷಿ ಇಲಾಖೆಯೊಂದಿಗೆ ವಿಲೀನಗೊಂಡು ೩ ತಿಂಗಳು ಕಳೆದರೂ ಅಧಿಕಾರ ಹಸ್ತಾಂತರ ಆಗಿರದ ಕಾರಣದಿಂದ ಜಲಾನಯನ ಕಾಮಗಾರಿ ನಡೆಯುತ್ತಿಲ್ಲ ಎಂಬುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮ ಏನು ? (ವಿವರಣೆ ನೀಡುವುದು)



## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೭೦೫ (೮೦೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಸುಮಾರು ೧೫,೦೦೦ ಕ್ಕಿಂತಲೂ ಮೇಲ್ಪಟ್ಟ ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಪರಿಗಣಿಸದೇ ಇರಲು ಕಾರಣವೇನು ;

(ಆ) ನಗರ ಪಂಚಾಯತ್, ನಗರಸಭೆ ಮತ್ತು ಪುರಸಭೆಗಳನ್ನು ಮೇಲ್ದರ್ಜೆಗೇರಿಸುವ ಸಂದರ್ಭದಲ್ಲಿ ಇಲಾಖೆಯಲ್ಲಿ ರಾಜ್ಯದ ಎಲ್ಲಾ ಪಂಚಾಯತ್‌ಗಳ ಮತ್ತು ಪುರಸಭೆಗಳಲ್ಲಿ ಜನಸಂಖ್ಯೆ ಆಧಾರದಲ್ಲಿ ಮಾಡಿಲ್ಲ ಎಂಬ ಆಪಾದನೆ ಇದೆಯೇ ; (ವಿವರ ನೀಡುವುದು)

(ಇ) ಪ್ರಸ್ತುತ ರಾಜ್ಯದಲ್ಲಿರುವ ಜನಸಂಖ್ಯೆ ಆಧಾರದಲ್ಲಿ ಎಷ್ಟು ಗ್ರಾಮ ಪಂಚಾಯುತ್‌ಗಳು ಪಟ್ಟಣ ಪಂಚಾಯುತ್‌ಗಳಾಗಿ ಮೇಲ್ದರ್ಜೆಗೇರಿಸಲು ಅರ್ಹತೆ ಪಡೆದಿವೆ ? (ಜಿಲ್ಲಾವಾರು ವಿವರ ನೀಡುವುದು)

## ನಿಡ್ಡೋಡಿ ವಿದ್ಯುಚ್ಛಕ್ತಿ ಯೋಜನೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೦೬ (೯೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿಡ್ಡೋಡಿ ವಿದ್ಯುಚ್ಛಕ್ತಿ ಯೋಜನೆಯನ್ನು ಕೈ ಬಿಡಬೇಕೆಂದು ಸ್ಥಳೀಯರ, ಪರಿಸರವಾದಿಗಳ ಮತ್ತು ರೈತರ ಬೇಡಿಕೆಗೆ ರಾಜ್ಯ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ಈ ಯೋಜನೆ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದ್ದೇ ; ಸದರಿ ಯೋಜನೆಯಲ್ಲಿ ಒಟ್ಟು ಎಷ್ಟು ಸಾವಿರ ಎಕರೆ ಭೂಮಿಯನ್ನು ಬಳಸಿಕೊಳ್ಳಲಾಗುವುದು ; ನಿಡ್ಡೋಡಿ ವಿದ್ಯುತ್ ಸ್ಥಾವರ ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡಲಾಗಿದೆಯೇ ; (ಯೋಜನೆಯ ಪೂರ್ಣ ವಿವರಗಳನ್ನು ನೀಡುವುದು)

(ಇ) ಈ ಯೋಜನೆಯಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಇದೆ ? (ವಿವರ ನೀಡುವುದು)

## ಶಿರಾಡಿ ಘಾಟ್ ರಸ್ತೆ ಕಾಮಗಾರಿ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೨೦೭ (೮೦೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿರಾಡಿ ಘಾಟ್ ಕಾಮಗಾರಿ ನಿಧಾನಗತಿಯಲ್ಲಿ ನಡೆಯುತ್ತಿರುವುದು ನಿಜವಲ್ಲವೆ ; ಇದರ ದುರಸ್ತಿಗಾಗಿ ಖರ್ಚು ಮಾಡಲಾಗುವ ಒಟ್ಟು ಅಂದಾಜು ವೆಚ್ಚ ಎಷ್ಟು ; (ವಿವರ ನೀಡುವುದು)



(ಆ) ಈ ಕಾಮಗಾರಿಯು ರಿಪೇರಿಗೊಂಡಲ್ಲಿ ಎಷ್ಟು ವರ್ಷಗಳವರೆಗೆ ಸದರಿ ರಸ್ತೆಯು ಸಂಚಾರಕ್ಕೆ ಯೋಗ್ಯವಾಗಿರಬೇಕು ;

(ಇ) ಶಿರಾಡಿ ಘಾಟ್ ದುರಸ್ತಿ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಸಂದರ್ಭದಲ್ಲಿಯೇ ಮಳೆ ನೀರು ಹರಿದು ಹೋಗಲು ಸರಿಯಾದ ಒಳಚರಂಡಿ ವ್ಯವಸ್ಥೆಯನ್ನು ಕೈಗೊಳ್ಳಲಾಗುವುದೇ ; ಇದಕ್ಕಾಗಿ ಮೀಸಲಿಟ್ಟಿರುವ ಹಣವೆಷ್ಟು ;

(ಈ) ಶಿರಾಡಿ ಘಾಟ್ ರಸ್ತೆಯನ್ನು ೪ ಪಥ, ರಸ್ತೆಯನ್ನಾಗಿ ಮಾರ್ಪಾಡು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಸದರಿ ರಸ್ತೆ ಕಾಮಗಾರಿ ಪ್ರಾರಂಭಗೊಳ್ಳುವುದು ಯಾವಾಗ ? (ಪ್ರಸ್ತಾವನೆಯ ವಿವರ ನೀಡುವುದು)

## ಸೌರಶಕ್ತಿ –ಯೋಜನೆ, SMART ವಿದ್ಯುತ್ ಜಾಲ ಹಾಗೂ SMART ವಿದ್ಯುತ್ ಮಾಪಕ.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೨೦೮ (೮೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೌರ ಶಕ್ತಿ ಉತ್ಪಾದಿಸಲು ಕೈಗೊಂಡ ಯೋಜನೆಗಳು ಯಾವುವು ; (ವಿವರ ನೀಡುವುದು) ಸದರಿ ಯೋಜನೆಗಳಿಗಾಗಿ ಒದಗಿಸಲಾಗಿರುವ ಹಣ ಎಷ್ಟು ;

(ಆ) ಸೌರ ಶಕ್ತಿ ಉತ್ಪಾದನೆಗೆ ಯಾವ ಯಾವ ಖಾಸಗಿ ಸಹ ಭಾಗಿತ್ವ/ ಖಾಸಗಿ ಕಂಪನಿಗಳಿಗೆ ಸರ್ಕಾರದಿಂದ ಎಷ್ಟು ಮೊತ್ತದ ಪ್ರೋತ್ಸಾಹ

ಧನ/ಸಬ್ಸಿಡಿ ನೀಡಲು ಕ್ರಮವಹಿಸಲಾಗುತ್ತಿದೆ ; ಇದಕ್ಕೆ ಅನುಸರಿಸಲಾಗುವ ಮಾನದಂಡಗಳೇನು ;

(ಇ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಯಾವ ಯಾವ ನಗರಗಳಲ್ಲಿ SMART ವಿದ್ಯುತ್ ಜಾಲ ಮತ್ತು SMART ವಿದ್ಯುತ್ ಮಾಪಕ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ ; (ವಿವರ ನೀಡುವುದು)

(ಈ) SMART ವಿದ್ಯುತ್ ಜಾಲ ಮತ್ತು SMART ವಿದ್ಯುತ್ ಮಾಪಕ ಯೋಜನೆಗಳನ್ನು ರಾಜ್ಯದ ಯಾವ ಯಾವ ನಗರಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; ಯಾವ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲಾಗುವುದು ?

## ತೊಗರಿ ಅಭಿವೃದ್ಧಿ ಮಂಡಳಿಯ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೭೦೯ (೮೧೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೊಗರಿ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗಿದ್ದು ಯಾವಾಗ ;

(ಆ) ಅದರ ಸ್ಥಾಪನೆಯ ಉದ್ದೇಶವೇನು ; ಪ್ರಸ್ತುತ ಅಲ್ಲಿ ನಡೆಸುತ್ತಿರುವ ಚಟುವಟಿಕೆಗಳಾವುವು ; (ವಿವರ ನೀಡುವುದು)

(ಇ) ಸದರಿ ಮಂಡಳಿಗೆ ಮೀಸಲಿಟ್ಟಿರುವ ವಾರ್ಷಿಕ ಅನುದಾನ ಎಷ್ಟು ; ಒದಗಿಸಿರುವಂತಹ ಸಿಬ್ಬಂದಿ ಹಾಗೂ ಇತರೆ ಸೌಲಭ್ಯಗಳೇನು ? (ವಿವರ ನೀಡುವುದು)



## ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೭೧೦ (೮೦೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೩–೧೪ರ ಅವಧಿಯ ಅಂತ್ಯಕ್ಕೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ನಿಗಮಗಳು ಅನುಷ್ಠಾನಗೊಳಿಸಿದ್ದ ಬಾಕಿ ನೀರಾವರಿ ಯೋಜನೆಯ ಎಷ್ಟು ಪಂಪ್‌ಸೆಟ್‌ಗಳಿಗೆ ೨೦೧೪–೧೫ರಲ್ಲಿ ಇಲ್ಲಿಯವರೆಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ;

(ಆ) ಬಾಕಿ ಉಳಿದ ಪ್ರಕರಣಗಳು ಎಷ್ಟು ;

(ಇ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಮೇಲ್ಕಂಡ ಎಲ್ಲ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ; ವಿದ್ಯುತೀಕರಣ ಮಾಡಿದ ಸಂಪರ್ಕಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಯೋಜನವಾರು ಮಾಹಿತಿ ನೀಡುವುದು)

(ಈ) ವಿಜಯಪುರ ಹಾಗೂ ಬೆಳಗಾವಿ ಮಹಾನಗರ ಪಾಲಿಕೆ ಪ್ರದೇಶದಲ್ಲೂ ೨೦೧೪–೧೫ರಲ್ಲಿ ವಿದ್ಯುತ್ ವಿತರಣಾ ಮೂಲ ಸೌಕರ್ಯ ಉನ್ನತೀಕರಣಕ್ಕೆ ಕ್ರಮ ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಇದಕ್ಕೆ ಒದಗಿಸಿದ ಹಣವೆಷ್ಟು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಯೋಜನೆಗಳಾವುವು ? (ವಿವರ ನೀಡುವುದು)

## ರಾಜ್ಯದಲ್ಲಿನ Chit Fund ಸಂಸ್ಥೆಗಳ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೭೧೧ (೮೦೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಎಷ್ಟು ಸಂಸ್ಥೆಗಳಿಗೆ ಚಿಟ್ ಫಂಡ್ (Chit Fund) ನಡೆಸುವ ಪರವಾನಗಿ ನೀಡಲಾಗಿದೆ ;

(ಆ) ಎಷ್ಟು ಸಂಸ್ಥೆಗಳ ವಿರುದ್ಧ ದೂರು ಬಂದಿವೆ ;

(ಇ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಚಿಟ್ ಫಂಡ್ (Chit Fund) ನಡೆಸುತ್ತಿರುವ ಸಂಸ್ಥೆಗಳು ಎಷ್ಟು ; ಅವರ ವಾರ್ಷಿಕ ವಹಿವಾಟು ಎಷ್ಟು ; ಎಷ್ಟು ವಿಧದ ಚೀಟಿಗಳನ್ನು ನಡೆಸುತ್ತಿದ್ದಾರೆ ; (ಹೆಸರು ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಈ) ಅನುಮತಿ ಪಡೆಯದೇ ಚಿಟ್ ಫಂಡ್ ನಡೆಸುತ್ತಿರುವ ಅಥವಾ ಚೀಟಿ ವ್ಯವಹಾರದಲ್ಲಿ ತೊಡಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಉ) ಹೊರ ರಾಜ್ಯಗಳ ಸಂಸ್ಥೆಯವರು ಚಿಟ್ ಫಂಡ್ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)



## ಡಿ.ಸಿ.ಸಿ. ಬ್ಯಾಂಕ್‌ನಿಂದ ಸಾಲಪಡೆದವರ ಕುರಿತು.

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ):–**

೭೧೨ (೮೦೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಡಿ.ಸಿ.ಸಿ. ಬ್ಯಾಂಕಿನಿಂದ ಶೂನ್ಯ ಬಡ್ಡಿದರದಲ್ಲಿ, ೧೧% ದರದಲ್ಲಿ ೩% ಬಡ್ಡಿ ದರದಲ್ಲಿ ಸಾಲ ತೆಗೆದುಕೊಂಡಿರುವವರ ಸಂಖ್ಯೆ ಎಷ್ಟು ? (ಹೆಸರು, ಸಾಲದ ಮೊತ್ತದ ವಿವರ ನೀಡುವುದು)

## ಬಾದಾಮಿ, ಐಹೊಳೆ ಸ್ಥಳಗಳಿಗೆ ಸಂಪರ್ಕ ರಸ್ತೆ.

**ಶ್ರೀ ರಾಮಚಂದ್ರಗೌಡ (ಪದವೀಧರ ಕ್ಷೇತ್ರ) :–**

೭೧೩ (೮೧೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾದಾಮಿ, ಐಹೊಳೆ,ಪಟ್ಟದಕಲ್ಲು, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಐತಿಹಾಸಿಕ ಪರಂಪರೆಯ ಸ್ಥಳಗಳೆಂದು ಗುರುತಿಸಲ್ಪಟ್ಟಿವೆ. ಆದರೆ, ಒಂದಕ್ಕೊಂದು ಹತ್ತಿರದಲ್ಲಿರುವ ಈ ಸ್ಥಳಗಳನ್ನು ಸಂಪರ್ಕಿಸುವ ರಸ್ತೆಗಳು ತೀರ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಮೂಲೆ ಮೂಲೆಗಳಿಂದ ವಿದ್ಯಾರ್ಥಿಗಳು ಹೆಚ್ಚಾಗಿ ದೊಡ್ಡ ದೊಡ್ಡ ಬಸ್ಸುಗಳಲ್ಲಿ ವೀಕ್ಷಿಸಲು ಇಲ್ಲಿಗೆ ಆಗಮಿಸುತ್ತಿದ್ದು, ಈ ರಸ್ತೆಗಳು ಅತ್ಯಂತ ಕಿರಿದಾಗಿರುವುದರಿಂದ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರಸ್ತೆಯನ್ನು ಅಭಿವೃದ್ಧಿಪಡಿಸಲು ಯಾವ ರೀತಿಯ ತುರ್ತು ಕ್ರಮವನ್ನು ತೆಗೆದುಕೊಳ್ಳಲಾಗುವುದು ; ಯಾವ ಕಾಲಮಿತಿಯೊಳಗೆ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗುವುದು ?

## ಶಿರಾಡಿ ಘಾಟ್ ರಸ್ತೆ ದುರಸ್ತಿ

**ಶ್ರೀ ರಾಮಚಂದ್ರಗೌಡ (ಪದವೀಧರ ಕ್ಷೇತ್ರ) :–**

೭೧೪ (೮೧೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಶಿರಾಡಿ ಘಾಟ್ ರಸ್ತೆ ದುರಸ್ತಿ ಕಾರ್ಯ ಪ್ರಾರಂಭವಾಗಿದ್ದು ಯಾವಾಗ ;

(ಆ) ಇಲ್ಲಿ ಯಾವ ರೀತಿಯ ರಸ್ತೆ ನಿರ್ಮಿಸಲು ಸರ್ಕಾರ ಮುಂದಾಗಿದೆ ; (ವಿವರ ನೀಡುವುದು)

(ಇ) ಶಿರಾಡಿ ಘಾಟ್ ರಸ್ತೆ ಪೂರ್ಣಗೊಳ್ಳಲು ಬೇಕಾಗುವ ಕಾಲಾವಧಿ ಎಷ್ಟು ?

## ರಾಜಾಜಿನಗರದ ಹೆಚ್. ಬ್ಲಾಕ್ ಸರ್ಕಾರಿ ನೌಕರರ ವಸತಿ ಗೃಹಗಳ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರ ಕ್ಷೇತ್ರ):–**

೭೧೫ (೮೧೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ರಾಜಾಜಿನಗರ ೬ನೇ ಬ್ಲಾಕ್‌ನಲ್ಲಿರುವ ಹೆಚ್. ಬ್ಲಾಕ್ ಸರ್ಕಾರಿ ನೌಕರರ ವಸತಿ ಗೃಹಗಳ ಸಂಖ್ಯೆ ಎಷ್ಟು ; ಇವುಗಳನ್ನು



ನಿರ್ಮಿಸಿದ್ದು ಯಾವಾಗ ; ಇವುಗಳ ದುರಸ್ತಿ ಕಾರ್ಯಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕಳೆದ ಆರು ವರ್ಷಗಳಿಂದಲೂ ಇಲ್ಲಿನ ವಸತಿ ಗೃಹಗಳ ನೀರಿನ ಸಂಪರ್ಕದಲ್ಲಿ ಸೋರುವಿಕೆ, ಸುಣ್ಣ–ಬಣ್ಣ, ವಿದ್ಯುತ್ ವೈರಿಂಗ್‌ಗಳಲ್ಲಿ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇತ್ತೀಚೆಗೆ ಸದರಿ ವಸತಿ ಗೃಹಗಳಿಗೆ ದುರಸ್ತಿ ಕಾರ್ಯ ಕೈಗೊಳ್ಳಲಾಗಿದ್ದು ಯಾವಾಗ ; ಇದಕ್ಕೆ ತಗಲಿರುವ ವೆಚ್ಚ ಎಷ್ಟು ; ಯಾವ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲಾಗಿತ್ತು ; ಸದರಿ ದುರಸ್ತಿ ಕಾರ್ಯಗಳು ಸಮರ್ಪಕವಾಗಿ ನಡೆದಿರುವುದಿಲ್ಲ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಸಂಬಂಧ ಮಾನ್ಯ ಸಚಿವರು ಅಧಿಕಾರಿಗಳ ಜೊತೆ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದೆ ?

## ಸೀಗಲಹಳ್ಳಿ ರಸ್ತೆ ಡಾಂಬರೀಕರಣ

**ಶ್ರೀ ರಾಮಚಂದ್ರಗೌಡ (ಪದವೀಧರ ಕ್ಷೇತ್ರ):–**

೭೧೬ (೮೧೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ಶಿರಾ ತಾಲ್ಲೂಕಿನ ಉದ್ದರಾಮನಹಳ್ಳಿ–ಆಂಧ್ರಪ್ರದೇಶ ಗಡಿಭಾಗದಲ್ಲಿರುವ ಸೀಗಲಹಳ್ಳಿ ರಸ್ತೆ ಡಾಂಬರೀಕರಣ ಕಾಮಗಾರಿ ಇತ್ತೀಚೆಗೆ ನಡೆದಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಸದರಿ ಕಾಮಗಾರಿ ಪೂರ್ಣಗೊಂಡಿದೆಯೇ ;

(ಇ) ಪೂರ್ಣಗೊಂಡಿದ್ದಲ್ಲಿ, ರಸ್ತೆ ಡಾಂಬರೀಕರಣವನ್ನು ಸಮರ್ಪಕವಾಗಿ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಲಾಗಿದೆಯೇ ?

## ದನಿಯಾ ಬೆಳೆಯು ಹೆಚ್ಚಾಗಿರುವ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರ ಕ್ಷೇತ್ರ):–**

೭೧೭ (೮೧೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈ ವರ್ಷ ದನಿಯಾ ಬೆಳೆಯು ಗಣನೀಯ ಪ್ರಮಾಣದಲ್ಲಿ ಹೆಚ್ಚಾಗುವ ಕುರಿತು ಸರ್ಕಾರಕ್ಕೆ ಮಾಹಿತಿ ಇದೆಯೇ ;

(ಆ) ರಾಜಸ್ಥಾನ, ಮಧ್ಯಪ್ರದೇಶ, ಗುಜರಾತ್, ಪಶ್ಚಿಮ ಬಂಗಾಳ ರಾಜ್ಯಗಳಲ್ಲಿಯೂ ದನಿಯಾ ಬೆಳೆ ಹೆಚ್ಚು ಫಲವತ್ತಾಗಿ ಬೆಳೆದಿರುವ ಕಾರಣದಿಂದ ದನಿಯಾ ಸಾಂಬಾರ ಪದಾರ್ಥದ ಬೆಲೆ ಗಣನೀಯ ಪ್ರಮಾಣದಲ್ಲಿ ಇಳಿಯುವುದೆಂದು ರೈತರು ಆತಂಕದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಮಾಹಿತಿ ಸಂಗ್ರಹಿಸಲು ಮುಂದಾಗುವುದೇ ; ದನಿಯಾ ಬೆಳೆದ ರೈತರಿಗೆ ಆಗಬಹುದಾದ ನಷ್ಟವನ್ನು ತಡೆಗಟ್ಟಲು ಹಾಗೂ ಅವರ ಆತಂಕವನ್ನು ದೂರ ಮಾಡಲು ಯಾವ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ?



## ಪಾದಚಾರಿ ಮಾರ್ಗಗಳ ಮೇಲೆ ಟ್ರಾನ್ಸ್‌ಫಾರ್ಮರ್ ಅಳವಡಿಸಿರುವ ಬಗ್ಗೆ.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೭೧೮ (೮೯೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡಿರುವ ಒಟ್ಟು ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ;(ವಾರ್ಡ್‌ವಾರು ವಿವರ ನೀಡುವುದು)

(ಇ) ಇಂತಹ ಟ್ರಾನ್ಸ್‌ಫಾರ್ಮರ್‌ಗಳಿಂದ ಯಾರಿಗಾದರೂ ಪ್ರಾಣಹಾನಿ ಸಂಭವಿಸಿದೆಯೇ ;

(ಈ) ಸಂಭವಿಸಿದ್ದಲ್ಲಿ, ಕಳೆದ ೨ ವರ್ಷಗಳಿಂದ ಎಷ್ಟು ಮಂದಿ ಸಾವನ್ನಪ್ಪಿದ್ದಾರೆ ; ಅವರ ಕುಟುಂಬಗಳಿಗೆ ಸರ್ಕಾರ ನೀಡಿರುವ ಪರಿಹಾರವೇನು ;

(ಉ) ಸದರಿ ಟ್ರಾನ್ಸ್‌ಫಾರ್ಮರ್‌ಗಳನ್ನು ತೆರವುಗೊಳಿಸಲು ಸರ್ಕಾರ ನಿಗದಿಪಡಿಸಿರುವ ಕಾಲಾವಧಿ ಎಷ್ಟು ? (ವಿವರ ನೀಡುವುದು)

## ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳು.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೭೧೯(೮೨೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಗರಸಭೆ ಮತ್ತು ಪುರಸಭೆಗಳಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಖಾಯಂಗೊಳಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಖಾಯಂಗೊಳಿಸಲಾಗುವುದು ? (ವಿವರ ನೀಡುವುದು)



## ೧೧ ಕೆವಿ ವಿದ್ಯುತ್ ತಂತಿಗಳು ಮನೆಗಳ ಮೇಲೆ ಹಾದು ಹೋಗಿರುವ ಬಗ್ಗೆ.

**ಶ್ರೀಮತಿ ವಿಮಲಾಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೭೨೦ (೮೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ೧೧ ಕೆವಿ ವಿದ್ಯುತ್ ತಂತಿಗಳು ಮನೆಗಳ ಮೇಲೆ ಹಾದು ಹೋಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ೧೧ ಕೆವಿ ವಿದ್ಯುತ್ ತಂತಿಗಳನ್ನು ಭೂಮಿಯ ಒಳಭಾಗದಲ್ಲಿ ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ವಿದ್ಯುತ್ ತಂತಿಗಳ ಸ್ಪರ್ಶದಿಂದಾಗಿ ಇದುವರೆವಿಗೂ ಸಾವು–ನೋವುಗಳು ಸಂಭವಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಸಂಭವಿಸಿದ್ದರೆ, ಸರ್ಕಾರ ಅವರ ಕುಟುಂಬಗಳಿಗೆ ನೀಡಿರುವ ಪರಿಹಾರ ಎಷ್ಟು ?

## ರೈತರ ಸಂತೆಗಳನ್ನು ಪುನಃಶ್ಚೇತನಗೊಳಿಸುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೧ (೮೨೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ರೈತರ ಸಂತೆ ಪ್ರಾರಂಭ ಮಾಡಿದ್ದು, ಅವು ವ್ಯವಸ್ಥಿತವಾಗಿ ಕಾರ್ಯನಿರ್ವಹಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರ ಸಂತೆಯನ್ನು ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭ ಮಾಡಲು ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಆ ಪೈಕಿ ಖರ್ಚಾಗಿರುವ ಹಣ ಎಷ್ಟು ;

(ಇ) ಸದರಿ ಯೋಜನೆಯು ನಿಷ್ಕ್ರೀಯಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಪುನಃಶ್ಚೇತನಗೊಳಿಸಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ? (ವಿವರ ನೀಡುವುದು)

## ರೈತರ ಆತ್ಮಹತ್ಯೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೨೨ (೮೨೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಬೆಳೆ ನಷ್ಟದಿಂದಾಗಿ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)



(ಆ) ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಕುಟುಂಬಗಳಿಗೆ ಸರ್ಕಾರ ನೀಡಿರುವ ಪರಿಹಾರ ಮೊತ್ತ ಎಷ್ಟು ; (ಪ್ರಕರಣವಾರು ವಿವರ ನೀಡುವುದು)

(ಇ) ಸರ್ಕಾರ ನೀಡಿದ ಅಲ್ಪ ಪ್ರಮಾಣದ ಪರಿಹಾರದಿಂದ ಜೀವನ ನಡೆಸಲು ಸಾಧ್ಯವಾಗದೆ ಕೆಲವು ಕುಟುಂಬಗಳು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಅಂತಹ ಕುಟುಂಬಗಳಲ್ಲಿ ಯಾರಿಗಾದರೂ ಸರ್ಕಾರದ ನೌಕರಿ ನೀಡುವ ಕುರಿತು ಯಾವುದಾದರೂ ಯೋಜನೆ ರೂಪಿಸಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿ ಉತ್ಪಾದನೆ ಆಗುತ್ತಿರುವ ವಿದ್ಯುತ್ತಿನ ವಿವರಗಳ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೩ (೮೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಗತ್ಯವಿರುವ ವಾರ್ಷಿಕ ವಿದ್ಯುತ್ತಿನ ಪ್ರಮಾಣ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಪ್ರಸ್ತುತ ಯಾವ ಯಾವ ಮೂಲಗಳಿಂದ ವಿದ್ಯುತ್‌ನ್ನು ಉತ್ಪಾದಿಸಲಾಗುತ್ತಿದೆ ; (ವಿದ್ಯುತ್ ಘಟಕ ಹಾಗೂ ಉತ್ಪಾದನೆಯ ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಲ್ಲಾ ಮೂಲಗಳಿಂದ ಉತ್ಪಾದಿಸಿದ ವಿದ್ಯುತ್‌ಗಿಂತ ಹೆಚ್ಚಾಗಿ ಬೇಡಿಕೆ ಇರುವ ಪಕ್ಷದಲ್ಲಿ ಯಾವ ಯಾವ ಮೂಲಗಳಿಂದ ವಿದ್ಯುತ್‌ನ್ನು ಸರಬರಾಜು ಮಾಡಲು ಸರ್ಕಾರವು ಯೋಚಿಸಿದೆ ? (ವಿವರಗಳನ್ನು ನೀಡುವುದು)

## ವಿದ್ಯುತ್ ತಡೆಗಟ್ಟಲು ತೆಗೆದುಕೊಂಡಿರುವ ಬಗ್ಗೆ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೪ (೮೨೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುತ್ ಸೋರಿಕೆಯಾಗುತ್ತಿದೆಯೇ ; ಈ ರೀತಿ ಸೋರಿಕೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ವಿದ್ಯುತ್ ಬಿಲ್ಲಿನ ಹಣವನ್ನು ಸರಿಯಾದ ಸಮಯದಲ್ಲಿ ಪಾವತಿಸದೇ ಬಾಕಿ ಇಟ್ಟುಕೊಂಡಿರುವ ಸಂಸ್ಥೆಗಳಾವುವು ; (ಸಂಸ್ಥೆವಾರು ವಿವರ ನೀಡುವುದು)

(ಇ) ಬಾಕಿ ಹಣವನ್ನು ವಸೂಲು ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ಈವರೆವಿಗೂ ಎಷ್ಟು ಹಣವನ್ನು ವಸೂಲು ಮಾಡಲಾಗಿದೆ ? (ವಿವರ ನೀಡುವುದು)



## ಬಳ್ಳಾರಿಯಲ್ಲಿ ಸೋಲಾರ್ ಪಾರ್ಕ್

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೫ (೮೩೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಬಿಸಿಲಿನ ತಾಪ ಹೆಚ್ಚಾಗಿದ್ದು ಸೋಲಾರ್ ಪಾರ್ಕ್ ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಸೋಲಾರ್ ಪಾರ್ಕ್ ಸ್ಥಾಪಿಸುವ ನಿಟ್ಟಿನಲ್ಲಿ ಈವರೆಗೆ ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ; ಇದ್ದಲ್ಲಿ ಅದು ಯಾವ ಹಂತದಲ್ಲಿದೆ;

(ಇ) ಈ ನಿಟ್ಟಿನಲ್ಲಿ ಮುಂದಿನ ಆಯವ್ಯಯದಲ್ಲಿ ಸೋಲಾರ್ ಪಾರ್ಕ್ ಸ್ಥಾಪನೆಗೆ ಅನುವು ಮಾಡಿಕೊಡಲಾಗುವುದೇ ?

## ಬಳ್ಳಾರಿ ಜಿಲ್ಲೆಯಲ್ಲಿ ಹಾಳಾಗಿರುವ ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೨೬ (೮೩೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿನ ರಸ್ತೆಗಳು ಸಂಪೂರ್ಣ ಹಾಳಾಗಿದ್ದು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಆ) ಸದರಿ ರಸ್ತೆಗಳ ಅಭಿವೃದ್ಧಿಗಾಗಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಕಾಮಗಾರಿವಾರು ವಿವರ ನೀಡುವುದು)

(ಇ) ಆ ಪೈಕಿ ಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಈ) ಅಪೂರ್ಣಗೊಂಡ ಕಾಮಗಾರಿಗಳನ್ನು ಪೂರ್ಣಗೊಳಿಸಲು ಮತ್ತು ಹಾಳಾದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಯಾವ ಕಾಲಮಿತಿ ಯೊಳಗೆ ಕ್ರಮ ಕೈಗೊಳ್ಳಲಾಗುವುದು?

## ನಿರಂತರ ಜ್ಯೋತಿ ಯೋಜನೆ ಅನುಷ್ಠಾನ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೭೨೭ (೮೩೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನಿರಂತರ ಜ್ಯೋತಿ ಯೋಜನೆಯು ಯಾವ ದಿನಾಂಕದಿಂದ ಜಾರಿಗೆ ಬಂದಿದೆ ;

(ಆ) ಈ ಯೋಜನೆಯ ರೂಪು ರೇಷೆಗಳೇನು ;

(ಇ) ಈ ಯೋಜನೆಯಡಿ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕುಗಳು ಆಯ್ಕೆಯಾಗಿವೆ ;

(ಈ) ಈ ಯೋಜನೆಯಡಿ ಇಲ್ಲಿಯವರೆಗೆ ಖರ್ಚು ಮಾಡಿದ ಅನುದಾನವೆಷ್ಟು ?



## ಆಹಾರ ಸಂಸ್ಕರಣೆ ಪಾರ್ಕ್‌ನಿಂದ ರೈತರಿಗಾಗುವ ಲಾಭಗಳು

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೭೨೮ (೮೩೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಸಹಭಾಗಿತ್ವದಲ್ಲಿ ತುಮಕೂರಿನಲ್ಲಿ ಆಹಾರ ಸಂಸ್ಕರಣೆ ಪಾರ್ಕ್‌ನ್ನು ಯಾವಾಗ ಸ್ಥಾಪಿಸಲಾಗಿದೆ ;

(ಆ) ಅದು ಯಾವ ದಿನಾಂಕದಿಂದ ರೈತರಿಂದ ಕಚ್ಚಾ ವಸ್ತುಗಳನ್ನು ಖರೀದಿಸಲು ಆರಂಭಿಸಿದೆ ;

(ಇ) ಈ ಆಹಾರ ಸಂಸ್ಕರಣೆ ಪಾರ್ಕ್ ಸ್ಥಾಪನೆಯಿಂದ ಸ್ಥಳೀಯ ರೈತರಿಗೆ ಸಿಗುವ ಆರ್ಥಿಕ ಲಾಭಗಳೇನು ;

(ಈ) ಈ ಪಾರ್ಕ್ ಸ್ಥಾಪನೆಗೆ ಸರ್ಕಾರ ನೀಡಿದ ಸಹಾಯ ಹಾಗೂ ಸವಲತ್ತುಗಳಾವುವು ?

## ಅಂತರ್ ಇಲಾಖಾ ಪರಿಶೀಲನಾ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೭೨೯ (೮೩೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಸಂಘಗಳು, ಸಹಕಾರ ಬ್ಯಾಂಕುಗಳು, ವಾಣಿಜ್ಯ ಬ್ಯಾಂಕುಗಳು ಮತ್ತು ಗ್ರಾಮೀಣ ಬ್ಯಾಂಕುಗಳಿಂದ ರೈತರ ಸಾಲ

ಮನ್ನಾ ಕುರಿತು ಅಂತರ್ ಇಲಾಖಾ ಪರಿಶೀಲನಾ ಸಮಿತಿಯನ್ನು ಸರ್ಕಾರ ರಚಿಸಿದೆಯೇ ;

(ಆ) ಈ ಕುರಿತು ಸರ್ಕಾರದ ಆದೇಶವನ್ನು ಯಾವಾಗ ಹೊರಡಿಸಲಾಗಿದೆ ; ಅದರ ಸದಸ್ಯರು ಯಾರು ಯಾರು ;

(ಇ) ಅಂತರ್ ಇಲಾಖಾ ಸಮಿತಿಯು ಇಲ್ಲಿಯವರೆಗೆ ಎಷ್ಟು ಸಭೆಗಳನ್ನು ನಡೆಸಿದೆ ;

(ಈ) ಸದರಿ ಸಮಿತಿಯು ರೈತರ ಸಾಲಮನ್ನಾ ಕುರಿತು ಮಾಡಿರುವ ಶಿಫಾರಸ್ಸುಗಳೇನು ;

(ಉ) ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಸೋಲಾರ್ ದೀಪ ಹಾಗೂ ಹೈಮಾಸ್ಕ್ ಅಳವಡಿಕೆ ಬಗ್ಗೆ

**ಶ್ರೀ ಶ್ರೀನಿವಾಸ ಮಾನೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩೦ (೮೨೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಸೋಲಾರ್ ದೀಪ ಹಾಗೂ ಹೈಮಾಸ್ಕ್ ಅಳವಡಿಕೆಗೆ ಅನುದಾನ ಬಿಡುಗಡೆ ಮಾಡಲು ಈ ಮೊದಲು ಕಾನೂನಿನಲ್ಲಿ ಅವಕಾಶವಿತ್ತೇ;



(ಆ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಸೋಲಾರ್ ದೀಪ ಹಾಗೂ ಹೈಮಾಸ್ಕ್ ದೀಪ ಅಳವಡಿಕೆಗೆ ಅನುದಾನ ನೀಡದಿರಲು ಸರ್ಕಾರದಿಂದ ಯಾವುದಾದರೂ ಆದೇಶ ನೀಡಲಾಗಿದೆಯೇ ;

(ಇ) ಆದೇಶ ನೀಡಿದ್ದಲ್ಲಿ, ಇದಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ ಕೃಷಿ ಪ್ರದೇಶವು ಕಡಿಮೆಯಾಗುತ್ತಿರುವ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೧ (೭೬೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕೃಷಿ ಪ್ರದೇಶವೆಷ್ಟು ; (ಅವುಗಳಲ್ಲಿ ಆಹಾರ ಮತ್ತು ವಾಣಿಜ್ಯ ಬೆಳೆಗಳನ್ನು ಬೆಳೆಯುವ ಪ್ರದೇಶಗಳನ್ನು ಪ್ರತ್ಯೇಕವಾಗಿ ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಆಹಾರ ಬೆಳೆಗಳನ್ನು ಬೆಳೆಯುವ ರೈತರು ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕಾರಣಗಳೇನು ; ಇದನ್ನು ತಡೆಗಟ್ಟಲು ಸರ್ಕಾರದ ಕ್ರಮಗಳೇನು ;

(ಇ) ಆಹಾರ ಬೆಳೆಗಳನ್ನು ಬೆಳೆಯಲು ಇಲಾಖೆಯಲ್ಲಿನ ಪ್ರೋತ್ಸಾಹದಾಯಕ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಈ) ಆಹಾರ ಬೆಳೆಗಳಿಗೆ ಬೆಂಬಲ ಬೆಲೆಯನ್ನು ನೀಡಲಾಗುತ್ತಿದೆಯೇ ; ನೀಡಲಾಗುತ್ತಿದ್ದಲ್ಲಿ ? (ಬೆಳೆವಾರು ವಿವರ ನೀಡುವುದು)

## ಸರ್ಕಾರಿ ಕಟ್ಟಡಗಳಲ್ಲಿ ವಿದ್ಯುತ್ ಉಳಿತಾಯ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೨ (೭೬೭) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಕಟ್ಟಡಗಳಲ್ಲಿ ವಿದ್ಯುತ್ ಉಳಿತಾಯಕ್ಕೆ ಮಾಡಿಕೊಂಡಿರುವ ಮಾರ್ಗೋಪಾಯಗಳೇನು ; (ವಿವರ ನೀಡುವುದು)

(ಆ) ಸರ್ಕಾರಿ ಕಟ್ಟಡಗಳ ಟ್ಯೂಬ್‌ಲೈಟ್‌ನ ಚೋಕ್‌ಗಳನ್ನು ಬದಲಿಸಲು ಯೋಜನೆಗಳೇನಾದರು ಇವೆಯೇ ; ಇದ್ದರೆ ಕಾರಣಗಳೇನು ; (ವಿವರ ನೀಡುವುದು)

(ಇ) ಸರ್ಕಾರಿ ಕಟ್ಟಡಗಳಲ್ಲಿ ಸೌರಶಕ್ತಿಯನ್ನು ಉಪಯೋಗಿಸಿಕೊಂಡು ಬಳಸಲು ಪ್ರಸ್ತಾಪಗಳೇನಾದರೂ ಇದೆಯೇ ? (ವಿವರಗಳನ್ನು ನೀಡುವುದು)

## ವಿದ್ಯುತ್ ಸರಬರಾಜು ಕಂಪನಿಯಲ್ಲಿ ಹುದ್ದೆಗಳ ನೇಮಕಾತಿ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೩೩ (೬೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿದ್ಯುತ್ ಸರಬರಾಜು ಕಂಪನಿಗಳು ಯಾವುವು ; (ಮಾಹಿತಿ ನೀಡುವುದು) ;



(ಆ) ಇತ್ತೀಚೆಗೆ ಈ ಯಾವ ಯಾವ ಕಂಪನಿಯಲ್ಲಿ ಯಾವ ಯಾವ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲಾಗಿದೆ ; (ಸದರಿ ಹುದ್ದೆಗಳಿಗೆ ಆಯ್ಕೆಯಾದವರ ಹೆಸರು ಅವರು ಪಡೆದ ಶೇಕಡಾವಾರು ಅಂಕಗಳ ವಿವರ ಒದಗಿಸುವುದು)

(ಇ) ಕರ್ನಾಟಕ ಪವರ್ ಕಾರ್ಪೋರೇಷನ್‌ನಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ? (ಹುದ್ದೆವಾರು ಹೆಸರು ಮತ್ತು ಅವರುಗಳ ಶೇಕಡಾವಾರು ಅಂಕಗಳೊಂದಿಗೆ ವಿವರ ಒದಗಿಸುವುದು)

## ಕೆ.ಸಿ.ಸಿ. ಬ್ಯಾಂಕ್ ಲಿ, ಧಾರವಾಡಗೆ ಸಂಬಂಧಿಸಿದಂತೆ ವಿಚಾರಣೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೭೩೪ (೬೬೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಸಿ.ಸಿ. ಬ್ಯಾಂಕ್ ಲಿ. ಧಾರವಾಡ ಇವರು ಮೆ॥ ವರದಾ ಶುಗರ್ಸ್ ಡಂಬರಮತ್ತೂರು ಈ ಸಂಸ್ಥೆಗೆ ರೂ. ೨೫೭.೧೧ ಲಕ್ಷ ಸಾಲ ಮಂಜೂರು ಮಾಡಿ ಈಗ ಈ ಸಂಸ್ಥೆ ರೂ. ೧೧೦೮.೨೫ ಲಕ್ಷ ಸುಸ್ತಿಯಾಗಿದ್ದು, ಈ ಹಣ ವಸೂಲು ಮಾಡಲು ಇರುವ ತೊಂದರೆಗಳೇನು ;

(ಆ) ಸರ್ಕಾರಕ್ಕೆ ಬರುವ ಹಣ ವಸೂಲು ಮಾಡುವ ಈ ಪ್ರಕ್ರಿಯೆ ವಿವಿಧ ಹಂತದಲ್ಲಿ ಜಂಟಿ ನಿಬಂಧಕರ ನ್ಯಾಯಾಲಯದಲ್ಲಿ ಉದ್ದೇಶಪೂರ್ವಕವಾಗಿ ಮುಂದೂಡಲ್ಪಡುತ್ತಿದ್ದು ವಿವಿಧ ಹಂತದಲ್ಲಿ

ವಸೂಲಿ ಪ್ರಕರಣಕ್ಕೆ ಕೋರ್ಟ್ ನೆಪ ಹೇಳಿ ವಸೂಲಿ ಕಾರ್ಯ ವಿಳಂಬವಾಗುತ್ತಿದ್ದು, ಆದರೂ ರಿವೈವಲ್ ಫಂಡ್ ಎಂದು ೨೫ ಕೋಟಿ ನೀಡಿರುವುದರ ಉದ್ದೇಶವೇನು;

(ಇ) ಸರ್ಕಾರ ಮಧ್ಯ ಪ್ರವೇಶಿಸಿ ಈ ಎಲ್ಲ ಮೊತ್ತ ಸಂಪೂರ್ಣವಾಗಿ ವಸೂಲಿ ಮಾಡಲು ಮುಂದಾಗುವುದೇ;

(ಈ) ಒಂದೊಂದು ಕೇಸು ನಡೆಸಲು ೨೦ ವರ್ಷ ಕಳೆದರೂ ಪ್ರಕರಣಗಳು ಇತ್ಯರ್ಥವಾಗದಿರುವುದರ ಬಗ್ಗೆ ಸರ್ಕಾರದ ನಿಲುವೇನು; ಕೆ.ಸಿ.ಸಿ. ಬ್ಯಾಂಕ್ ಲಿ. ಧಾರವಾಡ ಇಲ್ಲಿ ಎಷ್ಟು ನಿರ್ದೇಶಕರುಗಳನ್ನು ಅನರ್ಹಗೊಳಿಸಲು ಪ್ರಕರಣ ದಾಖಲಾಗಿದೆ; ಇವರು ಇನ್ನೂ ಯಾವ ಯಾವ ಸಂಸ್ಥೆ, ಸೊಸೈಟಿಯಲ್ಲಿ ನಿರ್ದೇಶಕರಾಗಿದ್ದಾರೆ;

(ಉ) ವಿಚಾರಣೆ ಉದ್ದೇಶಪೂರ್ವಕವಾಗಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರದ ಮುಂದಿನ ನಿಲುವೇನು ?

**ಕೃಷಿ ಪಂಪ್‌ಸೆಟ್‌ದಾರರಿಗೆ ಸೋಲಾರ್ ವಿದ್ಯುತ್ ಅಳವಡಿಸುವ ಬಗ್ಗೆ**

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೫ (೬೫೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಕೃಷಿ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್ ವ್ಯವಸ್ಥೆ ಅಳವಡಿಸುವ ಉದ್ದೇಶ ಸರ್ಕಾರಕ್ಕಿದೆಯೇ ;



(ಆ) ಇದ್ದಲ್ಲಿ, ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಇರುವ ಕೃಷಿ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು ?

**ಹೆದ್ದಾರಿಯ ಟೋಲ್ ಸಂಗ್ರಹ ಸ್ಥಳದಲ್ಲಿ ಸರ್ವೀಸ್ ರಸ್ತೆ ನಿರ್ಮಾಣ**

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೩೬ (೮೪೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೆದ್ದಾರಿ ರಸ್ತೆಗಳ ಟೋಲ್ ಸಂಗ್ರಹಗಳಲ್ಲಿ ವಸೂಲಿ ಮಾಡುವ ದುಬಾರಿ ಶುಲ್ಕಗಳಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಟೋಲ್ ದರ ನಿಗದಿಪಡಿಸಲು ಇರುವ ಮಾನದಂಡವೇನು ;

(ಇ) ತುಮಕೂರು ರಸ್ತೆಯ ಟೋಲ್ ಸಂಗ್ರಹ ಸ್ಥಳದಲ್ಲಿ ಸರ್ವೀಸ್ ರಸ್ತೆ ನಿರ್ಮಿಸಿರುವ ಮಾದರಿಯಲ್ಲಿ ದೇವನಹಳ್ಳಿ ರಸ್ತೆಯ ಟೋಲ್ ಸಂಗ್ರಹ ಮಾಡುವ ಸ್ಥಳದಲ್ಲಿ ಸರ್ವೀಸ್ ರಸ್ತೆ ನಿರ್ಮಾಣ ಮಾಡಲು ಸರ್ಕಾರಕ್ಕಿರುವ ತೊಂದರೆಯೇನು ?

## ವಕ್ಫ್ ಬೋರ್ಡಿನ ಆಸ್ತಿ

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೮೪೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ವಕ್ಫ್ ಆಸ್ತಿಯ ಪ್ರಮಾಣ ಎಷ್ಟು; ವಿಧಾನ ಸಭಾ ಕ್ಷೇತ್ರವಾರು ಮಾಹಿತಿಯನ್ನು ನೀಡುವುದು;

(ಆ) ವಕ್ಫ್ ಆಸ್ತಿಯನ್ನು ಬಾಡಿಗೆಗೆ/ಭೋಗ್ಯಕ್ಕೆ ನೀಡುವಾಗ ಮಂಡಳಿಯು ಅನುಸರಿಸುವ ಮಾನದಂಡಗಳೇನು;

(ಇ) ವಕ್ಫ್ ಆಸ್ತಿಯಿಂದ ಬೋರ್ಡಿಗೆ ಸಂದಾಯವಾಗುತ್ತಿರುವ ಆದಾಯ ಎಷ್ಟು; ಆಸ್ತಿಯನ್ನು ಸಂರಕ್ಷಿಸಲು ಕಳೆದ ೨ ವರ್ಷಗಳಲ್ಲಿ ಖರ್ಚು ಮಾಡಿರುವ ವೆಚ್ಚವೆಷ್ಟು;

(ಈ) ವಕ್ಫ್ ಬೋರ್ಡಿಗೆ ಸಂಬಂಧಿಸಿದ ಒತ್ತುವರಿಯಾಗಿರುವ ಆಸ್ತಿಯ ಪ್ರಮಾಣ ಎಷ್ಟು;

(ಉ) ಇದಕ್ಕೆ ಸಂಬಂಧಿಸಿದ ವ್ಯಕ್ತಿ/ಸಂಸ್ಥೆಗಳು ಯಾವುದು?



## ಹೆದ್ದಾರಿಗಳ ಸುಧಾರಣೆಗೆ ಬಿಡುಗಡೆ ಮಾಡಿರುವ ಹಣ

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೮ (೮೪೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಹಾಗೂ ಗ್ರಾಮೀಣ ಜಿಲ್ಲೆಗಳಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ಎಷ್ಟು ಕಿ.ಮೀ., ವ್ಯಾಪ್ತಿಯನ್ನು ಹೊಂದಿವೆ ; ಅವು ಯಾವುವು ;

(ಆ) ಇವುಗಳಿಗೆ ಸಂಬಂಧಿಸಿದಂತೆ ೨ ವರ್ಷಗಳಲ್ಲಿ ಹೆದ್ದಾರಿಗಳ ಸುಧಾರಣೆಗೆ ಬಿಡುಗಡೆ ಮಾಡಿರುವ ಹಣವೆಷ್ಟು;

(ಇ) ರಸ್ತೆಗಳ ಸುಧಾರಣೆಗಾಗಿ ಬಿಡುಗಡೆಯಾದ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇದಕ್ಕೆ ಕಾರಣವೇನು ? (ಬಿಡುಗಡೆಯಾದ ಮತ್ತು ಖರ್ಚಾದ ಮೊತ್ತದ ವಿವರ ನೀಡುವುದು)

## ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರಿ ಸಂಘಗಳ ನಿವೇಶನ ನೀಡಿಲ್ಲದಿರುವುದು

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೯ (೮೪೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ನೋಂದಣಿಗೊಂಡಿರುವ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು ;

(ಆ) ಸದರಿ ಸಹಕಾರಿ ಸಂಘಗಳಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ;

(ಇ) ಸದರಿ ಸಹಕಾರಿ ಸಂಘಗಳಿಗೆ ಮಂಜೂರಾತಿ ನೀಡಿರುವ ಜಮೀನುಗಳ ಪ್ರಮಾಣವೆಷ್ಟು ; (೫ ವರ್ಷಗಳ ಅವಧಿಯ ವಿವರಗಳನ್ನು ಸಹಕಾರಿ ಸಂಘಗಳ ಹೆಸರು ಸಮೇತ ನೀಡುವುದು)

(ಈ) ೫ ವರ್ಷಗಳ ಹಿಂದೆ ನಿವೇಶನಕ್ಕಾಗಿ ಪೂರ್ಣ ಹಣವನ್ನು ಕಟ್ಟಿಸಿಕೊಂಡು ಇದುವರೆವಿಗೂ ನಿವೇಶನಗಳನ್ನು ನೀಡಿಲ್ಲದಿರುವ ಸಂಘಗಳು ಎಷ್ಟು ?

## ಕೃಷಿ ಇಲಾಖೆಯ ಹನಿ ನೀರಾವರಿ ಅಳವಡಿಸಿದ ವಿವರಗಳು

**ಶ್ರೀ ಡಿ.ಯು. ಮಲ್ಲಿಕಾರ್ಜುನ (ವಿಧಾನಸಭೆಯಿಂದ ಚುನಾಯಿತರಾದವರು):–**

೭೪೦ (೮೪೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಿಂದ ೨೦೧೨–೧೩ ಮತ್ತು ೨೦೧೩–೧೪ನೇ ಆಯವ್ಯಯದಲ್ಲಿ ಹನಿ ನೀರಾವರಿ ಯೋಜನೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಿಗದಿಪಡಿಸಿದ ಸಹಾಯಧನವೆಷ್ಟು ; ಒದಗಿಸಲಾದ ಅನುದಾನ ಎಷ್ಟು ; ಖರ್ಚಾದ ಹಣವೆಷ್ಟು ;

(ಆ) ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಗಳಿಂದ ಹನಿ ನೀರಾವರಿಗಾಗಿ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಈ ಪೈಕಿ ಈಗಾಗಲೇ ಹನಿ ನೀರಾವರಿ ಪದ್ಧತಿ ಅಳವಡಿಸಿರುವ ರೈತರ ಸಂಖ್ಯೆ ಎಷ್ಟು ; ಎಷ್ಟು ಎಕರೆ ಪ್ರದೇಶಕ್ಕೆ ಹನಿ ನೀರಾವರಿ ಸೌಲಭ್ಯ ಅಳವಡಿಸಲಾಗಿದೆ ;



(ಇ) ಹನಿ ನೀರಾವರಿಗಾಗಿ ಅರ್ಜಿ ಸಲ್ಲಿಸಿದವರೆಲ್ಲರಿಗೂ ಮಂಜೂರು ಮಾಡದಿರಲು ಕಾರಣವೇನು ?

## ಅಲ್ಪಸಂಖ್ಯಾತರ ಫಲಾನುಭವಿಗಳು

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೭೪೧ (೬೫೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೨ ರಿಂದ ೨೦೧೫ರ ಸಾಲಿನವರೆಗೆ ಕ್ರಿಶ್ಚಿಯನ್ ಅಭಿವೃದ್ಧಿ ನಿಧಿಯಿಂದ ವಿವಿಧ ಯೋಜನೆಯಡಿ ಗುರುತಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕ್ರಿಶ್ಚಿಯುನ್ ಅಭಿವೃದ್ಧಿ ನಿಧಿ ಬಿಟ್ಟು, ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಈ ಮೇಲಿನ ಸಾಲಿನಲ್ಲಿ ವಿವಿಧ ಯೋಜನೆಯಡಿ ಸೌಲಭ್ಯ ಪಡೆದುಕೊಂಡ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್ ಹಾಗೂ ಇನ್ನಿತರ ಅಲ್ಪಸಂಖ್ಯಾತರ ಫಲಾನುಭವಿಗಳ ಸಂಖ್ಯೆ ಎಷ್ಟು ? (ವರ್ಷವಾರು, ಜಾತಿವಾರು, ಜಿಲ್ಲಾವಾರು, ತಾಲ್ಲೂಕುವಾರು, ಫಲಾನುಭವಿಗಳ ಮಾಹಿತಿ ನೀಡುವುದು)

## ಪುರಸಭೆಗಳ ಮುಖ್ಯಾಧಿಕಾರಿಗಳ ಹುದ್ದೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೭೪೨ (೯೬೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪುರಸಭೆಗಳಲ್ಲಿ ಖಾಲಿ ಇರುವ ಮುಖ್ಯಾಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಪುರಸಭಾ ಮುಖ್ಯಾಧಿಕಾರಿಗಳಾಗಿ ಬೇರೆ ಬೇರೆ ಇಲಾಖೆಗಳಿಂದ ಎರವಲು ಸೇವೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ; (ಹೆಸರು, ದಿನಾಂಕ ಸಹಿತ ವಿವರ ನೀಡುವುದು)

(ಇ) ಪುರಸಭೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಯಾವ ದಿನಾಂಕದಿಂದ ಮುಖ್ಯಾಧಿಕಾರಿ ಹುದ್ದೆಗೆ ಬಡ್ತಿ ನೀಡಬೇಕಾಗಿದೆ ;

(ಈ) ಹಿರಿಯ ಆರೋಗ್ಯ ನಿರೀಕ್ಷಕರಿಂದ ಮುಖ್ಯಾಧಿಕಾರಿ ಹುದ್ದೆಗೆ ಬಡ್ತಿ ಮೂಲಕ ತುಂಬಬೇಕಾದ ಹುದ್ದೆಗಳ ಸಂಖ್ಯೆ ಎಷ್ಟು ;

(ಉ) ಹಿರಿಯ ಆರೋಗ್ಯ ನಿರೀಕ್ಷಕರಿಗೆ ಇದುವರೆವಿಗೆ ಬಡ್ತಿ ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಊ) ಯಾವ ಕಾಲಮಿತಿಯಲ್ಲಿ ಸದರಿಯವರಿಗೆ ಬಡ್ತಿ ನೀಡಲಾಗುವುದು ?



## ಭೂಚೇತನ ಯೋಜನೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೭೪೩ (೯೬೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಹಾಗೂ ೨೦೧೪–೧೫ನೇ ಸಾಲಿನಲ್ಲಿ ಭೂಚೇತನ ಯೋಜನೆಯಡಿ ರೈತ ಸಂಪರ್ಕ ಕೇಂದ್ರದಿಂದ ಸ್ಥಳೀಯ ಗ್ರಾಮೀಣ ಗೋದಾಮುಗಳಿಗೆ ಕೃಷಿ ಪರಿಕರಗಳನ್ನು ಸಾಗಿಸಲು ಭರಿಸಿರುವ ಸಾಗಾಣಿಕೆ ವೆಚ್ಚವೆಷ್ಟು ; (ಮಂಡ್ಯ, ಮೈಸೂರು, ಹಾಸನ, ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ರೈತ ಸಂಪರ್ಕ ಕೇಂದ್ರದಿಂದ ಸ್ಥಳೀಯ ಗ್ರಾಮೀಣ ಗೋದಾಮುಗಳಿಗೆ ಸಾಗಾಣಿಕೆ ಮಾಡಿರುವ ಕೃಷಿ ಪರಿಕರಗಳ ಹೆಸರು, ಪ್ರಮಾಣ ಮತ್ತು ಸಾಗಾಣಿಕೆ ದಿನಾಂಕ, ಸಾಗಾಣಿಕೆ ಮಾಡಿದ ವಾಹನದ ವಿವರಗಳನ್ನು ನೀಡುವುದು ;

(ಇ) ಸಾಗಾಣಿಕೆ ಮಾಡಲಾದ ಕೃಷಿ ಪರಿಕರಗಳನ್ನು ದಾಸ್ತಾನು ಮಾಡಲು ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುವ ಗೋದಾಮುಗಳ ವಿಳಾಸ ಹಾಗೂ ಗೋದಾಮಿನ ಸಾಮರ್ಥ್ಯ ಮತ್ತು ಪಾವತಿಸಲಾಗುವ ಬಾಡಿಗೆ ಮೊತ್ತವೆಷ್ಟು ;

(ಈ) ಸರಬರಾಜುದಾರರೇ ನೇರವಾಗಿ ಗ್ರಾಮೀಣ ಗೋದಾಮುಗಳಿಗೆ ಕೃಷಿ ಪರಿಕರಗಳನ್ನು ಸರಬರಾಜು ಮಾಡುತ್ತಿದ್ದರೂ ಸಹ ರೈತ

ಸಂಪರ್ಕ ಕೇಂದ್ರದಿಂದ ಗ್ರಾಮೀಣ ಗೋದಾಮುಗಳಿಗೆ ಸಾಗಾಣಿಕೆ ಮಾಡುತ್ತಿದ್ದೇವೆಂದು ತಿಳಿಸಿ, ಹಣ ಕ್ಲೇಮು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿಶೇಷ ಘಟಕ ಯೋಜನೆಯಡಿ ಸಹಾಯ ಧನ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೭೪೪ (೮೯೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ವಿಶೇಷ ಘಟಕ ಯೋಜನೆಯಡಿ ಸಹಾಯಧನ (ಶೇಕಡ ೬೦) ಮಂಜೂರು ಮಾಡಬೇಕಾದ ಫಲಾನುಭವಿಗಳಿಗೆ ಸಂಖ್ಯೆ ಎಷ್ಟು ;

(ಆ) ಸದರಿ ಫಲಾನುಭವಿಗಳಿಗೆ ನೀಡಬೇಕಾದ ಸಹಾಯಧನದ ಮೊತ್ತವೆಷ್ಟು ;

(ಇ) ಸಹಾಯಧನವನ್ನು ಇದುವರೆವಿಗೆ ಪಾವತಿಸದಿರಲು ಕಾರಣಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಸದರಿ ಸಹಾಯಧನವನ್ನು ಪಾವತಿಸಲಾಗುವುದು ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂ–59/ಕಾ.ಸೂ. 03492/1000 ಪ್ರತಿಗಳು/07–02–2014